ಸಂಪುಟ: 06 ಸಂಚಿಕೆ: 163 ಪುಟಗಳು: 08 ಮಂಗಳವಾರ 25 ಆಗಸ್ಟ್ 2026 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಇತರರಿಗೆ ಒಳಿತನ್ನುಂಟು ಮಾಡಬಲ್ಲ ಸುಳ್ಳು, ತೊಡಕುಂಟು ಮಾಡಬಹುದಾದ ಸತ್ಯಕ್ಕಿಂತ ಶ್ರೇಷ್ಠ. ಮಾತಿನಲ್ಲಿ ಒಳಿತು ಕೆಡುಕುಗಳ ವಿವೇಚನೆಯಿರಲಿ.

## 24,315 ಬಿಪಿಎಲ್ ಕಾರ್ಡ್ ಫಲಾನುಭವಿಗಳು ಸಂದೇಹಾಸ್ಪದ : ಜಿ.ಪರಮೇಶ್ವರ್

• ಉದಯವಾಹಿನಿ, ಬೆಂಗಳೂರು



ರಾಜ್ಯದಲ್ಲಿ 24,315 ಬಿಪಿಎಲ್ ಕಾರ್ಡ್ ಫಲಾನುಭವಿಗಳನ್ನು ಸಂದೇಹಾಸ್ಪದ ಎಂದು ಗುರುತಿಸಲಾಗಿದೆ ಎಂದು ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ. ವಿಧಾನಸಭೆಯ ಪ್ರಶ್ನೋತ್ತರ ಅವಧಿಯಲ್ಲಿ ಬಿಜೆಪಿ ಶಾಸಕರು ಸಭಾಧ್ಯಕ್ಷರ ಪೀಠದ ಮುಂದಿನ ಬಾವಿಗಿಳಿದು ಧರಣಿ ನಡೆಸಿದ ಹಿನ್ನೆಲೆಯಲ್ಲಿ ವಿರೋಧ ಪಕ್ಷದ ಶಾಸಕರು ಪ್ರಶ್ನೋತ್ತರ ಕಲಾಪದಲ್ಲಿ ಭಾಗವಹಿಸಲಿಲ್ಲ. ಆದರೂ ಸಂಬಂಧಿಸಿದ ಪ್ರಶ್ನೆಗಳಿಗೆ ಸರ್ಕಾರದ ಪರವಾಗಿ ಉತ್ತರಗಳನ್ನು ಮಂಡಿಸಲಾಯಿತು. ರಾಜಾಜಿನಗರ ಶಾಸಕ ಎಸ್. ಸುರೇಶ್ ಕುಮಾರ್ ಅವರ ಪ್ರಶ್ನೆಗೆ ಉತ್ತರಿಸಿದ ಉಪಮುಖ್ಯಮಂತ್ರಿಯವರು, 2026ರ ಜುಲೈ ವೇಳೆಗೆ 5,607 ಫಲಾನುಭವಿಗಳಿಗೆ ಮಾಸಿಕ ಪಿಂಚಣಿ ಪಾವತಿಸಲಾಗಿದೆ ಎಂದು ವಿವರಿಸಿದರು. ಕುಟುಂಬದ ಆದಾಯದ ಮಿತಿಯನ್ನು 32 ಸಾವಿರ ರೂ.ಗೆ ಹೆಚ್ಚಿಸುವ ಪ್ರಸ್ತಾವನೆ ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿದೆ ಎಂದು ತಿಳಿಸಿದರು. ಸಂದೇಹಾಸ್ಪದ ಪ್ರಕರಣಗಳ ಕುರಿತು ಗ್ರಾಮ ಲೆಕ್ಕಾಧಿಕಾರಿ ಹಂತದಲ್ಲಿ 23,671 ಪ್ರಕರಣಗಳಲ್ಲಿ ಕ್ರಮ ಕೈಗೊಳ್ಳಲಾಗಿದೆ.

ಈ ಪೈಕಿ 3,240 ಪ್ರಕರಣಗಳನ್ನು ಮುಂದುವರಿಸಲಾಗಿದ್ದು, 20,431 ಪ್ರಕರಣಗಳಲ್ಲಿ ಸೇವೆ ಸ್ಥಗಿತಗೊಳಿಸಲಾಗಿದೆ. ಅಲ್ಲದೆ, 3,816 ಪ್ರಕರಣಗಳಲ್ಲಿ ಫಲಾನುಭವಿಗಳು ಲಭ್ಯವಿಲ್ಲ ಎಂದು ತಿಳಿಸಿದರು. ಇನ್ನು 14,493 ಫಲಾನುಭವಿಗಳು ಅಗತ್ಯ ದಾಖಲೆಗಳನ್ನು ಸಲ್ಲಿಸಲು ಸಿದ್ಧರಿಲ್ಲ.

595 ಫಲಾನುಭವಿಗಳು ಆದಾಯ ಪ್ರಮಾಣಪತ್ರವನ್ನು ಒದಗಿಸಿಲ್ಲ ಎಂದು ವಿವರಿಸಿದರು. ತಹಸೀಲ್ದಾರ್ ಹಂತದಲ್ಲಿ 2,367 ಪ್ರಕರಣಗಳನ್ನು ಮುಂದುವರಿಸಲಾಗಿದ್ದು, 325 ಪ್ರಕರಣಗಳಲ್ಲಿ ಸೌಲಭ್ಯವನ್ನು ರದ್ದುಗೊಳಿಸಲಾಗಿದೆ.

> ಒಟ್ಟು 21,623 ಅರ್ಜಿಗಳು ಬಾಕಿ ಉಳಿದಿವೆ ಎಂದು ಉಪಮುಖ್ಯಮಂತ್ರಿ ಮಾಹಿತಿ ನೀಡಿದರು. ಪ್ರಶ್ನೆಗಳಿಗೆ ಸರ್ಕಾರದ ಪರವಾಗಿ ಉತ್ತರಗಳನ್ನು ಮಂಡಿಸಲಾಯಿತು. ಅರ್ಹತಾ ಮಾನದಂಡಗಳನ್ನು ಹೊಂದದೆ ಪಿಂಚಣಿ ಪಡೆಯುತ್ತಿರುವ ಫಲಾನುಭವಿಗಳ ಕುರಿತು ದೂರುಗಳು ಬಂದ ಹಿನ್ನೆಲೆಯಲ್ಲಿ, ಕುಟುಂಬ ದತ್ತಾಂಶದಿಂದ ಪಡೆದ ಮಾಹಿತಿಯ ಆಧಾರದ ಮೇಲೆ ಆದಾಯ ಮಿತಿ ಸೇರಿದಂತೆ ಇತರೆ ಅರ್ಹತಾ ಮಾನದಂಡಗಳನ್ನು ಪರಿಶೀಲಿಸಲಾಗುತ್ತಿದೆ. ಡಾ. ಜಿ. ಪರಮೇಶ್ವರ್

## ಸ್ವಚ್ಛಗೊಳಿಸಬೇಕಾದ ಖಾಲಿ ನಿವೇಶನಗಳಿಗೆ ನೋಟಿಸ್ ಅಂಟಿಸಿ: ಕೃಷ್ಣ ಬೈರೇಗೌಡ

• ಉದಯವಾಹಿನಿ, ಬೆಂಗಳೂರು

ನಗರದ ಐದೂ ನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ಸ್ವಚ್ಛಗೊಳಿಸಬೇಕಾದ ಖಾಲಿ ನಿವೇಶನಗಳನ್ನು ಗುರುತಿಸಿ, ಅವುಗಳಿಗೆ ನೋಟಿಸ್ ಅಂಟಿಸಿ, ತ್ವರಿತವಾಗಿ ಸ್ವಚ್ಛತಾ ಕಾರ್ಯ ಕೈಗೊಳ್ಳುವಂತೆ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವರಾದ ಕೃಷ್ಣ ಬೈರೇಗೌಡ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು. ನಗರದಲ್ಲಿ ಖಾಲಿ ನಿವೇಶನಗಳ ಸ್ವಚ್ಛತಾ ಕಾರ್ಯ ಕೈಗೊಳ್ಳುವ ಕುರಿತು ಸೋಮವಾರ ನಡೆದ ವರ್ಚುವಲ್ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಖಾಲಿ ನಿವೇಶನಗಳ ಮಾಲೀಕರು ಸ್ವತಃ ಸ್ವಚ್ಛತಾ ಕಾರ್ಯ ಕೈಗೊಳ್ಳಲು ಆಗಸ್ಟ್ 22ರವರೆಗೆ ಗಡುವು ನೀಡಲಾಗಿತ್ತು.

ಆದರೆ, ಈ ಪೈಕಿ ಕೆಲವೇ ಪ್ರದೇಶಗಳಲ್ಲಿ ಶೇ.20ರಷ್ಟು ನಿವೇಶನಗಳ ಮಾಲೀಕರು ಮಾತ್ರ ಸ್ವತಃ ಸ್ವಚ್ಛತಾ ಕಾರ್ಯ ಕೈಗೊಂಡಿದ್ದಾರೆ. ಎಲ್ಲಾ ಖಾಲಿ ನಿವೇಶನಗಳಲ್ಲಿಯೂ ಪರಿಣಾಮಕಾರಿಯಾಗಿ ಸ್ವಚ್ಛತಾ ಕಾರ್ಯ ಕೈಗೊಳ್ಳಬೇಕಿದ್ದು, ಈ ನಿಟ್ಟಿನಲ್ಲಿ ಐದೂ ನಗರ ಪಾಲಿಕೆಗಳಲ್ಲಿ ಅಗತ್ಯ ಸಿದ್ಧತೆಗಳನ್ನು ಮಾಡಿಕೊಂಡು ಸ್ವಚ್ಛತಾ ಕಾರ್ಯವನ್ನು ಸಕ್ರಿಯವಾಗಿ ನಡೆಸಬೇಕು. ಇದಕ್ಕೆ ತಗಲುವ ವೆಚ್ಚವನ್ನು ಆಸ್ತಿ ತೆರಿಗೆ ಮೂಲಕ ವಸೂಲಿ ಮಾಡಬೇಕು ಎಂದು ಸೂಚಿಸಿದರು. ಸ್ವಚ್ಛತಾ ಕಾರ್ಯ ಕೈಗೊಳ್ಳಬೇಕಾದ ಖಾಲಿ ನಿವೇಶನಗಳನ್ನು ಕಂದಾಯ ಅಧಿಕಾರಿಗಳು ಗುರುತಿಸಿ ಪಟ್ಟಿ ಮಾಡಬೇಕು. ಪಟ್ಟಿ ಮಾಡಲಾದ ನಿವೇಶನಗಳಿಗೆ ಮಾರ್ಷಲ್‌ಗಳು ಹಾಗೂ ಕಿರಿಯ ಆರೋಗ್ಯ ಪರಿವೀಕ್ಷಕರು ನೋಟಿಸ್ ಅಂಟಿಸಬೇಕು. ಬಳಿಕ ಪಾಲಿಕೆಯ ವತಿಯಿಂದ ನಿವೇಶನಗಳ ಸ್ವಚ್ಛತಾ ಕಾರ್ಯವನ್ನು ಕೈಗೊಳ್ಳಬೇಕು ಎಂದರು. ಇದೇ ಗುರುವಾರದಿಂದ ಎಲ್ಲಾ ನಗರ ಪಾಲಿಕೆಗಳಲ್ಲಿಯೂ ಖಾಲಿ ನಿವೇಶನಗಳ ಸ್ವಚ್ಛತಾ ಕಾರ್ಯವನ್ನು ಆರಂಭಿಸಬೇಕು. ಮತ್ತಷ್ಟು ಪರಿಣಾಮಕಾರಿಯಾಗಿ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

## ಗೊಲ್ಲ ನಿಗಮ ಸ್ಥಾಪನೆಗೆ ಸಿಎಂ ಜತೆ ಚರ್ಚೆ: ಶಿವರಾಜ್ ತಂಗಡಗಿ

• ಉದಯವಾಹಿನಿ, ಬೆಂಗಳೂರು

ಗೊಲ್ಲ ಸಮುದಾಯಕ್ಕೆ ಪ್ರತ್ಯೇಕ ಯಾದವ ನಿಗಮ ಸ್ಥಾಪಿಸುವ ಸಂಬಂಧ ಸಿಎಂ ಜೊತೆ ಚರ್ಚಿಸಿ, ನಿಗಮ ಸ್ಥಾಪನೆಗೆ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವ ಶಿವರಾಜ್ ತಂಗಡಗಿ ತಿಳಿಸಿದ್ದಾರೆ. ವಿಧಾನ ಪರಿಷತ್‌ನಲ್ಲಿ ಗಮನ ಸೆಳೆಯುವ ಸೂಚನೆಯ ಮೂಲಕ ಕಾಂಗ್ರೆಸ್ ಸದಸ್ಯ ನಾಗರಾಜ್ ಯಾದವ್ ಈ ವಿಚಾರವನ್ನು ಪ್ರಸ್ತಾಪಿಸಿದರು. ರಾಜ್ಯದಲ್ಲಿ ಗೊಲ್ಲ ಸಮುದಾಯಕ್ಕೆ ಪ್ರತ್ಯೇಕ ಯಾದವ ನಿಗಮ ಸ್ಥಾಪಿಸಬೇಕು. ಸಮುದಾಯದಲ್ಲಿ 26 ಉಪಜಾತಿಗಳಿವೆ. ನಾವು ಅತಿ ಹಿಂದುಳಿದವರು ಹಾಗೂ ಅಲೆಮಾರಿ ಸಮುದಾಯಕ್ಕೆ ಸೇರಿದವರಾಗಿದ್ದೇವೆ. ನಮ್ಮ ಸಮುದಾಯದ ಜನಸಂಖ್ಯೆ 1 ಕೋಟಿ ಇದೆ. ನಮಗೆ ಇರುವ ಮೀಸಲಾತಿ ಪ್ರಮಾಣ ಸಾಲುತ್ತಿಲ್ಲ, ಶೇ.4ರಷ್ಟು ಮೀಸಲಾತಿ ಸಾಕಾಗುತ್ತಿಲ್ಲ. 60ರಿಂದ 70 ಕ್ಷೇತ್ರಗಳಲ್ಲಿ ನಮ್ಮ ಸಮುದಾಯ ಪ್ರಬಲವಾಗಿದೆ. ಮರಾಠ, ಲಿಂಗಾಯತ, ಒಕ್ಕಲಿಗ ಸಮುದಾಯಗಳಿಗೆ ನಿಗಮ ಸ್ಥಾಪಿಸಿರುವಂತೆ ಯಾದವ ನಿಗಮವನ್ನೂ ಸ್ಥಾಪಿಸಬೇಕು. ನಮಗೆ ಪ್ರತ್ಯೇಕ ನಿಗಮ ಬೇಕು. ಸಚಿವರು ಈ ಬಗ್ಗೆ ಆಶ್ವಾಸನೆ ನೀಡಬೇಕು.

## ಬೆಂಗಳೂರಲ್ಲಿ ಭಾರತದ ಮೊದಲ ಬೀದಿನಾಯಿ ಶೆಲ್ಟರ್ ನಿರ್ಮಾಣ

• ಉದಯವಾಹಿನಿ, ಬೆಂಗಳೂರು

ಸುಪ್ರೀಂಕೋರ್ಟ್ ನಿರ್ದೇಶನದ ಬಳಿಕ ಮೊದಲ ಬಾರಿಗೆ ಬೆಂಗಳೂರಿನಲ್ಲಿ ಡಾಗ್ ಶೆಲ್ಟರ್ ನಿರ್ಮಾಣ ಆಗಿದೆ. ಉತ್ತರ ನಗರ ಪಾಲಿಕೆಯ ಮೇಡಿ ಅಗ್ರಹಾರದಲ್ಲಿ ಡಾಗ್ ಶೆಲ್ಟರ್ ನಿರ್ಮಾಣ ಆಗಿದ್ದು, 500 ನಾಯಿಗಳಿಗೆ ಆಶ್ರಯ ನೀಡುವ ಸಾಮರ್ಥ್ಯ ಹೊಂದಿದೆ. ಬೀದಿನಾಯಿಗಳಿಗೆ ಶೆಲ್ಟರ್ ನಿರ್ಮಾಣ ಮಾಡಬೇಕು ಎಂದು ಸುಪ್ರೀಂ ಕೋರ್ಟ್ ನಿರ್ದೇಶನ ಮಾಡಿತ್ತು. ಕೋರ್ಟ್ ನಿರ್ದೇಶನದ ಬಳಿಕ ಇದೇ ಮೊದಲ ಬಾರಿಗೆ ಪ್ರಥಮ ಡಾಗ್ ಶೆಲ್ಟರ್ ಬೆಂಗಳೂರು ಉತ್ತರ ನಗರ ಪಾಲಿಕೆಯ ಮೇಡಿ ಅಗ್ರಹಾರದಲ್ಲಿ ನಿರ್ಮಾಣ ಮಾಡಲಾಗಿದೆ.

2 ಕೋಟಿ ವೆಚ್ಚದಲ್ಲಿ 500 ನಾಯಿಗಳಿಗೆ ಆಶ್ರಯ ನೀಡುವ 25 ಬ್ಯಾರಕ್‌ಗಳನ್ನು ನಿರ್ಮಾಣ ಮಾಡಲಾಗಿದೆ. ಪ್ರತಿ ಬ್ಯಾರಕ್‌ನಲ್ಲಿ 20 ನಾಯಿಗಳಿಗೆ ಆಶ್ರಯ ನೀಡಬಹುದಾಗಿದೆ. ಈಗ 40 ಬೀದಿನಾಯಿಗಳನ್ನು ಹಿಡಿದು ಹೊಸ ಬೀದಿನಾಯಿ ಶೆಲ್ಟರ್‌ನಲ್ಲಿ ಆಶ್ರಯ ನೀಡಲಾಗಿದೆ.

## ಸಿಎಂ ಡಿಕೆಶಿಗೆ ಶಾಸಕ ಸುನಿಲ್ ಕುಮಾರ್ ಸವಾಲು

**ಭ್ರಷ್ಟಾಚಾರ ನಡೆದರೆ ಫೋನ್ ಮಾಡಿ ಅಂದಿದ್ರಿ, ಈಗ ಆನ್ ಮಾಡಿ ನೋಡೋಣ**

• ಉದಯವಾಹಿನಿ, ಬೆಂಗಳೂರು



ಕರ್ನಾಟಕ ವಿಧಾನಸಭೆ ಅಧಿವೇಶನದಲ್ಲಿ ಭ್ರಷ್ಟಾಚಾರದ ಆರೋಪಗಳು ಮತ್ತು ಹಣಕಾಸು ವಿಷಯಗಳ ಕುರಿತು ತೀವ್ರ ಚರ್ಚೆಗಳು ನಡೆದವು. ಅಧಿವೇಶನವನ್ನು ಒಂದು ವಾರ ವಿಸ್ತರಿಸುವ ಬಗ್ಗೆಯೂ ಪ್ರಸ್ತಾಪಿಸಲಾಯಿತು. ಈ ವೇಳೆ ಶಾಸಕ ಸುನಿಲ್ ಕುಮಾರ್ ಬಿಜೆಪಿ ಸರ್ಕಾರದ ವಿರುದ್ಧ ಭ್ರಷ್ಟಾಚಾರದ ಗಂಭೀರ ಆರೋಪಗಳನ್ನು ಮಾಡುತ್ತಾ, ಭ್ರಷ್ಟಾಚಾರವೇ ನಮ್ಮ ಮೊದಲ ಆದ್ಯತೆ ಎಂದು ಸರ್ಕಾರ ಘೋಷಿಸಿದೆ ಎಂದು ಟೀಕಿಸಿದ್ದರು. ಮುಖ್ಯಮಂತ್ರಿಗಳು ಹಿಂದೆ ಭ್ರಷ್ಟಾಚಾರ ನಡೆದರೆ ನನಗೆ ಫೋನ್ ಮಾಡಿ ಎಂದು ಹೇಳಿದ್ದನ್ನು ಉಲ್ಲೇಖಿಸಿ, ಈಗ ಒಂದು ಫೋನ್ ಆನ್ ಮಾಡಿ ನೋಡಲು ಸವಾಲು ಹಾಕಿದರು. ವಾಲ್ಮೀಕಿ ಹಗರಣಕ್ಕೆ ಸಂಬಂಧಿಸಿದಂತೆ ರಾಜೀನಾಮೆ ಕೊಡಲೇಬೇಕು ಮತ್ತು ವಜಾ ಮಾಡಿ ಎಂದು ಹೇಳಿದರು.

# ಎಂಟು ವಿಧೇಯಕ ಮಂಡನೆ ಕಮಲ ಖಂಡನೆ



**ವಿಪಕ್ಷಗಳ ಪ್ರತಿಭಟನೆ, ಗದ್ದಲದ ಮಧ್ಯೆ ವಿಧಾನಸಭೆಯಲ್ಲಿ ಚರ್ಚೆಯಿಲ್ಲದೇ 8 ವಿಧೇಯಕಗಳು ಪಾಸ್**

### ಗ್ರಾಮ ಸ್ವರಾಜ್ ಮತ್ತು ಪಂ.ರಾ ವಿಧೇಯಕ

ಯೋಜನಾ ರಹಿತ ಹಾಗೂ ಅನುಮೋದನೆಯಿಲ್ಲದ ಬಡಾವಣೆಗಳ ಅಭಿವೃದ್ಧಿಗೆ ಕಡಿವಾಣ ಹಾಕುವ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (2ನೇ ತಿದ್ದುಪಡಿ) ವಿಧೇಯಕ-2026ಕ್ಕೆ ವಿಧಾನಸಭೆಯಲ್ಲಿ ಅನುಮೋದನೆ ದೊರೆತಿದೆ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ.ಖಂಡ್ರೆ ವಿಧೇಯಕ ಮಂಡಿಸಿದ್ದು, ಚರ್ಚೆ ಇಲ್ಲದೇ ಅಂಗೀಕೃತಗೊಂಡಿತು. ಗ್ರಾಮೀಣ ಜನಸಂಖ್ಯೆ ವೃದ್ಧಿಸುತ್ತಿದ್ದು, ಹಳ್ಳಿಗಳಲ್ಲಿ ಯೋಜನಾರಹಿತವಾಗಿ ಭೂಪರಿವರ್ತನೆ ಮತ್ತು ನಕ್ಷೆಯ ಅನುಮೋದನೆ ಇಲ್ಲದೆ ಅಕ್ರಮ ಬಡಾವಣೆಗಳು ತಲೆ ಎತ್ತುತ್ತಿದ್ದು, ಇದಕ್ಕೆ ಕಡಿವಾಣ ಹಾಕಲು ಈ ವಿಧೇಯಕ ಉದ್ದೇಶಿಸಿದೆ. ಗ್ರಾ.ಪಂ.ಗಳ ಸಂಪನ್ಮೂಲ ವೃದ್ಧಿಸಲು ಮತ್ತು ಪಂ. ವ್ಯಾಪ್ತಿಯ ಸ್ವತ್ತುಗಳನ್ನು ತೆರಿಗೆಯ ವ್ಯಾಪ್ತಿಗೆ ತರಲು 2025ರ ಏಪ್ರಿಲ್ 7ಕ್ಕೆ ಮೊದಲು ಅಂದರೆ 199-ಸಿ ಪ್ರಕರಣದ ಸೇರ್ಪಡೆಗೆ ಮುನ್ನ ನಿರ್ಮಿಸಿದ ಸ್ವತ್ತುಗಳಿಗೆ ತೆರಿಗೆ ಸಂಗ್ರಹಿಸಲು ಪಂಚಾಯತ್‌ಗಳಿಗೆ ಅಧಿಕಾರವನ್ನು ಮಸೂದೆ ನೀಡಲಿದೆ.

**ಪ್ರತಿಪಕ್ಷಗಳ ಪ್ರತಿಭಟನೆ**

• ಉದಯವಾಹಿನಿ, ಬೆಂಗಳೂರು

ಪ್ರತಿಪಕ್ಷಗಳ ಪ್ರತಿಭಟನೆ, ಘೋಷಣೆ, ಗದ್ದಲದ ಮಧ್ಯೆ ಚರ್ಚೆ ಇಲ್ಲದೇ ಸೋಮವಾರ 8 ವಿಧೇಯಕಗಳು ವಿಧಾನಸಭೆಯಲ್ಲಿ ಅಂಗೀಕೃತಗೊಂಡವು. ಚರ್ಚೆ ಮಾಡದೆ ವಿಧೇಯಕ ಮಂಡಿಸುತ್ತಿರುವುದು ಏಳು ಕೋಟಿ ಕನ್ನಡಿಗರಿಗೆ ಮಾಡುತ್ತಿರುವ ಅನ್ಯಾಯ ಎಂದು ಪ್ರತಿಪಕ್ಷದವರು ಆಕ್ರೋಶ ವ್ಯಕ್ತಪಡಿಸಿದರು. 2026ನೇ ಸಾಲಿನ ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ (ತಿದ್ದುಪಡಿ) ವಿಧೇಯಕ, 2026ನೇ ಸಾಲಿನ ಕರ್ನಾಟಕ ಕೈಗಾರಿಕೆ (ಸೌಲಭ್ಯ) (ತಿದ್ದುಪಡಿ) ವಿಧೇಯಕ, 2026ನೇ ಸಾಲಿನ ಕರ್ನಾಟಕ ಅಂಗಡಿಗಳ ಮತ್ತು ವಾಣಿಜ್ಯ ಕಾರ್ಯ ಸಂಸ್ಥೆಗಳ (ತಿದ್ದುಪಡಿ) ವಿಧೇಯಕ, 2026ನೇ ಸಾಲಿನ ಕರ್ನಾಟಕ ನೋಂದಣಿ ತಿದ್ದುಪಡಿ ವಿಧೇಯಕ, 2026ನೇ ಸಾಲಿನ ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕ, 2026ನೇ ಸಾಲಿನ ಕರ್ನಾಟಕ ಗ್ರಾಮ ಸ್ವರಾಜ್ ಪಂಚಾಯತ್ ರಾಜ್ (ಎರಡನೇ ತಿದ್ದುಪಡಿ) ವಿಧೇಯಕ, 2026ನೇ ಸಾಲಿನ ಕರ್ನಾಟಕ ಸರ್ಕಾರಿ ಉದ್ಯಾನವನ ಸಂರಕ್ಷಣೆ (ತಿದ್ದುಪಡಿ) ವಿಧೇಯಕ ಮತ್ತು ಬೆಂಗಳೂರು ಮಹಾನಗರ ಭೂಸಾರಿಗೆ ಪ್ರಾಧಿಕಾರ (ತಿದ್ದುಪಡಿ) ವಿಧೇಯಕಗಳ ಅಂಗೀಕಾರವಾಯಿತು.

**ಸರ್ಕಾರಿ ಉದ್ಯಾನವನ ಸಂರಕ್ಷಣೆ ಬಿಲ್:** ಕರ್ನಾಟಕ ಸರ್ಕಾರಿ ಉದ್ಯಾನವನಗಳ (ಸಂರಕ್ಷಣೆ) (ತಿದ್ದುಪಡಿ) ವಿಧೇಯಕ 2026 ವಿಧಾನಸಭೆಯಲ್ಲಿ ಚರ್ಚೆ ಇಲ್ಲದೇ ಅಂಗೀಕಾರವಾಯಿತು. ವಿಪಕ್ಷಗಳ ಪ್ರತಿಭಟನೆ ಮಧ್ಯೆ ಡಿಸಿಎಂ ಡಾ.ಜಿ.ಪರಮೇಶ್ವರ್ ವಿಧೇಯಕ ಪರ್ಯಾಲೋಚಿಸಿದರು.



ಸರ್ಕಾರದ ಇಲಾಖೆಗಳು, ಶಾಸನಬದ್ಧ ಪ್ರಾಧಿಕಾರಗಳು, ಸರ್ಕಾರಿ ಕಂಪನಿಗಳು ಅಥವಾ ಸಾರ್ವಜನಿಕ ಉಪಯುಕ್ತತೆಯ ಯೋಜನೆಗಳಿಗಾಗಿ ಸ್ಥಳೀಯ ಪ್ರಾಧಿಕಾರಗಳ ಪರವಾಗಿ ಮಾತ್ರ, ಉದ್ಯಾನವನದ ಒಟ್ಟು ವಿಸ್ತೀರ್ಣದ ಗರಿಷ್ಠ ಶೇಕಡಾ 5ರಷ್ಟು ಭೂಮಿಯನ್ನು ಮಾರಾಟ, ಗೇಣಿ (ಲೀಸ್), ಕೊಡುಗೆ (ಗಿಫ್ಟ್), ವಿನಿಮಯ, ಅಡಮಾನ ಅಥವಾ ಇನ್ನಿತರ ಯಾವುದೇ ರೀತಿಯಲ್ಲಿ ಪರಭಾರೆ ಮಾಡಲು ರಾಜ್ಯ ಸರ್ಕಾರಕ್ಕೆ ಅನುಮತಿಯನ್ನು ನೀಡುವ ವಿಧೇಯಕ ಇದಾಗಿದೆ. ತೋಟಗಾರಿಕೆ ಫಾರಂಗಳಲ್ಲಿ ತೋಟಗಾರಿಕೆ ಯೋಜನೆಗಳನ್ನು ಅನುಷ್ಠಾನಗೊಳಿಸಲು ಅತ್ಯಂತ ಕನಿಷ್ಠ ವಿಸ್ತೀರ್ಣವನ್ನು ಬಳಸಿಕೊಳ್ಳಲು ಇದು ಅನುವು ಮಾಡಿಕೊಡಲಿದೆ.

ಇದು ಕೊಯ್ಲೋತ್ತರ ಸಂಸ್ಕರಣಾ ಸೌಲಭ್ಯಗಳು, ಶೀತಲ ಶೇಖರಣಾಘಟಕಗಳು (ಕೋಲ್ಡ್ ಸ್ಟೋರೇಜ್), ಸುಧಾರಿತ ತಳಿಗಳ ಉತ್ಪಾದನೆ ಮತ್ತು ಸ್ಥಳೀಯ ರೈತ ಸಮುದಾಯಕ್ಕೆ ನೇರವಾಗಿ ಪ್ರಯೋಜನಕಾರಿಯಾಗುವ ಕೃಷಿ-ಆಧಾರಿತ ಕೈಗಾರಿಕೆಗಳನ್ನು ಒಳಗೊಂಡಿರಲಿದೆ. ಹಾಗೂ ಇದಕ್ಕೆ ಸಾರ್ವಜನಿಕ ಹಿತಾಸಕ್ತಿ ಮತ್ತು ಅತ್ಯಗತ್ಯತೆಯನ್ನು ನಿರೂಪಿಸುವ ದಾಖಲಿತ ಕಾರಣಗಳು ಇರಬೇಕು ಎಂಬ ಅಂಶವನ್ನು ಸೇರಿಸಲಾಗಿದೆ. **ಕರ್ನಾಟಕ ಅಂಗಡಿಗಳು ಹಾಗೂ ವಾಣಿಜ್ಯ ಸಂಸ್ಥೆಗಳ (ತಿದ್ದುಪಡಿ) ಮಸೂದೆ 2026:** ಕರ್ನಾಟಕ ಅಂಗಡಿಗಳು ಹಾಗೂ ವಾಣಿಜ್ಯ ಸಂಸ್ಥೆಗಳ (ತಿದ್ದುಪಡಿ) ಮಸೂದೆ 2026 ಅನ್ನು ಸಚಿವ ಸಂತೋಷ್ ಲಾಡ್ ಪರ್ಯಾಲೋಚಿಸಿದರು. ಎಲೆಕ್ಟ್ರಾನಿಕ್ ಅಥವಾ ಡಿಜಿಟಲ್ ಮಾದರಿಯ ಶುಲ್ಕ ಪಾವತಿ ವಿಧಾನವನ್ನು ಜಾರಿಗೆ ತರಲು ಉದ್ದೇಶಿಸಲಾಗಿದೆ. ಮೂಲ ಅಧಿನಿಯಮಕ್ಕೆ ಪ್ರಕರಣ 6B ಮತ್ತು 6c ಅನ್ನು ಸೇರ್ಪಡೆಗೊಳಿಸುವ ಮೂಲಕ ಸೇವಾ ಪ್ರಮಾಣಪತ್ರ ನೀಡುವುದು ಮತ್ತು ದಾಖಲೆಗಳನ್ನು ತಡೆಹಿಡಿಯುವುದನ್ನು ನಿಷೇಧಿಸಲು ಪ್ರಸ್ತಾಪಿಸಲಾಗಿದೆ. ಅಪರಾಧಗಳನ್ನು ಅಪರಾಧಮುಕ್ತಗೊಳಿಸುವುದು ಹಾಗೂ ಸುಗಮಗೊಳಿಸುವುದು ಮತ್ತು ಸುಲಭ ಜೀವನ ಹಾಗೂ ಸುಲಭ ವ್ಯಾಪಾರಕ್ಕಾಗಿ ವಿಶ್ವಾಸಾರ್ಹ ಆಡಳಿತವನ್ನು ಮತ್ತಷ್ಟು ಹೆಚ್ಚಿಸುವ ಉದ್ದೇಶ ಹೊಂದಲಾಗಿದೆ.

**ಸದನ ಕದನ**

### ಆರ್. ಅಶೋಕ್ ಸಿಟ್ಟು

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಆಡಳಿತ ಪಕ್ಷ ಹಾಗೂ ಪ್ರತಿಪಕ್ಷಗಳೆರಡೂ ಸಂವಿಧಾನದ ನಾಣ್ಯದ ಎರಡು ಮುಖಗಳು. ಪ್ರತಿಪಕ್ಷ ಎಂದರೆ ಕೇವಲ ವಿರೋಧವಲ್ಲ, ಅದು ಸರ್ಕಾರದ ಕರ್ತವ್ಯ ಲೋಪಗಳನ್ನು ತಪಾಸಣೆ ಮಾಡುವ ಸಾರ್ವಜನಿಕರ ಹಕ್ಕುಗಳ ರಕ್ಷಕ. ಪ್ರತಿಪಕ್ಷ ಎತ್ತುವ ನೇರ ಮತ್ತು ಚುರುಕಾದ ಪ್ರಶ್ನೆಗಳನ್ನು ಧೈರ್ಯವಾಗಿ ಎದುರಿಸಲಾಗದೆ ದೃಶ್ಯ ಮಾಧ್ಯಮದಲ್ಲೇ ಮರೆಮಾಚಲು ಹೊರಟಿರುವ ಕಾಂಗ್ರೆಸ್ ಸರ್ಕಾರ, ತನ್ನ ಹೊಣೆಗೇಡಿತನ, ನೈತಿಕ ಪತನ ಮತ್ತು ಸರ್ವಾಧಿಕಾರಿ ಮನಸ್ಥಿತಿಯನ್ನು ಬಹಿರಂಗಪಡಿಸಿದೆ ಎಂದು ಆರ್. ಅಶೋಕ್ ಹರಿಹಾಯ್ದಿದ್ದಾರೆ. ಸಾರ್ವಜನಿಕ ಹಿತಾಸಕ್ತಿಯ ವಿಷಯಗಳಿಂದ ನುಣುಚಿಕೊಳ್ಳಲು ಕ್ಯಾಮೆರಾ ಮರೆಮಾಚುವ ಇಂತಹ ರಣಹೇಡಿ ತಂತ್ರಗಳನ್ನು ಕರ್ನಾಟಕದ ಪ್ರಬುದ್ಧ ಜನತೆ ಕ್ಷಮಿಸುವುದಿಲ್ಲ.

### ರಾಜೀನಾಮೆಗೆ ಒಪ್ಪದ ನಾಗೇಂದ್ರ

ಇಷ್ಟೆಲ್ಲಾ ಬೆಳವಣಿಗೆಗಳು ನಡೆದರೂ ಬಿ ನಾಗೇಂದ್ರ ರಾಜೀನಾಮೆಗೆ ಒಪ್ಪಿಗೆ ನೀಡಲಿಲ್ಲ. ಸರ್ಕಾರ ಕೂಡಾ ಸಚಿವರನ್ನು ಸಮರ್ಥನೆ ಮಾಡಿಕೊಂಡಿದೆ.

ಜೊತೆಗೆ ಕೆಲವೊಂದು ಪ್ರಮುಖ ವಿಧೇಯಕಗಳು ಅಂಗೀಕಾರಗೊಂಡಿವೆ. ನಾಗೇಂದ್ರ ರಾಜೀನಾಮೆಗೆ ಆಗ್ರಹಿಸಿ ಬಿಜೆಪಿ ಸೋಮವಾರ ಪ್ರತಿಭಟನೆ ಹಮ್ಮಿಕೊಂಡಿತ್ತು.

ವಿಧಾನಸೌಧ ಮುತ್ತಿಗೆಗೆ ಪ್ರಯತ್ನ ನಡೆಸಿತ್ತು. ಈ ವೇಳೆ ನಾಯಕರನ್ನು ಪೊಲೀಸರು ವಶಕ್ಕೆ ಪಡೆದುಕೊಂಡಿದ್ದರು.



### ನೋಂದಣಿ (ಕರ್ನಾಟಕ ತಿದ್ದುಪಡಿ) ಮಸೂದೆ 2026

ಉಪ ನೋಂದಣಿ ಕಚೇರಿಗಳಲ್ಲಿ ಭೌತಿಕ ಉಪಸ್ಥಿತಿ ಇಲ್ಲದೇ ಇ-ನೋಂದಣಿಗೆ ಅವಕಾಶ ಕಲ್ಪಿಸುವ ಮಸೂದೆ ಇದಾಗಿದೆ. ಆ ಮೂಲಕ ನೋಂದಣಿ ಪ್ರಕ್ರಿಯೆಯನ್ನು ಸರಳೀಕರಿಸಲು ಉದ್ದೇಶಿಸಲಾಗಿದೆ. ಆಸ್ತಿ ನೋಂದಣಿ ಸಮಯದಲ್ಲಿ ಉಪ-ನೋಂದಣಾಧಿಕಾರಿಗಳು (ಸಬ್ ರಿಜಿಸ್ಟ್ರಾರ್) ಸಾರ್ವಜನಿಕ ಹಿತಾಸಕ್ತಿಯಲ್ಲಿ ಸೂಕ್ತ ಪರಿಶೀಲನೆ ನಡೆಸುವುದನ್ನು ಖಚಿತಪಡಿಸಿಕೊಳ್ಳುವ ಮಸೂದೆಯಾಗಿದೆ. ನಗರ ಪ್ರದೇಶಗಳಲ್ಲಿ ಅಕ್ರಮ ಆಸ್ತಿ ನೋಂದಣಿಯನ್ನು ತಡೆಯಲು ಮತ್ತು ಆಸ್ತಿ ನೋಂದಣಿ ಪ್ರಕ್ರಿಯೆಯನ್ನು ಸರಳೀಕರಣಗೊಳಿಸಲು ಆಸ್ತಿ ತಂತ್ರಾಂಶಗಳನ್ನು ಸಂಯೋಜಿಸುವ ಅಂಶವನ್ನು ಮಸೂದೆಯಲ್ಲಿ ಸೇರ್ಪಡೆಗೊಳಿಸಲಾಗಿದೆ.

ಈ ಮಸೂದೆಯಲ್ಲಿ ಉಪ-ನೋಂದಣಾಧಿಕಾರಿಗಳ ಕಚೇರಿಯಲ್ಲಿ ಖರೀದಿದಾರ/ಮಾರಾಟಗಾರ ಭೌತಿಕ ಉಪಸ್ಥಿತಿಯಿಲ್ಲದೆ ಕಡ್ಡಾಯವಾಗಿ ನೋಂದಾಯಿಸಬೇಕಾದ ಕೆಲವು ದಾಖಲೆಗಳ ಇ-ನೋಂದಣಿಗೆ ಅವಕಾಶ ಕಲ್ಪಿಸಲಾಗಿದೆ. ಆ ಮೂಲಕ ಖರೀದಿದಾರ ಅಥವ ಮಾರಾಟಗಾರ ಉಪನೋಂದಾಣಿ ಕಚೇರಿಗೆ ಹೋಗಬೇಕಾಗಿಲ್ಲ. ತಾವಿರುವ ಸ್ಥಳದಿಂದಲೇ ರಿಮೋಟ್ ಏರಿಯಾದಿಂದ ದಾಖಲೆಗಳ ನೋಂದಣಿ ಮಾಡಬಹುದಾಗಿದೆ. ಇಲಾಖೆಯ ಪೋರ್ಟಲ್ ಅಥವಾ ತಂತ್ರಾಂಶವನ್ನು ವಂಚನೆಯಿಂದ ತಿರುಚುವುದು ಅಥವಾ ಹ್ಯಾಕ್ ಮಾಡುವುದಕ್ಕೆ ದಂಡ ವಿಧಿಸುವ ಅಂಶವನ್ನೂ ಮಸೂದೆಯಲ್ಲಿ ಸೇರಿಸಲಾಗಿದೆ.

## ಕಂಟ್ರಾಕ್ಟರ್ ಆಗಿ ಅದಾನಿ ಸಿಎಂ ಭೇಟಿಯಾಗಿದ್ದಾರೆ: ಪ್ರಿಯಾಂಕ್ ಖರ್ಗೆ

• ಉದಯವಾಹಿನಿ, ಬೆಂಗಳೂರು

ಸರ್ಕಾರಿ ಕಂಟ್ರಾಕ್ಟರ್ ಆಗಿ ಗೌತಮ್ ಅದಾನಿ ಅವರು ಸಿಎಂ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿಯಾಗಿದ್ದಾರೆ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಸಿಎಂ-ಅದಾನಿ ಭೇಟಿ ಬಗ್ಗೆ ಪ್ರತಿಕ್ರಿಯಿಸಿದ ಅವರು, ಅದಾನಿ ಬಗ್ಗೆ ನಮ್ಮ ಅಭಿಪ್ರಾಯ ಏನೇ ಇರಬಹುದು. ನಮ್ಮ ಚಿತ್ತಾಪುರದಲ್ಲಿ ಎಸಿಸಿ ಸಿಮೆಂಟ್ ಫ್ಯಾಕ್ಟರಿ ಖರೀದಿ ಮಾಡಿದ್ದಾರೆ. ನಾನೇನಾದರೂ ಮಾಡಲು ಆಗುತ್ತಾ? ಕಾನೂನು ಪಾಲನೆ ಮಾಡಬೇಕು ಅಷ್ಟೇ. ಸಿಎಂ ಅವರನ್ನು ಭೇಟಿಯಾಗುವುದರಲ್ಲಿ ಏನಿದೆ ಎಂದು ಪ್ರಶ್ನಿಸಿದರು. ಕಂಟ್ರಾಕ್ಟರ್, ಸರ್ಕಾರಿ ಕಂಟ್ರಾಕ್ಟರ್. ಎರಡು ಪ್ರಾಜೆಕ್ಟ್‌ಗಳಲ್ಲಿ ಎಲ್-1 ಆಗಿದ್ದಾರೆ. ನಮ್ಮ ರಾಜ್ಯಕ್ಕೆ ಆ ಪ್ರಾಜೆಕ್ಟ್‌ಗಳು ಮುಖ್ಯವಾಗಿವೆ. ನಾವು ಟೆಂಡರ್ ಮೇಲೆ ಪರಿಣಾಮ ಬೀರಲು ಆಗುವುದಿಲ್ಲ. ಎಲ್-1 ಆಗಿರುವುದರಿಂದ ಸೌಜನ್ಯಕ್ಕಾಗಿ ಭೇಟಿಯಾಗಿರಬಹುದು. ನಮಗೆ ಅವರು ಕಂಟ್ರಾಕ್ಟರ್ ಅಷ್ಟೇ ಎಂದು ಹೇಳಿದರು. ಬಿಜೆಪಿ ಟೀಕೆ ವಿಚಾರವಾಗಿ ಮಾತನಾಡಿದ ಪ್ರಿಯಾಂಕ್ ಖರ್ಗೆ, ಕೇಂದ್ರ ಸರ್ಕಾರ ಅಂಬಾನಿ, ಅದಾನಿ ಗುಲಾಮರು ಎಂಬುದು ನಮ್ಮ ಅಭಿಪ್ರಾಯ. ಆದರೆ ಲೀಗಲ್ ಪ್ರೊಸೆಸ್ ಅನ್ನು ನಾವು ತಡೆಯಲು ಅಥವಾ ಬದಲಾಯಿಸಲು ಆಗುವುದಿಲ್ಲ. ನ್ಯಾಯಯುತವಾಗಿ ಟೆಂಡರ್ ಸಿಕ್ಕಿದ್ದರೆ ಏನು ಮಾಡುವುದು ಎಂದರು. ನಮಗೆ ಕೆಲಸ ಮಾಡಿಸುವುದು ಮುಖ್ಯ. ಅದು ಅಂಬಾನಿ, ಅದಾನಿ ಅಥವಾ ಅಂಬರೀಶ್ ಯಾರೇ ಆಗಿರಬಹುದು.

## ಔಷಧಿ ಖರೀದಿಸಿದ್ದ ಮೆಡಿಕಲ್ ಶಾಪ್ ಮಾಲೀಕರಿಗೆ SIT ನೋಟಿಸ್

• ಉದಯವಾಹಿನಿ, ಬೆಂಗಳೂರು

ನಕಲಿ ಔಷಧ ದಂಧೆ ಪ್ರಕರಣದ ತನಿಖೆಯನ್ನ ಎಸ್‌ಐಟಿ ಅಧಿಕಾರಿಗಳು ಚುರುಕುಗೊಳಿಸಿದ್ದು, ಆರೋಪಿಯಿಂದ ಔಷಧಿ ಪಡೆದಿದ್ದ ಮೆಡಿಕಲ್ ಶಾಪ್ ಮಾಲೀಕರಿಗೆ ನೋಟಿಸ್ ನೀಡಿದ್ದಾರೆ. ರಾಮನಗರದ ಫಾರ್ಮ್‌ಹೌಸ್‌ವೊಂದರಲ್ಲಿ ನಕಲಿ ಮೆಡಿಸಿನ್ ದಂಧೆ ಬಯಲಾಗಿತ್ತು. ಇದರ ಬೆನ್ನಲ್ಲೇ ಸರ್ಕಾರ ಎಸ್‌ಐಟಿ ರಚನೆ ಮಾಡಿದ್ದು, ಇಂದಿನಿಂದ ತನಿಖೆಯನ್ನ ಮತ್ತಷ್ಟು ತೀವ್ರಗೊಳಿಸಲು ಎಸ್‌ಐಟಿ ಅಧಿಕಾರಿಗಳು ಮುಂದಾಗಿದ್ದಾರೆ. ನಕಲಿ ಔಷದ ದಂಧೆ ನಡೆಸಿ ಜನರ ಜೀವನದ ಜೊತೆ ಚೆಲ್ಲಾಟ ಆಡುತ್ತಿದ್ದ ಆರೋಪಿಗಳಿಂದ ಔಷಧಿ ಖರೀದಿ ಮಾಡಿರುವ ಮೆಡಿಕಲ್‌ಗಳ ಮಾಲೀಕರನ್ನ ಪತ್ತೆ ಮಾಡಿ, ನೋಟಿಸ್ ಕೊಟ್ಟಿದ್ದಾರೆ. ನಗರದ ಕಮರ್ಷಿಯಲ್ ಸ್ಟ್ರೀಟ್, ಚಾಮರಾಜಪೇಟೆಯಲ್ಲಿರುವ ಸುಮಾರು ಐದರಿಂದ ಆರು ಮೆಡಿಕಲ್ ಶಾಪ್ ಮಾಲೀಕರಿಗೆ ನೋಟಿಸ್ ಕೊಟ್ಟು, ವಿಚಾರಣೆಗೆ ಹಾಜರಾಗುವಂತೆ ತಿಳಿಸಿದ್ದಾರೆ. ಹಲವು ಕಡೆ ಆರೋಪಿಗಳಿಂದ ನಕಲಿ ಔಷದ ಪಡೆದಿದ್ದ ಮೆಡಿಕಲ್‌ಗಳ ಮಾಹಿತಿ ಪಡೆದು ಪೊಲೀಸರು ದಾಳಿ ನಡೆಸಿದ್ದಾರೆ. ಚಾಮರಾಜಪೇಟೆ ಹಾಗೂ ಕಮರ್ಷಿಯಲ್ ಸ್ಟ್ರೀಟ್‌ನಲ್ಲಿರುವ ಕೆಲವೊಂದು ಮೆಡಿಕಲ್‌ಗಳಲ್ಲಿ ಎಸ್‌ಐಟಿ ಅಧಿಕಾರಿಗಳ ದಾಳಿ ವೇಳೆ ಕೆಲ ಔಷಧಿ ವಶಕ್ಕೆ ಪಡೆದುಕೊಂಡಿದ್ದಾರೆಂದು ತಿಳಿದುಬಂದಿದೆ. ಆರೋಪಿಗಳ ಬಳಿ ನಕಲಿ ಔಷಧಿ ಖರೀದಿ ಮಾಡಿದ್ದರು ಯಾವ ಯಾವ ಮಾದರಿಯ ಔಷಧಗಳನ್ನ ಖರೀದಿ ಮಾಡಿದ್ದರು? ಅನ್ನೋದರ ಮಾಹಿತಿ ಕಲೆ ಹಾಕಲು ಎಸ್‌ಐಟಿ ಮುಂದಾಗಿದೆ.

# ರಾಜ್ಯಕ್ಕೆ ಮತ್ತೆ 'ಕಾವೇರಿ' ಆಘಾತ: ತ.ನಾಡಿಗೆ 9,000 ಕ್ಯುಸೆಕ್ ಹರಿಸಲು ಆದೇಶ

• ಉದಯವಾಹಿನಿ, ನವದೆಹಲಿ

ಕಾವೇರಿ ನೀರು ಹಂಚಿಕೆ ವಿವಾದದಲ್ಲಿ ಕರ್ನಾಟಕಕ್ಕೆ ಮತ್ತೆ ಹಿನ್ನಡೆಯಾಗಿದ್ದು, ತಮಿಳುನಾಡಿಗೆ ಮುಂದಿನ 15 ದಿನಗಳ ಕಾಲ ಬಿಳಿಗುಂಡ್ಲುವಿನಲ್ಲಿ ಪ್ರತಿದಿನ 9 ಸಾವಿರ ಕ್ಯುಸೆಕ್ ನೀರು ಹರಿಯುವಂತೆ ನೋಡಿಕೊಳ್ಳಲು ಕಾವೇರಿ ನೀರು ನಿಯಂತ್ರಣ ಸಮಿತಿ (ಸಿಡಬ್ಲ್ಯೂಆರ್‌ಸಿ) ಸೂಚಿಸಿದೆ. ಸಮಿತಿಯ 141ನೇ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ. ಆಗಸ್ಟ್ 25ರಂದು ಬೆಳಿಗ್ಗೆ 8 ಗಂಟೆಯಿಂದ ಮುಂದಿನ 15 ದಿನಗಳ ಅವಧಿಯಲ್ಲಿ ಬಿಳಿಗುಂಡ್ಲುವಿನಲ್ಲಿ ಒಟ್ಟು 11.66 ಟಿಎಂಸಿ ನೀರು ಹರಿಯುವಂತೆ ಕರ್ನಾಟಕದ ಜಲಾಶಯಗಳಿಂದ ನೀರು ಬಿಡಬೇಕು ಎಂದು ಸೂಚಿಸಲಾಗಿದೆ. ಈ ಅವಧಿಯಲ್ಲಿ ಬಿಳಿಗುಂಡ್ಲುವಿನ ಹರಿವನ್ನು 9 ಸಾವಿರ ಕ್ಯುಸೆಕ್ ಮಟ್ಟದಲ್ಲಿ ಖಾತ್ರಿಪಡಿಸುವ ಜವಾಬ್ದಾರಿ ಕರ್ನಾಟಕದ ಪ್ರತಿನಿಧಿಗಳ ಮೇಲಿದೆ ಎಂದು ಆದೇಶದಲ್ಲಿ ತಿಳಿಸಲಾಗಿದೆ. ಸಭೆಯಲ್ಲಿ ರಾಜ್ಯದ ನಾಲ್ಕು ಪ್ರಮುಖ ಕಾವೇರಿ ಜಲಾಶಯಗಳಿಗೆ ಒಳಹರಿವು ತೀವ್ರವಾಗಿ ಕುಸಿದಿರುವುದನ್ನು ಸಮಿತಿಯ ಗಮನಕ್ಕೆ ಕರ್ನಾಟಕ ತಂದಿತು. 30 ವರ್ಷಗಳ ಸರಾಸರಿಗೆ ಹೋಲಿಸಿದರೆ ಈ ಜಲಾಶಯಗಳ ಒಟ್ಟು ಒಳಹರಿವು ಶೇ. 49.18ರಷ್ಟು ಕಡಿಮೆಯಾಗಿದೆ ಎಂದೂ ಕರ್ನಾಟಕ ವಾದಿಸಿತು. ಜುಲೈ 29ರಿಂದ ಆಗಸ್ಟ್ 23ರವರೆಗೆ ಬಿಳಿಗುಂಡ್ಲುವಿನಲ್ಲಿ 2,16,993 ಕ್ಯುಸೆಕ್ ನೀರು ಹರಿದಿದ್ದು, ಈ ಅವಧಿಗೆ ನಿಗದಿಯಾಗಿದ್ದ 1,84,500 ಕ್ಯುಸೆಕ್‌ಗಿಂತ 32,493 ಕ್ಯುಸೆಕ್ ಹೆಚ್ಚುವರಿಯಾಗಿ ನೀರು ಹರಿಸಲಾಗಿದೆ ಎಂದೂ ತಿಳಿಸಿತು. ಇದೇ ವೇಳೆ, ಕರ್ನಾಟಕದ ಜಲಾಶಯಗಳಿಗೆ ಬರುತ್ತಿದ್ದ ಒಟ್ಟು ಒಳಹರಿವು 77,048 ಕ್ಯುಸೆಕ್‌ನಿಂದ ಕೇವಲ 9,282 ಕ್ಯುಸೆಕ್‌ಗೆ



ಕುಸಿದಿದೆ. ಹೀಗಾಗಿ ಬಿಳಿಗುಂಡ್ಲುವಿನಲ್ಲಿ ನಿರಂತರವಾಗಿ 12 ಸಾವಿರ ಕ್ಯುಸೆಕ್ ನೀರು ಹರಿಸುವುದು ಕಷ್ಟಸಾಧ್ಯವಾಗಿದೆ ಎಂದು ರಾಜ್ಯದ ಪ್ರತಿನಿಧಿಗಳು ಸ್ಪಷ್ಟಪಡಿಸಿದರು. ಕಾವೇರಿ ಕೊಳ್ಳದಲ್ಲಿ ಕೃಷಿ ಚಟುವಟಿಕೆಗಳ ಮೇಲೂ ತೀವ್ರ ಒತ್ತಡವಿದೆ ಎಂದು ಕರ್ನಾಟಕ ಸಭೆಯಲ್ಲಿ ಹೇಳಿತು. ಸಂಕಷ್ಟ ಪರಿಸ್ಥಿತಿಯನ್ನು ಪರಿಗಣಿಸಿ ಹಿಂಗಾರಿ ಹಂಗಾಮಿಗೆ 56.67 ಟಿಎಂಸಿ ನೀರಿನ ಅಗತ್ಯವಿದ್ದು, ಈವರೆಗೆ ಕೇವಲ 5.06 ಟಿಎಂಸಿ ನೀರು ಮಾತ್ರ ಬಿಡುಗಡೆ ಮಾಡಲಾಗಿದೆ ಎಂದು ತಿಳಿಸಿತು.

ಇದರ ಜತೆಗೆ ರಾಜ್ಯದಲ್ಲಿ ಕುಡಿಯುವ ನೀರಿನ ಅಗತ್ಯಕ್ಕಾಗಿ ಸುಮಾರು 38 ಟಿಎಂಸಿ, ಪರಿಸರ ಹರಿವಿಗಾಗಿ 10 ಟಿಎಂಸಿ ನೀರನ್ನು ಕಾಯ್ದಿರಿಸಬೇಕಾಗಿದೆ. ಈ ಅಗತ್ಯಗಳನ್ನೂ ಪರಿಗಣಿಸದೆ ತಮಿಳುನಾಡಿಗೆ ನಿರಂತರವಾಗಿ ನೀರು ಬಿಡುಗಡೆ ಮಾಡುವುದು ಕಷ್ಟ ಎಂದು ಕರ್ನಾಟಕ ಪ್ರತಿಪಾದಿಸಿತು.

ಕಾವೇರಿ ಕೊಳ್ಳದಲ್ಲಿ ನೀರಿನ ಕೊರತೆಯಿರುವ ಸಂದರ್ಭದಲ್ಲಿ ಸಂಕಷ್ಟ ಹಂಚಿಕೆ ಸೂತ್ರವು ಎರಡೂ ರಾಜ್ಯಗಳಿಗೂ ಸಮಾನವಾಗಿ ಅನ್ವಯಿಸಬೇಕು ಎಂದು ಕರ್ನಾಟಕ ಒತ್ತಾಯಿಸಿತು. ತಮಿಳುನಾಡಿನ ಮೆಟ್ಟೂರು ಜಲಾಶಯದಲ್ಲಿರುವ ನೀರಿನ ಸಂಗ್ರಹ, ಅಂತರ್ಜಲ ಲಭ್ಯತೆ ಹಾಗೂ ಈಶಾನ್ಯ ಮುಂಗಾರು ಸಂದರ್ಭದಲ್ಲಿ ದೊರೆಯಬಹುದಾದ ನೀರಿನ ಹರಿವನ್ನೂ ಪರಿಗಣಿಸಬೇಕು. ಸಂಕಷ್ಟದ ಸಂಪೂರ್ಣ ಹೊರೆ ಕರ್ನಾಟಕದ ಜಲಾಶಯಗಳ ಮೇಲೆಯೇ ಬೀಳಬಾರದು ಎಂದು ರಾಜ್ಯದ ಪ್ರತಿನಿಧಿಗಳು ವಾದಿಸಿದರು. ಈ ಹಿನ್ನೆಲೆಯಲ್ಲಿ ಆಗಸ್ಟ್ 27ರವರೆಗೆ ಬಿಳಿಗುಂಡ್ಲುವಿನಲ್ಲಿ ನಿಗದಿತ 12 ಸಾವಿರ ಕ್ಯುಸೆಕ್ ಬದಲಿಗೆ 6 ಸಾವಿರ ಕ್ಯುಸೆಕ್ ನೀರು ಹರಿಸುವಂತೆ ಮತ್ತು ಆ ನಂತರ ಮತ್ತಷ್ಟು ನೀರು ಬಿಡುಗಡೆ ಮಾಡುವಂತೆ ಯಾವುದೇ ಆದೇಶ ನೀಡದಂತೆ ಕರ್ನಾಟಕ ಮನವಿ ಮಾಡಿತ್ತು. ಇದಕ್ಕೆ ಪ್ರತಿಯಾಗಿ ವಾದ ಮಂಡಿಸಿದ ತಮಿಳುನಾಡು, ಆಗಸ್ಟ್ 23ರವರೆಗೆ ತನ್ನ ಪಾಲಿನ 17.49 ಟಿಎಂಸಿ ನೀರು ಬಾಕಿಯಿದ್ದು, ಅದನ್ನು ತಕ್ಷಣ ಬಿಡುಗಡೆ ಮಾಡುವಂತೆ ಕರ್ನಾಟಕಕ್ಕೆ ನಿರ್ದೇಶನ ನೀಡಬೇಕು ಎಂದು ಒತ್ತಾಯಿಸಿತು. ಆಗಸ್ಟ್ 24ರಿಂದ ಸೆಪ್ಟೆಂಬರ್ 7ರವರೆಗೆ 15 ದಿನಗಳಲ್ಲಿ 28.386 ಟಿಎಂಸಿ ನೀರು ಬಿಳಿಗುಂಡ್ಲುವಿನಲ್ಲಿ ಹರಿಯುವಂತೆ ಆದೇಶಿಸಬೇಕೆಂದು ತಮಿಳುನಾಡು ಬೇಡಿಕೆ ಇಟ್ಟಿತ್ತು. ಇದರಲ್ಲಿ 17.49 ಟಿಎಂಸಿ ಬಾಕಿ ಮತ್ತು ಮುಂದಿನ ಅವಧಿಯ ಪ್ರೊರಾಟಾ ಪಾಲಿನ 10.896 ಟಿಎಂಸಿ ಸೇರಿದೆ ಎಂದು ತಿಳಿಸಿತ್ತು.

### 12 ಸಾವಿರದಿಂದ 9 ಸಾವಿರಕ್ಕೆ ಇಳಿಕೆ

ಎರಡೂ ರಾಜ್ಯಗಳ ವಾದಗಳನ್ನು ಪರಿಶೀಲಿಸಿದ ಪ್ರಾಧಿಕಾರ, ಕರ್ನಾಟಕದ ಜಲಾಶಯಗಳಲ್ಲಿನ ಲಭ್ಯ ಸಂಗ್ರಹ, ಕೆಆರ್‌ಎಸ್ ಮತ್ತು ಕಬಿನಿ ಜಲಾಶಯಗಳ ಮೇಲ್ಭಾಗದ ಪ್ರದೇಶಗಳಲ್ಲಿನ ನೀರಿನ ಲಭ್ಯತೆ ಕುರಿತ ಕೇಂದ್ರ ಜಲ ಆಯೋಗದ ಮಾಹಿತಿ ಹಾಗೂ ಮುಂದಿನ ಏಳು ದಿನಗಳ ಒಳಹರಿವಿನ ಮುನ್ಸೂಚನೆಯನ್ನು ಪರಿಗಣಿಸಿದೆ.

ಅಂತಿಮವಾಗಿ, ಈ ಅಂಶಗಳನ್ನು ಆಧರಿಸಿ ಬಿಳಿಗುಂಡ್ಲುವಿನಲ್ಲಿ ಈ ಹಿಂದೆ ನಿಗದಿಪಡಿಸಿದ್ದ 12 ಸಾವಿರ ಕ್ಯುಸೆಕ್ ಹರಿವಿನ ಬದಲಿಗೆ 9 ಸಾವಿರ ಕ್ಯುಸೆಕ್ ನೀರು ಹರಿಯುವಂತೆ ಕರ್ನಾಟಕದ ಜಲಾಶಯಗಳಿಂದ ನೀರು ಬಿಡುಗಡೆ ಮಾಡಲು ಸೂಚಿಸಿದೆ. ಆಗಸ್ಟ್ 25ರ ಬೆಳಿಗ್ಗೆ 8ರಿಂದ 15 ದಿನಗಳ ಕಾಲ ಈ ಹರಿವು ಖಾತ್ರಿಪಡಿಸಬೇಕಾಗಿದೆ. ಒಟ್ಟಿನಲ್ಲಿ, ಕರ್ನಾಟಕ ಕೇಳಿದ್ದ 6 ಸಾವಿರ ಕ್ಯುಸೆಕ್‌ಗೆ ಹೋಲಿಸಿದರೆ 3 ಸಾವಿರ ಕ್ಯುಸೆಕ್ ಹೆಚ್ಚುವರಿ ಹರಿವನ್ನು ಪ್ರಾಧಿಕಾರ ನಿಗದಿಪಡಿಸಿದೆ.

ಆದರೆ ಈ ಹಿಂದೆ ಇದ್ದ 12 ಸಾವಿರ ಕ್ಯುಸೆಕ್ ನಿರ್ದೇಶನವನ್ನು 9 ಸಾವಿರ ಕ್ಯುಸೆಕ್‌ಗೆ ಇಳಿಸಿರುವುದು ಕರ್ನಾಟಕಕ್ಕೆ ಭಾಗಶಃ ನಿರಾಳತೆ ನೀಡಿದೆ.

**ಈ ದಿನದ ದರ** ಪೆಟ್ರೋಲ್: 111.68₹/L ಡೀಸೆಲ್ : 99.56₹/L ಬಂಗಾರ: ₹ 16,397 /Gram 24ct ₹ 15,030 /Gram 22ct ಬೆಳ್ಳಿ: ₹235.00/

## ಕಾಂಗ್ರೆಸ್‌ನಲ್ಲಿ 15 ಮಂದಿ SC-ST ಶಾಸಕರಿರುವುದು ವಿಪಕ್ಷಗಳ ಮತ್ಸರಕ್ಕೆ ಕಾರಣ

• ಉದಯವಾಹಿನಿ, ಬೆಂಗಳೂರು

ಪ್ರತಿಪಕ್ಷಗಳಿಗೆ ವಿಧಾನಸಭೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಎದುರಿಸಲು ಶಕ್ತಿಯಿಲ್ಲದ ಕಾರಣ, ಅಧಿವೇಶನದ ಕಾರ್ಯಕಲಾಪಗಳಿಗೆ ಅಡ್ಡಿಯುಂಟು ಮಾಡುತ್ತಿದ್ದಾರೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು.

ಬೆಂಗಳೂರಿನಲ್ಲಿ ಮಾತನಾಡಿದ ಅವರು, ಸಚಿವ ನಾಗೇಂದ್ರ ಅವರ ರಾಜಿನಾಮೆ ಒತ್ತಾಯಿಸಿ ಪ್ರತಿಪಕ್ಷಗಳು ವಿಧಾನಸೌಧದಲ್ಲಿ ಧರಣಿ ನಡೆಸಲು ಸಿದ್ಧತೆ ನಡೆಸಿರುವ ಬಗ್ಗೆ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿಗಳು, ಇಲ್ಲಿ ನೆಲದ


ಉದಯವಾಹಿನಿ ಚಿತ್ರ

ಕಾನೂನಿದೆ.ಕಾನೂನಿನ ಚೌಕಟ್ಟಿನಲ್ಲಿ ಪ್ರತಿಭಟಿಸಲು ಅವಕಾಶವಿದೆ. ಪ್ರತಿಪಕ್ಷಗಳು ಧರಣಿ ಮಾಡುವುದು ತಪ್ಪಲ್ಲ. ಆದರೆ ನೋಟೀಸು ನೀಡಿ ಚರ್ಚೆ ನಡೆಸಲಿ. ಸಚಿವರ ರಾಜಿನಾಮೆ ಏಕೆ ನೀಡಬೇಕು ಎಂಬುದನ್ನು ಚರ್ಚೆ ಮಾಡಲು ಪ್ರತಿಪಕ್ಷಗಳಿಗೆ ತಾಳ್ಮೆ ಇಲ್ಲ ಎಂದರು. ಪ್ರತಿಪಕ್ಷಗಳಿಗೆ ವಿಧಾನಸಭೆಯಲ್ಲಿ ಕಾಂಗ್ರೆಸ್ ಸರ್ಕಾರವನ್ನು ಎದುರಿಸಲು ಶಕ್ತಿಯಿಲ್ಲ. ಇದುವರೆಗೆ ಯಾವ ಸಚಿವರ ಮೇಲೆ ಹಾಗೂ ಕೇಂದ್ರದ ಎಷ್ಟು ಸಚಿವರ ಮೇಲೆ ಮೊಕದ್ದಮೆಗಳಿವೆ ಎಂದು ಅವರೇ ತಿಳಿಸಲಿ, ಮಾಧ್ಯಮದವರು ದೇಶದ ಯಾವ ಸಚಿವರ ಹಾಗೂ ಯಾವ ಮುಖ್ಯಮಂತ್ರಿಗಳ ಮೇಲೆ ಎಷ್ಟು ಮೊಕದ್ದಮೆಗಳಿವೆ ಎಂಬ ದಾಖಲಾತಿಗಳೊಂದಿಗೆ ಪ್ರಶ್ನಿಸಬೇಕು.

ಕಾಂಗ್ರೆಸ್ ಪಕ್ಷದಲ್ಲಿ ಸುಮಾರು 15 ಪರಿಶಿಷ್ಟ ವರ್ಗದ ಶಾಸಕರು ಆಯ್ಕೆಯಾಗಿದ್ದು , ಈ ಬಗ್ಗೆ ಅವರಿಗೆ ಮತ್ಸರವಿದೆ. ಅವರ ಪಕ್ಷದಲ್ಲಿ ಯಾವುದೇ ಪರಿಶಿಷ್ಟ ವರ್ಗದ ನಾಯಕರು ಹೊರಹೊಮ್ಮಿಲ್ಲ ಎಂಬ ಅಸಮಾಧಾನವಿರುವ ಕಾರಣ, ಈ ರೀತಿಯ ಪ್ರತಿಭಟನೆಗೆ ಮುಂದಾಗಿದ್ದಾರೆ ಎಂದರು.

## ಸುಪ್ರೀಂ ಆದೇಶ ಬೆನ್ನಲ್ಲೇ, ಡಾ.ರಾಜ್ ಉದ್ಘಾಟಿಸಿದ್ದ ಚಿತ್ರಮಂದಿರ ಇನ್ಮುಂದೆ ಕೇವಲ ನೆನಪು

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನ ಸಿನಿ ಪ್ರಿಯರ ಪಾಲಿನ ಹೆಮ್ಮೆಯ ತಾಣ, ಸುಮಾರು 55 ವರ್ಷಗಳ ಭವ್ಯ ಇತಿಹಾಸವನ್ನು ತನ್ನೊಡಲಲ್ಲಿ ಹೊತ್ತಿದ್ದ ಐಕಾನಿಕ್ ಊರ್ವಶಿ ಚಿತ್ರಮಂದಿರ ಇನ್ಮುಂದೆ ನೆನಪು ಮಾತ್ರ. ವರನಟ ಡಾ. ರಾಜ್‌ಕುಮಾರ್ ಅವರಿಂದಲೇ ಉದ್ಘಾಟನೆಗೊಂಡು, 5,000ಕ್ಕೂ ಹೆಚ್ಚು ಸಿನಿಮಾಗಳಿಗೆ ಸಾಕ್ಷಿಯಾಗಿದ್ದ ಈ ಅದ್ಭುತ ಚಿತ್ರಮಂದಿರವೀಗ ಸುಪ್ರೀಂ ಕೋರ್ಟ್ ತೀರ್ಪಿನ ಬೆನ್ನಲ್ಲೇ ಧರೆಗುರುಳುತ್ತಿದೆ. ಅದರಲ್ಲೂ, ರಾಕಿಂಗ್ ಸ್ಟಾರ್ ಯಶ್ ಅಭಿನಯದ ಬಹುನಿರೀಕ್ಷಿತ ಟಾಕ್ಸಿಕ್ ಸಿನಿಮಾ ಇಲ್ಲಿಯೇ ಬಿಡುಗಡೆಯಾಗಲಿದೆ ಎಂದು ಕಾಯುತ್ತಿದ್ದ ಕೋಟ್ಯಂತರ ಅಭಿಮಾನಿಗಳಿಗೆ ಈ ಘಟನೆ ತೀವ್ರ ಆಘಾತವನ್ನುಂಟುಮಾಡಿದೆ.

ಊರ್ವಶಿ ಚಿತ್ರಮಂದಿರವು 1970ರಲ್ಲಿ ವರನಟ ಡಾ ರಾಜ್‌ಕುಮಾರ್



ಉದಯವಾಹಿನಿ ಚಿತ್ರ

ಅವರಿಂದ ಅದ್ದೂರಿಯಾಗಿ ಲೋಕಾರ್ಪಣೆಗೊಂಡಿತ್ತು. ಸುಮಾರು 1,100 ಆಸನಗಳ ಬೃಹತ್ ಸಾಮರ್ಥ್ಯ ಹೊಂದಿದ್ದ ಈ ಏಕಪರದೆ ಚಿತ್ರಮಂದಿರವು ಕನ್ನಡ, ತಮಿಳು, ತೆಲುಗು, ಮಲಯಾಳಂ ಹಾಗೂ ಹಿಂದಿ ಸೇರಿದಂತೆ ಐದು ಭಾಷೆಗಳ 5,000ಕ್ಕೂ ಹೆಚ್ಚು ಚಲನಚಿತ್ರಗಳಿಗೆ ಸಾಕ್ಷಿಯಾಗಿತ್ತು.

ಅದರಲ್ಲೂ, ಹ್ಯಾಟ್ರಿಕ್ ಹೀರೋ ಶಿವರಾಜ್ ಕುಮಾರ್ ಅಭಿನಯದ ಏಕೆ 47 ಸಿನಿಮಾ ಇಲ್ಲೇ ಬರೋಬ್ಬರಿ 100 ದಿನಗಳ ಕಾಲ ಯಶಸ್ವಿ ಪ್ರದರ್ಶನ ಕಂಡು ಸಿನಿರಂಗದಲ್ಲಿ ದೊಡ್ಡ ಇತಿಹಾಸವನ್ನೇ ನಿರ್ಮಿಸಿತ್ತು.1970 ರಲ್ಲಿ ಜಮೀನಿನ ಮೂಲ ಮಾಲೀಕರಾದ ಬಾಸೆಟ್ಟಿ ಟ್ರಸ್ಟ್ ಅವರಿಂದ ಶ್ರೀನಿವಾಸ ಎಂಟರ್‌ಪ್ರೈಸಸ್ ಸಂಸ್ಥೆಯು ಜಾಗವನ್ನು ಲೀಸ್‌ಗೆ ಪಡೆದು ಚಿತ್ರಮಂದಿರವನ್ನು ನಿರ್ಮಿಸಿತ್ತು.

ಈ ಗುತ್ತಿಗೆಯ ಅವಧಿಯು 2018ರ ಏಪ್ರಿಲ್ 23ರಂದೇ ಮುಕ್ತಾಯಗೊಂಡಿತ್ತು. ಹಾಗಾಗಿ, ನಿಯಮಗಳ ಪ್ರಕಾರ ಮುಂದುವರಿಸಲು ಮಾಲೀಕರ ಒಪ್ಪಿಗೆ ಬೇಕಿತ್ತು, ಆದರೆ ಟ್ರಸ್ಟ್ ಒಪ್ಪಿಗೆ ನೀಡದೆ ಜಾಗ ತೆರವುಗೊಳಿಸಲು ಕೋರಿ ನ್ಯಾಯಾಲಯದ ಮೊರೆ ಹೋಯಿತು. ಕೆಳ ನ್ಯಾಯಾಲಯದ ನಂತರ ಕರ್ನಾಟಕ ಹೈಕೋರ್ಟ್ ಜಾಗವನ್ನು ಮಾಲೀಕರಿಗೆ ಹಸ್ತಾಂತರಿಸಲು ಗಡುವು ನೀಡಿತ್ತು.

## ನೂತನ ಅತ್ಯಾಧುನಿಕ ನೇತ್ರ ಆರೈಕೆ ಕೇಂದ್ರ ಆರಂಭ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ದೇಶದ ಪ್ರಮುಖ ನೇತ್ರ ಆರೈಕೆ ಜಾಲಗಳಲ್ಲಿ ಒಂದಾದ ಡಾ. ಅಗರ್ವಾಲ್ಸ್ ಕಣ್ಣಿನ ಆಸ್ಪತ್ರೆ, ಬೆಂಗಳೂರಿನ ಸರ್ಜಾಪುರದಲ್ಲಿ ತನ್ನ ನೂತನ ಅತ್ಯಾಧುನಿಕ ನೇತ್ರ ಆರೈಕೆ ಕೇಂದ್ರವನ್ನು ಇಂದು ಆರಂಭಿಸಿದೆ. ಸಂಪೂರ್ಣ ನೇತ್ರ ಆರೈಕೆ ಕೇಂದ್ರವಾಗಿ ವಿನ್ಯಾಸಗೊಳಿಸಲಾಗಿರುವ ಈ ಕೇಂದ್ರದಲ್ಲಿ ಅತ್ಯಾಧುನಿಕ ಡಯಾಗ್ನೋಸ್ಟಿಕ್ ಸೌಲಭ್ಯಗಳು, ಸ್ಟೆರೈಲ್ ಮಾಡ್ಯುಲರ್ ಆಪರೇಷನ್ ಥಿಯೇಟರ್‌ಗಳನ್ನು ಹೊಂದಿರುವ ಪ್ರತ್ಯೇಕ ಶಸ್ತ್ರಚಿಕಿತ್ಸಾ ವಿಭಾಗ ಹಾಗೂ ಕ್ಯಾಟರಾಕ್ಟ್, ರಿಫ್ರ್ಯಾಕ್ಟಿವ್/ಗ್ಲಾಕೋಮಾ, ರೆಟಿನಾ ಮತ್ತು ಪೀಡಿಯಾಟ್ರಿಕ್ ನೇತ್ರವಿಜ್ಞಾನ ಸೇರಿದಂತೆ ವಿವಿಧ ಸೂಪರ್ ಸ್ಪೆಷಾಲಿಟಿ ಕ್ಲಿನಿಕ್ಗಳು ಒಂದೇ ಸೂರಿನಡಿ ಲಭ್ಯವಿವೆ. ಇಲ್ಲಿ ಕ್ಯಾಟರಾಕ್ಟ್ ಮತ್ತು ರಿಫ್ರ್ಯಾಕ್ಟಿವ್ ಶಸ್ತ್ರಚಿಕಿತ್ಸೆಗಳು ರೆಟಿನಾ ಮತ್ತು ಗ್ಲಾಕೋಮಾ ಆರೈಕೆ, ಕಾರ್ನಿಯಾ ಚಿಕಿತ್ಸೆ, ಮತ್ತು ಕೆರಾಟೋಕೋನಸ್ ನಿರ್ವಹಣೆ, ಮಕ್ಕಳ ನೇತ್ರ ಆರೈಕೆ, ಒಕ್ಯುಲೋಪ್ಲಾಸ್ಟಿ, ಕಾಂಟ್ಯಾಕ್ಟ್ ಲೆನ್ಸ್ ಸೇವೆಗಳು, ಇನ್-ಹೌಸ್ ಫಾರ್ಮಸಿ ಮತ್ತು ಸಂಪೂರ್ಣ ಡಯಾಗ್ನೋಸ್ಟಿಕ್ ಬೆಂಬಲ ಸೇರಿದಂತೆ ಹಲವು ಸೇವೆಗಳು ಲಭ್ಯವಿವೆ.ಡಾ. ಶ್ರೀನಿವಾಸನ್ ಜಿ. ರಾವ್, ರೀಜನಲ್ ಹೆಡ್ ಕ್ಲಿನಿಕಲ್ ಸರ್ವಿಸಸ್, ಕರ್ನಾಟಕ, ಡಾ. ಅಗರ್ವಾಲ್ಸ್ ಕಣ್ಣಿನ ಆಸ್ಪತ್ರೆ, ಸರ್ಜಾಪುರ, ಮಾತನಾಡಿ, ಸರ್ಜಾಪುರ ಕೇಂದ್ರವನ್ನು ಅತ್ಯಾಧುನಿಕ ಡಯಾಗ್ನೋಸ್ಟಿಕ್ಸ್‌ನಿಂದ ಹಿಡಿದು ಸಂಕೀರ್ಣ ಶಸ್ತ್ರಚಿಕಿತ್ಸಾ ವಿಧಾನಗಳವರೆಗೆ ಪ್ರತಿಯೊಂದು ಹಂತದ ನೇತ್ರ ಆರೈಕೆಯನ್ನು ಒಂದೇ ಸೂರಿನಡಿ ಒದಗಿಸುವ ಉದ್ದೇಶದಿಂದ ನಿರ್ಮಿಸಲಾಗಿದೆ.

## IASಅಧಿಕಾರಿ ಗಂಗ್ವಾರ್ ಮನೆ ಮೇಲೆ ED ದಾಳಿ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಲೋಕಸೇವಾ ಆಯೋಗದ ಪರೀಕ್ಷಾ ಅಕ್ರಮ ಹಾಗೂ ಭ್ರಷ್ಟಾಚಾರದ ಜೇನುಗೂಡಿಗೆ ಕೈಹಾಕಿರುವ ಜಾರಿ ನಿರ್ದೇಶನಾಲಯದ (ಅಧಿಕಾರಿಗಳು, ಭಾನುವಾರ ಮಧ್ಯಾಹ್ನ ಹಿರಿಯ ಐಎಎಸ್ ಅಧಿಕಾರಿ ಜ್ಞಾನೇಂದ್ರ ಕುಮಾರ್ ಗಂಗ್ವಾರ್ ಅವರಿಗೆ ಸೇರಿದ ಬೆಂಗಳೂರು ಮತ್ತು ಉತ್ತರ ಪ್ರದೇಶದ ನಿವಾಸಗಳ ಮೇಲೆ ಏಕಕಾಲದಲ್ಲಿ ದಾಳಿ ನಡೆಸಿದ್ದಾರೆ. ದಾಳಿಯ ವೇಳೆ ತನಿಖಾ ಸಂಸ್ಥೆಗೆ ತೀವ್ರ ಪ್ರತಿರೋಧ ಎದುರಾಗಿದ್ದು, ಸ್ಥಳದಲ್ಲಿ ಭಾರೀ ಹೈಡ್ರಾಮಾ ಸೃಷ್ಟಿಯಾಗಿದೆ.

2016ನೇ ಬ್ಯಾಚ್‌ನ ಐಎಎಸ್ ಅಧಿಕಾರಿ ಗಂಗ್ವಾರ್ ಸದ್ಯ ಕರ್ನಾಟಕ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ ಎಂಎಸ್‌ಎಂಇ ನಿರ್ದೇಶಕರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಪಶುವೈದ್ಯಾಧಿಕಾರಿಗಳ ನೇಮಕಾತಿ ಪರೀಕ್ಷೆ ನಡೆದ ಸಂದರ್ಭದಲ್ಲಿ ಅವರು ಕೆಪಿಎಸ್‌ಸಿಯಲ್ಲಿ ಪರೀಕ್ಷಾ ನಿಯಂತ್ರಕರಾಗಿ ಸೇವೆ ಸಲ್ಲಿಸಿದ್ದರು.

ಕಳೆದ ಕೆಲ ದಿನಗಳಿಂದ ಗಂಗ್ವಾರ್ ಅವರು ಹಲವು ಕಾರಣಗಳಿಂದ ಸುದ್ದಿಯಲ್ಲಿದ್ದಾರೆ. ಶನಿವಾರ ಅವರು ನಾಪತ್ತೆಯಾಗಿದ್ದಾರೆ ಎಂಬ ವರದಿಗಳು ಹರಿದಾಡಿದ್ದವು. ಬಳಿಕ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಸ್ಪಷ್ಟನೆ ನೀಡಿ, ಕುಟುಂಬದ ತುರ್ತು ಪರಿಸ್ಥಿತಿ ಹಿನ್ನೆಲೆಯಲ್ಲಿ ಗಂಗ್ವಾರ್ ಉತ್ತರ ಪ್ರದೇಶದಲ್ಲಿರುವ ತಮ್ಮ ಸ್ವಗ್ರಾಮಕ್ಕೆ ತೆರಳಿದ್ದರು ಎಂದು ತಿಳಿಸಿದ್ದರು. ಬೆಂಗಳೂರಿನ ವಲಯದ ಇಡಿ ಅಧಿಕಾರಿಗಳು ಸಿಆರ್‌ಪಿಎಫ್ ಸಿಬ್ಬಂದಿಯೊಂದಿಗೆ ಜಯಮಹಲ್ ರಸ್ತೆಯ ಸಮೀಪದಲ್ಲಿರುವ ಗಂಗ್ವಾರ್ ಅವರ ಅಪಾರ್ಟ್‌ಮೆಂಟ್‌ಗೆ ತೆರಳಿದರು. ಆದರೆ, ಗಂಗ್ವಾರ್ ಮನೆಯಲ್ಲಿ ಇಲ್ಲ ಎಂದು ಹೇಳಿದ ಭದ್ರತಾ ಸಿಬ್ಬಂದಿ ಆರಂಭದಲ್ಲಿ ಅಧಿಕಾರಿಗಳನ್ನು ಒಳಗೆ ಬಿಡಲಿಲ್ಲ ಎನ್ನಲಾಗಿದೆ. ಗಂಗ್ವಾರ್ ಅವರನ್ನು ಸಂಪರ್ಕಿಸಲು ಅಧಿಕಾರಿಗಳು ಪ್ರಯತ್ನಿಸಿದಾಗ ಅವರ ಮೊಬೈಲ್ ಫೋನ್ ಸ್ವಿಚ್ ಆಫ್ ಆಗಿತ್ತು ಎಂದು ತಿಳಿದುಬಂದಿದೆ.

## ಮಾರಕಾಸ್ತ್ರಗಳಿಂದ ಕೊಚ್ಚಿ ಫಾರ್ಮಸಿ ಮಾಲೀಕನ ಹತ್ಯೆ

• ಉದಯವಾಹಿನಿ, ಬೆಂಗಳೂರು

ನಗರದ ಮಡಿವಾಳ ಅಂಡರ್‌ಪಾಸ್ ಸಮೀಪ ಶನಿವಾರ ರಾತ್ರಿ 35 ವರ್ಷದ ಮೆಡಿಕಲ್ ಸ್ಟೋರ್ ಮಾಲೀಕನನ್ನು ದುಷ್ಕರ್ಮಿಗಳು ಮಾರಕಾಸ್ತ್ರಗಳಿಂದ ಹತ್ಯೆ ಮಾಡಿದ್ದಾರೆ. ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ, ಈ ಹಿಂದೆ ಭಾಗಿಯಾಗಿದ್ದ ಕೊಲೆ ಪ್ರಕರಣಕ್ಕೆ ಪ್ರತೀಕಾರವಾಗಿ ಈ ಕೃತ್ಯ ನಡೆದಿರಬಹುದು ಎಂದು ಮೃತನ ಸಹೋದರರು ಪೊಲೀಸರು ಶಂಕಿಸಿದ್ದಾರೆ. ಮೃತರನ್ನು ಮಂಗಮ್ಮನಪಾಳ್ಯದ ನಿವಾಸಿ ಸುಹೇಲ್ ಮೊಹಮ್ಮದ್ ಎಂದು ಗುರುತಿಸಲಾಗಿದೆ. ರಾತ್ರಿ 10ರ ಸುಮಾರಿಗೆ ಸುಹೇಲ್ ಮಡಿವಾಳದಿಂದ ಕೋರಮಂಗಲದತ್ತ ತೆರಳುತ್ತಿದ್ದಾಗ, ಸಂಚಾರ ದಟ್ಟಣೆಯ ನಡುವೆ ಎರಡು ಬೈಕ್‌ಗಳಲ್ಲಿ ಬಂದ ನಾಲ್ವರು ದುಷ್ಕರ್ಮಿಗಳು ಆತನನ್ನು ಅಡ್ಡಗಟ್ಟಿ ಕತ್ತಿಗಳಿಂದ ದಾಳಿ ನಡೆಸಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.ದಾಳಿಯಲ್ಲಿ ಸುಹೇಲ್‌ಗೆ ಗಂಭೀರ ಗಾಯಗಳಾಗಿದ್ದು, ಅತಿಯಾದ ರಕ್ತಸ್ರಾವದಿಂದ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಹಂತಕರು ದಾಳಿ ನಡೆಸಿದ ಬಳಿಕ ಮಾರಕಾಸ್ತ್ರಗಳನ್ನು ಸ್ಥಳದಲ್ಲೇ ಬಿಟ್ಟು ಪರಾರಿಯಾಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.ಜನವರಿ 13ರಂದು ಬಂಡೇಪಾಳ್ಯದಲ್ಲಿ ಶಬ್ಬೀರ್ ಎಂಬ ರೌಡಿಶೀಟರ್ ಹತ್ಯೆಯಾಗಿದ್ದ ಪ್ರಕರಣಕ್ಕೂ ಈ ಕೊಲೆಗೂ ಸಂಬಂಧವಿರಬಹುದು ಎಂದು ಪೊಲೀಸರು ಶಂಕಿಸಿದ್ದಾರೆ.

## ಗುಂಡಿನ ದಾಳಿ: ಸಿಬಿಐ ತನಿಖೆಗೆ ಬಿಜೆಪಿಆಗ್ರಹ

• ಉದಯವಾಹಿನಿ, ಬೆಂಗಳೂರು

ಆ 15ರಂದು ಚಾಮರಾಜನಗರದಲ್ಲಿ ನಡೆದ ಅರಣ್ಯ ಗುಂಡಿನ ದಾಳಿ ಪ್ರಕರಣಕ್ಕೆ ಸಂಬಂಧಿಸಿದಂತೆ ಸರ್ಕಾರ ನೀಡಿರುವ ಅಧಿಕೃತ ವಿವರಣೆಯಲ್ಲಿ 'ಗಂಭೀರ ವ್ಯತ್ಯಾಸಗಳು' ಕಂಡುಬಂದಿವೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದ್ದಾರೆ. ಬಿಜೆಪಿಯ ಸತ್ಯಶೋಧನಾ ಸಮಿತಿ ನಡೆಸಿದ ಪರಿಶೀಲನೆಯಲ್ಲಿ ಹಲವು ಅಂಶಗಳು ಅನುಮಾನ ಮೂಡಿಸಿವೆ. ಮೃತಪಟ್ಟ ಮೂವರಿಗೂ ಅತಿ ಸಮೀಪದಿಂದ ಗುಂಡು ಹಾರಿಸಲಾಗಿದೆ ಎಂದು ಬಿಜೆಪಿ ಆರೋಪಿಸಿದ್ದು, ಸಾರ್ವಜನಿಕವಾಗಿ ಮರಣೋತ್ತರ ಪರೀಕ್ಷೆಯ ವರದಿಗಳನ್ನು ಬಿಡುಗಡೆ ಮಾಡದಿರುವ ಬಗ್ಗೆಯೂ ಪ್ರಶ್ನಿಸಿದೆ. ಪ್ರಕರಣದ ಪ್ರಮುಖ ಸಾಕ್ಷಿ ಎಂದು ಹೇಳಲಾಗಿರುವ ಮಹಿಮಾ ದಾಸ್ ನಾಪತ್ತೆಯಾಗಿದ್ದಾರೆ. ಅವರನ್ನು ಅರಣ್ಯ ಇಲಾಖೆ ಅಧಿಕಾರಿಗಳು ವಶಕ್ಕೆ ಪಡೆದುಕೊಂಡಿದ್ದಾರೆ ಎಂದು ಬಿಜೆಪಿ ಹೇಳಿಕೊಂಡಿದೆ. ಪ್ರಕರಣದ ಸತ್ಯಾಂಶವನ್ನು ಬಹಿರಂಗಪಡಿಸುವಂತೆ ಒತ್ತಾಯಿಸಿರುವ ವಿಜಯೇಂದ್ರ, ಸಿಬಿಐ ತನಿಖೆ ನಡೆಸಬೇಕು ಎಂದು ಆಗ್ರಹಿಸಿದ್ದಾರೆ.

ರಾಜ್ಯ ಸರ್ಕಾರ ವಾಸ್ತವಾಂಶಗಳನ್ನು ಮುಚ್ಚಿಡುತ್ತಿದೆ ಎಂದು ಆರೋಪಿಸಿ ಅರಣ್ಯ ಸಚಿವರು ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದ್ದಾರೆ.

# ಪತ್ರಕರ್ತರ ಸಮಸ್ಯೆಗಳಿಗೆ ಕಾನೂನು ಚೌಕಟ್ಟಿನಲ್ಲಿ ನೆರವು: ಸಿಎಂ ಡಿ.ಕೆ ಶಿವಕುಮಾರ್

### ನಿಮ್ಮದೊಂದು ಚಿತ್ರ ಒಂದು ವರ್ಷದ್ದಾಗಿರಬಹುದು, 50, 100 ವರ್ಷದ್ದಾಗಿರಬಹುದು ಅಥವಾ ಅದಕ್ಕಿಂತಲೂ ಹಳೆಯದಾಗಿರಬಹುದು.

• ಉದಯವಾಹಿನಿ, ಬೆಂಗಳೂರು

1 ಜನರು ಹೆಚ್ಚಿನ ನಂಬಿಕೆ ಇಡುತ್ತಾರೆ
2 ಬದುಕಿನಲ್ಲಿ ನಡೆದ ಘಟನೆಗಳಿಗೆ ಸಾಕ್ಷಿ
3 ಓದುಗರ ಮೇಲೆ ಸುದ್ದಿಯ ಪರಿಣಾಮ

ಒಂದು ಛಾಯಾಚಿತ್ರ ಕೇವಲ ಚಿತ್ರವಲ್ಲ,ಅದು ವ್ಯಕ್ತಿಯ ಬದುಕು, ಸಮಾಜದ ಬೆಳವಣಿಗೆ ಹಾಗೂ ಕಾಲಘಟ್ಟದ ಇತಿಹಾಸವನ್ನು ದಾಖಲಿಸುವ ಮಹತ್ವದ ಸಾಕ್ಷಿ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಹೇಳಿದರು.

ಬೆಂಗಳೂರಿನ ಚಿತ್ರಕಲಾ ಪರಿಷತ್ ನಲ್ಲಿ ಛಾಯಾಗ್ರಾಹಕರ ಸಂಘ ಬೆಂಗಳೂರು ವತಿಯಿಂದ ಆಯೋಜಿಸಿದ್ದ ವಿಶ್ವ ಛಾಯಾಗ್ರಹಣ ದಿನದ ಅಂಗವಾಗಿ 'ಫ್ರೋಜನ್ ಮೆಮೊರೀಸ್' - ಛಾಯಾಚಿತ್ರ ಪ್ರದರ್ಶನ ಕಾರ್ಯಕ್ರಮಕ್ಕೆ ಭೇಟಿ ನೀಡಿ ಮಾತನಾಡಿದ ಅವರು ಒಬ್ಬ ವ್ಯಕ್ತಿಯ ಇತಿಹಾಸವನ್ನು ದಾಖಲಿಸುವಲ್ಲಿ ಛಾಯಾಚಿತ್ರದ ಪಾತ್ರ ಅತ್ಯಂತ ಮಹತ್ವದ್ದು ಎಂದು ಹೇಳಿದರು. ನಿಮ್ಮದೊಂದು ಚಿತ್ರ ಒಂದು ವರ್ಷದ್ದಾಗಿರಬಹುದು, 50, 100 ವರ್ಷದ್ದಾಗಿರಬಹುದು ಅಥವಾ ಅದಕ್ಕಿಂತಲೂ ಹಳೆಯದಾಗಿರಬಹುದು. ಆದರೆ ಅದು ಒಬ್ಬ ವ್ಯಕ್ತಿಯ ಇತಿಹಾಸವನ್ನು ಬರೆಯುವಂತ ಸಾಕ್ಷಿಯಾಗುತ್ತದೆ. ಒಂದು ಚಿತ್ರ ಸಣ್ಣದು ಎಂದು ಭಾವಿಸಬಾರದು. ನಮ್ಮ ಬದುಕಿನಲ್ಲಿ ನಡೆದ ಘಟನೆಗಳಿಗೆ ಸಾಕ್ಷಿ ಏನು ಎಂಬುದನ್ನು ತೋರಿಸುವಲ್ಲಿ ಛಾಯಾಚಿತ್ರದ ಪಾತ್ರ ಬಹಳ ದೊಡ್ಡದು, ಎಂದು ಅಭಿಪ್ರಾಯಪಟ್ಟರು.

ಕಿವಿಯಿಂದ ಕೇಳುವುದಕ್ಕಿಂತ ಕಣ್ಣಿನಿಂದ ನೋಡುವುದಕ್ಕೆ ಜನರು ಹೆಚ್ಚಿನ ನಂಬಿಕೆ ಇಡುತ್ತಾರೆ. ಮಾಧ್ಯಮದಲ್ಲೂ ಇದೇ ಕಾರಣಕ್ಕೆ ಚಿತ್ರಕ್ಕೆ ಬಹಳ ಮಹತ್ವವಿದೆ ಎಂದು ಹೇಳಿದರು. ಪತ್ರಿಕೆಯಲ್ಲಿ ಎಷ್ಟೇ ಆಳವಾದ ವಾಸ್ತವಾಂಶಗಳನ್ನು ಪ್ರಕಟಿಸಿದರೂ, ಅದರೊಂದಿಗೆ ಸೂಕ್ತ ಚಿತ್ರವಿಲ್ಲದಿದ್ದರೆ ಓದುಗರ ಮೇಲೆ ಸುದ್ದಿಯ ಪರಿಣಾಮ ಕಡಿಮೆಯಾಗುತ್ತದೆ. ಇದೇ ಕಾರಣಕ್ಕೆ ದೃಶ್ಯ ಮಾಧ್ಯಮಗಳು ವೇಗವಾಗಿ ಬೆಳೆದಿವೆ


ಉದಯವಾಹಿನಿ ಚಿತ್ರ

ಎಂದರು. ಯಾವುದೇ ಪತ್ರಿಕೆಯಾಗಿರಲಿ, ಎಷ್ಟೇ ಆಳವಾಗಿ ವಾಸ್ತವಾಂಶ ಬರೆದಿದ್ದರೂ ಅದರೊಂದಿಗೆ ಒಂದು ಚಿತ್ರ ಇಲ್ಲದಿದ್ದರೆ ಆ ಸುದ್ದಿಯ ಬೆಲೆ ಕಡಿಮೆಯಾಗುತ್ತದೆ. ಅದಕ್ಕಾಗಿಯೇ ಟಿವಿ ಮಾಧ್ಯಮ ಇಷ್ಟು ದೊಡ್ಡ ಮಟ್ಟದಲ್ಲಿ ಸ್ಪರ್ಧಾತ್ಮಕವಾಗಿ ಬೆಳೆದಿದೆ. ನಂತರ ಸಾಮಾಜಿಕ ಮಾಧ್ಯಮವೂ ವೇಗವಾಗಿ ಬೆಳೆಯಿತು. ಟಿವಿಯಲ್ಲಿ ಜನರು ಕಣ್ಣಾರೆ ನೋಡುವ ಚಿತ್ರಗಳನ್ನು ಹೆಚ್ಚು ನಂಬುತ್ತಾರೆ'' ಎಂದು ಹೇಳಿದರು. ''ನೀವು ಇಲ್ಲಿ 40 ಜನ ಇರಬಹುದು, 100 ಜನ ಇರಬಹುದು ಅಥವಾ 4,000 ಜನ ಇರಬಹುದು. ಆದರೆ ನಿಮ್ಮ ಕ್ಯಾಮೆರಾದ ಮೂಲಕ ಹೊರಬರುವ ಚಿತ್ರಗಳನ್ನು ರಾಜ್ಯದ ಏಳು ಕೋಟಿ ಜನರು ನೋಡುತ್ತಾರೆ. ನಿಮ್ಮ ಸಂದೇಶ ಮತ್ತು ಚಿತ್ರಗಳು ಇಡೀ ವಿಶ್ವವನ್ನೇ ತಲುಪುತ್ತವೆ. ಹೀಗಾಗಿ ನಿಮ್ಮ ಕ್ಯಾಮೆರಾದ ಮೇಲೆ ನಮಗೆ ನಂಬಿಕೆ ಇದೆ,'' ಎಂದು ಹೇಳಿದರು.

ಮಾಧ್ಯಮ ಕ್ಷೇತ್ರದ ಪ್ರತಿನಿಧಿಗಳು ಮುಂದಿಟ್ಟಿರುವ ಬೇಡಿಕೆಗಳ ಬಗ್ಗೆ ಸರ್ಕಾರಕ್ಕೆ ಅರಿವಿದೆ ಎಂದು ಮುಖ್ಯಮಂತ್ರಿ ಹೇಳಿದರು. ಪತ್ರಿಕೋದ್ಯಮ ಕ್ಷೇತ್ರದಲ್ಲಿರುವ ಎಲ್ಲರಿಗೂ ಒಂದೇ ರೀತಿಯಲ್ಲಿ ಯಾವ ರೀತಿಯಲ್ಲಿ ಸಹಾಯ ಮಾಡಬಹುದು ಎಂಬುದನ್ನು ನಾನು ಖಂಡಿತವಾಗಿ ಆಲೋಚಿಸುತ್ತೇನೆ ಎಂದರು. ಮಾಧ್ಯಮವು ರಾಜಕೀಯ ವ್ಯವಸ್ಥೆಯ ಸಮಾನಾಂತರ ಶಕ್ತಿಯಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಹೇಳಿದರು. ನಾನು ಮುಖ್ಯಮಂತ್ರಿ ಆಗಿರುವುದು ಮುಖ್ಯವಲ್ಲ. ರಾಜಕೀಯದಲ್ಲಿ ಪ್ರತಿಯೊಬ್ಬರ ಬದುಕಿನಲ್ಲೂ ನೀವು ಸಮಾನಾಂತರವಾಗಿ ಬೆಂಬಲವಾಗಿ ನಿಂತಿದ್ದೀರಿ. ಜನರನ್ನು ಬೆಳೆಸಿದ್ದೀರಿ, ನಾಯಕರನ್ನು ಬೆಳೆಸಿದ್ದೀರಿ. ಸಮಾಜದಲ್ಲಿ ನಡೆಯುವ ಘಟನೆಗಳನ್ನು ದಾಖಲಿಸುವ ಮೂಲಕ ಇತಿಹಾಸವನ್ನು ಕಟ್ಟಿಕೊಟ್ಟಿದ್ದೀರಿ,'' ಎಂದರು. ಮಾಧ್ಯಮ ಕ್ಷೇತ್ರದ ಪ್ರತಿನಿಧಿಗಳ ಶ್ರಮ, ಸೇವೆ ಮತ್ತು ಸೃಜನಶೀಲತೆಯನ್ನು ಅಭಿನಂದಿಸಿದ ಮುಖ್ಯಮಂತ್ರಿ, ಅವರ ಸಮಸ್ಯೆಗಳಿಗೆ ಸ್ಪಂದಿಸುವುದಾಗಿ ಭರವಸೆ ನೀಡಿದರು.

> ಮಾಧ್ಯಮ ಪ್ರತಿನಿಧಿಗಳ ಸಂಖ್ಯೆ ಕಡಿಮೆಯಿದ್ದರೂ ಅವರ ವ್ಯಾಪ್ತಿ ಅಪಾರವಾಗಿದೆ. ಸ್ಥಳೀಯವಾಗಿ ತೆಗೆದ ಒಂದು ಚಿತ್ರ ಕೆಲವೇ ಕ್ಷಣಗಳಲ್ಲಿ ರಾಜ್ಯದಾದ್ಯಂತ, ದೇಶದಾದ್ಯಂತ ಹಾಗೂ ಜಗತ್ತಿನಾದ್ಯಂತ ತಲುಪುವ ಸಾಮರ್ಥ್ಯ ಹೊಂದಿದೆ ಎಂದರು. -ಸಿಎಂ ಡಿ.ಕೆ ಶಿವಕುಮಾರ್

> ಒಂದು ಚಿತ್ರ ನೂರಾರು ಅರ್ಥಗಳನ್ನು ನೀಡಬಲ್ಲದು. ಕಾಲ ಕಳೆದಂತೆ ಅದರ ಮೌಲ್ಯ ಮತ್ತಷ್ಟು ಹೆಚ್ಚಾಗುತ್ತದೆ. ಹೀಗಾಗಿ ಛಾಯಾಗ್ರಾಹಕರು ಸೆರೆಹಿಡಿಯುವ ಪ್ರತಿಯೊಂದು ದೃಶ್ಯವೂ ಭವಿಷ್ಯದ ಪೀಳಿಗೆಗೆ ದಾಖಲೆಯಾಗಬಹುದು ಎಂದು ಹೇಳಿದರು. -ಸಿಎಂ

**ಸಿಎಂ ಡಿ.ಕೆ ಶಿವಕುಮಾರ್ ಭರವಸೆ**

ನಿಮ್ಮ ಸಮಸ್ಯೆಗಳು ಏನು ಎಂಬುದು ನನಗೆ ಅರಿವಿದೆ. ಸಂಬಂಧಪಟ್ಟವರೊಂದಿಗೆ ಚರ್ಚಿಸಿ, ಕಾನೂನು ಚೌಕಟ್ಟಿನೊಳಗೆ ನಿಮಗೆ ಯಾವ ರೀತಿಯಲ್ಲಿ ನೆರವು ನೀಡಲು ಸಾಧ್ಯವೋ ಅದನ್ನು ಖಂಡಿತವಾಗಿ ಮಾಡುವ ಬಗ್ಗೆ ಪರಿಶೀಲಿಸುತ್ತೇನೆ ಎಂದು ಭರವಸೆ ನೀಡಿದರು.

## ಬಗರ್ ಹುಕುಂ ಜಮೀನು ಪ್ರಕರಣಗಳಿಗೆ ಡಿಜಿಟಲ್ ಪರಿಹಾರ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ದೀರ್ಘಕಾಲದಿಂದ ಬಾಕಿ ಉಳಿದಿರುವ ಬಗರ್ ಹುಕುಂ (ಅಕ್ರಮ-ಸಕ್ರಮ) ಭೂಮಿ ಮಂಜೂರಾತಿ ಅರ್ಜಿಗಳ ಶೀಘ್ರ ವಿಲೇವಾರಿಗಾಗಿ ಸರ್ಕಾರಿ ತಂತ್ರಾಂಶವನ್ನು ಮೇಲ್ದರ್ಜೆಗೇರಿಸಲಾಗುವುದು ಎಂದು ಉಪ ಮುಖ್ಯಮಂತ್ರಿ ಜಿ. ಪರಮೇಶ್ವರ್ ಅವರು ಹೇಳಿದ್ದಾರೆ.

ವಿಧಾನಸಭೆಯಲ್ಲಿ ಚಿಕ್ಕಮಗಳೂರು ಶಾಸಕ ಎಚ್.ಡಿ. ತಮ್ಮಯ್ಯ ಅವರು ಬಾಕಿ ಇರುವ ಅರ್ಜಿಗಳು ಹಾಗೂ ಬಗೈರ್ ಹುಕುಂ ತಂತ್ರಾಂಶದಲ್ಲಿನ ಸಮಸ್ಯೆಗಳ ಕುರಿತು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಕರ್ನಾಟಕ ಭೂಕಂದಾಯ ಕಾಯ್ದೆ-1964ರ ಸೆಕ್ಷನ್ 94ರ ಅಡಿಯಲ್ಲಿ ಅನಧಿಕೃತವಾಗಿ ಸಾಗುವಳಿ ಮಾಡುತ್ತಿರುವ ಭೂಮಿಯನ್ನು ಸಕ್ರಮಗೊಳಿಸಲು ಅವಕಾಶ ಕಲ್ಪಿಸಲಾಗಿದೆ.

2023ರ ಸೆಪ್ಟೆಂಬರ್ 26ರಿಂದ 2024ರ ಜನವರಿ 21ರವರೆಗೆ 50-53 ನಮೂನೆಗಳಲ್ಲಿ ಸಲ್ಲಿಸಲಾದ ಅರ್ಜಿಗಳನ್ನು ಸರ್ಕಾರದ ವೆಬ್‌ಸೈಟ್‌ನಲ್ಲಿ ವಿಲೇವಾರಿಗಾಗಿ ಸ್ವೀಕರಿಸಲಾಗಿತ್ತು. ಈ ಅರ್ಜಿಗಳು ಪ್ರಸ್ತುತ ವಿವಿಧ ಹಂತಗಳಲ್ಲಿ ಬಾಕಿ ಉಳಿದಿವೆ ಎಂದು ಹೇಳಿದರು.

ಈ ಕುರಿತು ಡಿಸಿಎಂ ನೀಡಿದ ಲಿಖಿತ ಉತ್ತರದಲ್ಲಿ, ಭೂಮಿ ಮಂಜೂರಾಗಿದ್ದು, ಸಾಗುವಳಿ ಚೀಟಿ ನೀಡಲಾಗಿದ್ದರೂ ಖಾತೆಯಲ್ಲಿ ದಾಖಲಾಗದ ಪ್ರಕರಣಗಳನ್ನು 50-53 ನಮೂನೆಗಳ ಭೌತಿಕ ಪರಿಶೀಲನಾ ಸಮಿತಿಯಲ್ಲಿ ಪರಿಶೀಲಿಸಲಾಗುತ್ತಿಲ್ಲ ಎಂದು ಸ್ಪಷ್ಟಪಡಿಸಲಾಗಿದೆ. ಕಂದಾಯ ಆಯುಕ್ತಾಲಯದ ನಿರ್ದೇಶನದಂತೆ, ಇಂತಹ ಬಾಕಿ ಪ್ರಕರಣಗಳನ್ನು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು (ಪಿಡಿಒ)


ಉದಯವಾಹಿನಿ ಚಿತ್ರ

ಮೊದಲು ಪ್ರೊಫಾರ್ಮಾ 1-5 ತಂತ್ರಾಂಶದಲ್ಲಿ ದಾಖಲಿಸಬೇಕು. ಬಳಿಕ ಅವುಗಳನ್ನು ಪ್ರೊಫಾರ್ಮಾ-1 ವ್ಯವಸ್ಥೆಗೆ ವರ್ಗಾಯಿಸಬೇಕು ಎಂದು ಸೂಚಿಸಲಾಗಿದೆ. ನಂತರ ಈ ಪ್ರಕರಣಗಳನ್ನು ಬಗರ್ ಹುಕುಂ ತಂತ್ರಾಂಶಕ್ಕೆ ವರ್ಗಾಯಿಸಿ, ಖಾತೆಯಲ್ಲಿ ಅಂತಿಮವಾಗಿ ದಾಖಲಿಸಲು ಕ್ರಮ ಕೈಗೊಳ್ಳಬೇಕಿದೆ ಎಂದು ತಿಳಿಸಿದ್ದಾರೆ.

**ತಂತ್ರಾಂಶದಲ್ಲಿ ದಾಖಲಾಗಿಲ್ಲ**

ಈಗಾಗಲೇ ಭೂಮಿ ಮಂಜೂರಾಗಿ, ದಾಖಲಾಗಿರುವ ಖಾತೆದಾರರ ವಿವರಗಳು ಪ್ರೊಫಾರ್ಮಾ 1-5 ತಂತ್ರಾಂಶದಲ್ಲಿ ಲಭ್ಯವಿವೆ. ಆದರೆ, ಬಗರ್ ಹುಕುಂ ಅಡಿಯಲ್ಲಿ ಭೂಮಿ ಮಂಜೂರಾಗಿದ್ದರೂ ಖಾತೆ ದಾಖಲಾತಿ ಮತ್ತು ಸಾಗುವಳಿ ಚೀಟಿ ನೀಡಿಕೆ ಬಾಕಿ ಇರುವ ಪ್ರಕರಣಗಳು ಮಾತ್ರ ಇನ್ನೂ ತಂತ್ರಾಂಶದಲ್ಲಿ ದಾಖಲಾಗಿಲ್ಲ ಎಂದು ತಿಳಿಸಿದ್ದಾರೆ.

## 'ಅಪರಾಧಿಗಳು ಪೊಲೀಸರನ್ನೇ ಧಿಕ್ಕರಿಸುವಂತಾಗಿದೆ, ಇದು ಸರ್ಕಾರದ ಸಂಪೂರ್ಣ ವೈಫಲ್ಯ

• ಉದಯವಾಹಿನಿ, ಬೆಂಗಳೂರು

ಪುತ್ತೂರಿನಲ್ಲಿ ಹಿಂದೂ ಮಹಿಳೆಯೊಬ್ಬರ ಮೇಲೆ ನಡೆದಿದೆ ಎನ್ನಲಾದ ಹಲ್ಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಕೇಂದ್ರ ಸಚಿವೆ ಹಾಗೂ ಬಿಜೆಪಿ ಹಿರಿಯ ನಾಯಕಿ ಶೋಭಾ ಕರಂದ್ಲಾಜೆ ಅವರು, ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಸರ್ಕಾರ ವಿಫಲವಾಗಿದೆ ಎಂದು ಆರೋಪಿಸಿರುವ ಅವರು, ರಾಜಕೀಯ ರಕ್ಷಣೆಯಿಂದಾಗಿ ಅಪರಾಧಿಗಳಿಗೆ ಭಯವೇ ಇಲ್ಲದಂತಾಗಿದೆ ಎಂದು ದೂರಿದ್ದಾರೆ.

ಎಕ್ಸ್‌ನಲ್ಲಿ ವಿಡಿಯೋವೊಂದನ್ನು ಹಂಚಿಕೊಂಡಿರುವ ಶೋಭಾ ಕರಂದ್ಲಾಜೆ ಅವರು, ಮಹಿಳೆಯೊಬ್ಬರ ಮೇಲೆ ಹಾಡಹಗಲೇ ಹಲ್ಲೆ ನಡೆಸಲಾಗಿದೆ. ಬಳಿಕ ಹಲ್ಲೆ ನಡೆಸಿದವರು ಪೊಲೀಸ್ ಜೀಪ್ ಒಳಗೆ ಪ್ರವೇಶಿಸಿ, ಪೊಲೀಸರ ಸಮ್ಮುಖದಲ್ಲೇ ಹಲ್ಲೆ ಮುಂದುವರಿಸಿದ್ದಾರೆ.

ಪೊಲೀಸರ ಎದುರೇ ಅಪರಾಧಿಗಳು ಈ ರೀತಿಯಾಗಿ ವರ್ತಿಸಿರುವುದು ಅವರ 'ಧೈರ್ಯ'ವನ್ನು ತೋರಿಸುತ್ತದೆ, ಕಾಂಗ್ರೆಸ್ ಸರ್ಕಾರವೇ ಅಪರಾಧಿಗಳಿಗೆ ರಕ್ಷಣೆ ನೀಡುತ್ತಿದೆ


ಉದಯವಾಹಿನಿ ಚಿತ್ರ

ಎಂದು ಆರೋಪಿಸಿದ್ದಾರೆ. ಕರ್ನಾಟಕದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ನೀವು ಸಂಪೂರ್ಣವಾಗಿ ವಿಫಲರಾಗಿದ್ದೀರಿ. ಹಿಂದೂ ಮಹಿಳೆಯರ ಮೇಲೆ ಹಲ್ಲೆಗಳು ನಡೆಯುತ್ತಿವೆ, ಅಪರಾಧಿಗಳು ಯಾವುದೇ ಭಯವಿಲ್ಲದೆ ಕಾರ್ಯನಿರ್ವಹಿಸುತ್ತಿದ್ದಾರೆ ಮತ್ತು ಇದರ ಬೆಲೆಯನ್ನು ಕರ್ನಾಟಕದ ಜನತೆ ತೆರುತ್ತಿದ್ದಾರೆ.

ಅಪರಾಧಿಗಳಿಗೆ ಕಾಂಗ್ರೆಸ್ ಸರ್ಕಾರದ ರಕ್ಷಣೆ ಸಿಗುತ್ತಿದೆ. ಅಪರಾಧಿಗಳ ವಿರುದ್ಧದ ಪ್ರಕರಣಗಳನ್ನು ಹಿಂಪಡೆಯಲಾಗುತ್ತಿದೆ. ಇದೀಗ ಸರ್ಕಾರ ತಮ್ಮ ಬೆನ್ನಿಗಿದೆ ಎಂದು ನಂಬಿರುವ ಮತಾಂಧ, ಸಮಾಜವಿರೋಧಿ ಮತ್ತು ದೇಶವಿರೋಧಿ ಶಕ್ತಿಗಳಿಂದ ಜನರು ತೊಂದರೆ ಅನುಭವಿಸುತ್ತಿದ್ದಾರೆ ಎಂದು ಕಿಡಿಕಾರಿದ್ದಾರೆ.

## ಮನೆ ಮುಂದೆ ನಿಲ್ಲಿಸುವ ವಾಹನಕ್ಕೆ ಶುಲ್ಕ: ರಮೇಶ್ ಗೌಡ ಆಕ್ರೋಶ

• ಉದಯವಾಹಿನಿ, ಬೆಂಗಳೂರು

ಮನೆ ಮುಂದೆ ನಿಲ್ಲಿಸಲಾಗುವ ಮನೆ ಮಾಲೀಕರ ವಾಹನಗಳಿಗೂ ಪಾರ್ಕಿಂಗ್ ಶುಲ್ಕ ವಿಧಿಸುವುದಕ್ಕೆ ಜೆಡಿಎಸ್ ತೀವ್ರ ವಿರೋಧ ವ್ಯಕ್ತಪಡಿಸುತ್ತದೆ ಎಂದು ಗ್ರೇಟರ್ ಬೆಂಗಳೂರು ಅಧ್ಯಕ್ಷ ಹೆಚ್.ಎಂ. ರಮೇಶ್ ಗೌಡ ಹೇಳಿದರು.

ಪಕ್ಷದ ಕಚೇರಿ ಜೆಪಿ ಭವನದಲ್ಲಿ ಮಾಧ್ಯಮಗೋಷ್ಠಿ ಉದ್ದೇಶಿಸಿ ಮಾತನಾಡಿದ ರಮೇಶ್‌ಗೌಡ ಅವರು, ಬೆಂಗಳೂರು ನಗರ ಅಭಿವೃದ್ಧಿ ಖಾತೆ ಸಚಿವ ಕೃಷ್ಣಭೈರೇಗೌಡ ಅವರೇ ಇದ್ಯಾವ ಸೀಮೆ ಆಡಳಿತ ನಿಮ್ಮದು ವಿಧಾನಸೌಧ, ಜಿಬಿಎ, ನ್ಯಾಯಾಲಯಗಳ ಸಂಕೀರ್ಣಗಳಲ್ಲಿಯೇ ಪಾರ್ಕಿಂಗ್ ವ್ಯವಸ್ಥೆ ಮಾಡಲಾಗದ ನಿಮ್ಮ ವೈಫಲ್ಯ ಮುಚ್ಚಿಟ್ಟುಕೊಳ್ಳಲು ಸಾರ್ವಜನಿಕರ ಮೇಲೆ ಬರೆ ಹಾಕುತ್ತಿದ್ದೀರಿ. ಇದು ಎಷ್ಟು ಸರಿ ಎಂದು ಆಕ್ರೋಶ ವ್ಯಕ್ತಪಡಿಸಿದರು.

ರಾಜ್ಯ ಉಚ್ಚನ್ಯಾಯಾಲಯ, ಸಿಟಿ ನ್ಯಾಯಾಲಯಗಳ ಸಂಕೀರ್ಣ, ಮ್ಯಾಜಿಸ್ಟ್ರೇಟ್ ನ್ಯಾಯಾಲಯಗಳಲ್ಲಿ ಸಾರ್ವಜನಿಕರಿಗೆ ಪಾರ್ಕಿಂಗ್ ವ್ಯವಸ್ಥೆಯೇ ಇಲ್ಲ ಎನ್ನುವುದು ಈ ಸರ್ಕಾರಕ್ಕೆ ಗೊತ್ತಿಲ್ಲವೇ? ವಿಧಾನಸೌಧಕ್ಕೆ ಹೋಗುವ ಸಾರ್ವಜನಿಕರಿಗೂ ಪಾರ್ಕಿಂಗ್ ವ್ಯವಸ್ಥೆ ಇಲ್ಲ ಎಂದರೆ ಈ ವ್ಯವಸ್ಥೆಗೆ ಏನು ಹೇಳಬೇಕಾಗುತ್ತದೆ.


ಉದಯವಾಹಿನಿ ಚಿತ್ರ

ಪಾಲಿಕೆ ಕಚೇರಿಯಲ್ಲಿ ಪಾರ್ಕಿಂಗ್ ವ್ಯವಸ್ಥೆ ಇಲ್ಲ ಅಂದರೆ ಜಿಬಿಎಗೆ ಏನೆನ್ನಬೇಕು. ನಗರದ ಬಹುತೇಕ ಕಡೆ ಸರ್ಕಾರಿ ಆಸ್ಪತ್ರೆಗಳಲ್ಲಿ ಪಾರ್ಕಿಂಗ್ ವ್ಯವಸ್ಥೆ ಇಲ್ಲ.

ಸರ್ಕಾರಿ ಕಚೇರಿಗಳಲ್ಲಿ ಸಾರ್ವಜನಿಕರಿಗೆ ವಾಹನಗಳನ್ನು ನಿಲ್ಲಿಸಲು ವ್ಯವಸ್ಥೆ ಇಲ್ಲ. ತಪ್ಪು ಸರ್ಕಾರದ್ದಾಗಿದ್ದರೆ ಅದರ ಪ್ರತಿಫಲವನ್ನು ಸಾರ್ವಜನಿಕರು ಅನುಭವಿಸಬೇಕು ಎಂದರೆ ಒಪ್ಪಲು ಸಾಧ್ಯವಿಲ್ಲ ಎಂದು ಅವರು ಹೇಳಿದರು.ಅಷ್ಟೇ ಏಕೆ, ಬೆಂಗಳೂರು ನಗರಾಭಿವೃದ್ಧಿ ಖಾತೆಯ ಮಂತ್ರಿಗಳಾದ ಕೃಷ್ಣಭೈರೇಗೌಡರ ಮನೆ ಸಮೀಪವಿರುವ ಅಪಾರ್ಟ್ಮೆಂಟ್ ಮುಂದೆಯೇ ಪಾರ್ಕಿಂಗ್ ಮಾಡಲು ಜಾಗವಿಲ್ಲ. ಆ ಅಪಾರ್ಟ್ಮೆಂಟಿಗೆ ಬರುವ ಅತಿಥಿಗಳು ವಾಹನಗಳನ್ನು ಎಲ್ಲಿ ನಿಲ್ಲಿಸಬೇಕು ಎಂಬುದನ್ನು ನಗರಾಭಿವೃದ್ಧಿ ಸಚಿವರೇ ಹೇಳಬೇಕಾಗುತ್ತದೆ.

> ಕೇವಲ ಕಾನೂನು ಮಾಡುವುದು ಅಥವಾ ನಿಯಮ ರೂಪಿಸುವುದು ದೊಡ್ಡ ವಿಷಯವಲ್ಲ. ಜನರ ನಿಜವಾದ ಪರಿಸ್ಥಿತಿ ಏನಿದೆ? ಎಂಬುದನ್ನು ಅಧ್ಯಯನ ಮಾಡಿ ರೂಪಿಸಬೇಕಾಗುತ್ತದೆ.
> ರಮೇಶ್ ಗೌಡ

## ರಾಹುಲ್ ಗಾಂಧಿ ನಿಲುವಿಗೆ ಉಲ್ಟಾ ಹೊಡೆದರೇ ಡಿಕೆಶಿ?

• ಉದಯವಾಹಿನಿ, ಬೆಂಗಳೂರು

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮತ್ತು ಅದಾನಿ ಸಮೂಹದ ಮುಖ್ಯಸ್ಥ ಗೌತಮ್ ಅದಾನಿ ನಡುವಿನ ರಹಸ್ಯ ಭೇಟಿ ಈಗ ರಾಜ್ಯ ರಾಜಕಾರಣದಲ್ಲಿ ಭಾರಿ ಬಿರುಗಾಳಿ ಎಬ್ಬಿಸಿದೆ. ಕಾಂಗ್ರೆಸ್ ಹೈಕಮಾಂಡ್‌ನ ನಿಲುವಿಗೆ ವಿರುದ್ಧವಾಗಿ ನಡೆದ ಈ ಭೇಟಿ ಪಕ್ಷದಲ್ಲಿ ತೀವ್ರ ಅಸಮಾಧಾನಕ್ಕೆ ಕಾರಣವಾಗಿದೆ.

ಅದಾನಿ ಸಮೂಹದ ಅಧ್ಯಕ್ಷ ಗೌತಮ್ ಅದಾನಿ ಅವರು ಭಾನುವಾರ ಬೆಳಗ್ಗೆ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರ ನಿವಾಸಕ್ಕೆ ಭೇಟಿ ನೀಡಿ, ಸುಮಾರು 30 ನಿಮಿಷಗಳ ಕಾಲ ಮಾತುಕತೆ ನಡೆಸಿದ್ದಾರೆ.ಇಬ್ಬರೂ ಇದನ್ನು ಸಾಮಾನ್ಯ ಸೌಜನ್ಯದ ಭೇಟಿ ಎಂದು ಬಣ್ಣಿಸಿದ್ದರೂ, ಕಾಂಗ್ರೆಸ್‌ನ ಕೆಲ ವಲಯಗಳಲ್ಲಿ ಈಭೇಟಿ ಅಸಮಾಧಾನಕ್ಕೆ ಕಾರಣವಾಗಿದೆ.

ಕಾಂಗ್ರೆಸ್ ಹಿರಿಯ (ಹೆಸರು ಬಹಿರಂಗಪಡಿಸದ) ನಾಯಕರು ಷರತ್ತಿನ ಮೇಲೆ 'ದಿ ನ್ಯೂ ಇಂಡಿಯನ್ ಎಕ್ಸ್‌ಪ್ರೆಸ್' ಜೊತೆ ಮಾತನಾಡಿ, ಡಿಕೆ.ಶಿವಕುಮಾರ್ ಅವರಿಗೆ ಈ ಭೇಟಿ ತಪ್ಪಿಸಬಹುದಾದ ರೀತಿಯ ಬೆಳವಣಿಗೆಯಾಗಿತ್ತು ಎಂದು ಅಭಿಪ್ರಾಯಪಟ್ಟಿದ್ದಾರೆ.

ಈ ನಡುವೆ ಪಕ್ಷದ ಇತರ ನಾಯಕರು ಈ ಕುರಿತು ಪ್ರತಿಕ್ರಿಯಿಸಲು ನಿರಾಕರಿಸಿದ್ದಾರೆ.

# H1N1: ರಾಜ್ಯದಲ್ಲಿ 4,212 ಪ್ರಕರಣ; ಬೆಂಗಳೂರಿನಲ್ಲಿ 3,000ಕ್ಕೂ ಹೆಚ್ಚು

### ಆಗಸ್ಟ್ 22ರವರೆಗೆ ಇಂಟಿಗ್ರೇಟೆಡ್ ಹೆಲ್ತ್ ಇನ್ಫರ್ಮೇಷನ್ ಪ್ಲಾಟ್‌ಫಾರ್ಮ್ ಮೂಲಕ ವರದಿಯಾದ ಕಣ್ಗಾವಲು ದತ್ತಾಂಶದ ಪ್ರಕಾರ ಈ ಮಾಹಿತಿ ಲಭ್ಯವಾಗಿದೆ.

• ಉದಯವಾಹಿನಿ, ಬೆಂಗಳೂರು

1 ಆರೋಗ್ಯ ಇಲಾಖೆ ಸೂಚನೆ
2 2026ರ ಪರಿಸ್ಥಿತಿ ಹೇಗಿದೆ?
3 ಆರೋಗ್ಯ ಇಲಾಖೆ ಸೂಚನೆ

ಕರ್ನಾಟಕದಲ್ಲಿ ಈ ವರ್ಷ 32 ಜಿಲ್ಲೆಗಳಲ್ಲಿ ಒಟ್ಟು 4,212 ಪ್ರಯೋಗಾಲಯ ದೃಢೀಕೃತ ಇನ್‌ಫ್ಲುಯೆನ್ಸಾ ಪ್ರಕರಣಗಳು ವರದಿಯಾಗಿವೆ. ಈ ಪೈಕಿ ಬೆಂಗಳೂರಿನಲ್ಲೇ ಅತಿ ಹೆಚ್ಚಿನ ಪ್ರಕರಣಗಳು ದಾಖಲಾಗಿವೆ.

ಆಗಸ್ಟ್ 22ರವರೆಗೆ ಇಂಟಿಗ್ರೇಟೆಡ್ ಹೆಲ್ತ್ ಇನ್ಫರ್ಮೇಷನ್ ಪ್ಲಾಟ್ ಫಾರ್ಮ್ ಮೂಲಕ ವರದಿಯಾದ ಕಣ್ಗಾವಲು ದತ್ತಾಂಶದ ಪ್ರಕಾರ ಈ ಮಾಹಿತಿ ಲಭ್ಯವಾಗಿದೆ. ಕರ್ನಾಟಕದಲ್ಲಿ ಕಳೆದ ಇಡೀ ವರ್ಷದಲ್ಲಿ 4,583 ಹಾಗೂ 2024ರಲ್ಲಿ 3,903 ಪ್ರಯೋಗಾಲಯ ದೃಢೀಕೃತ ಪ್ರಕರಣಗಳು ದಾಖಲಾಗಿದ್ದವು.

ಕರ್ನಾಟಕದಲ್ಲಿ ಅತಿ ಹೆಚ್ಚು ಪ್ರಯೋಗಾಲಯ ದೃಢೀಕೃತ ಪ್ರಕರಣಗಳು ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯಲ್ಲಿ 2,070 ದಾಖಲಾಗಿವೆ. ಇದಾದ ಬಳಿಕ ಬೆಂಗಳೂರು ನಗರದಲ್ಲಿ 1,011 ಪ್ರಕರಣಗಳು ವರದಿಯಾಗಿವೆ. ಈ ಎರಡೂ ಪ್ರದೇಶಗಳನ್ನು ಒಟ್ಟುಗೂಡಿಸಿದರೆ ಬೆಂಗಳೂರಿನಲ್ಲಿ ಒಟ್ಟು 3,081 ಪ್ರಕರಣಗಳು ದಾಖಲಾಗಿವೆ. ದಕ್ಷಿಣ ಕನ್ನಡದಲ್ಲಿ 87, ಶಿವಮೊಗ್ಗದಲ್ಲಿ 91, ಬಳ್ಳಾರಿಯಲ್ಲಿ 53, ಬೆಳಗಾವಿಯಲ್ಲಿ 47 ಹಾಗೂ ಉತ್ತರ ಕನ್ನಡದಲ್ಲಿ 42 ಪ್ರಕರಣಗಳು ವರದಿಯಾಗಿವೆ. ಹೆಚ್ಚಿನ ಪ್ರಕರಣಗಳು ದಾಖಲಾಗಿರುವ ಜಿಲ್ಲೆಗಳ ಹೊರತಾಗಿ, ಇತರ ಹಲವು ಜಿಲ್ಲೆಗಳಲ್ಲೂ ಪ್ರಯೋಗಾಲಯ



ಉದಯವಾಹಿನಿ ಚಿತ್ರ

> ಋತುಮಾನದ ಈ ರೋಗ ತಡೆಗಟ್ಟಲು ಹಾಗೂ ನಿಯಂತ್ರಿಸಲು ಸಾಧ್ಯವಿದ್ದು, ಆರಂಭಿಕ ಹಂತದಲ್ಲೇ ಪತ್ತೆಹಚ್ಚುವುದು, ಸಮಯಕ್ಕೆ ಸರಿಯಾಗಿ ಚಿಕಿತ್ಸೆ ಪಡೆಯುವುದು ಹಾಗೂ ಹೆಚ್ಚಿನ ಅಪಾಯದಲ್ಲಿರುವವರನ್ನು ರಕ್ಷಿಸುವುದು ಗಂಭೀರ ಅನಾರೋಗ್ಯ ಮತ್ತು ಸಾವುಗಳನ್ನು ಕಡಿಮೆ ಮಾಡಲು ಸಹಕಾರಿಯಾಗಲಿದೆ ಎಂದು ತಿಳಿಸಿದೆ.-ಆರೋಗ್ಯ ಇಲಾಖೆ

ದೃಢೀಕೃತ ಪ್ರಕರಣಗಳು ವರದಿಯಾಗಿವೆ. ಮಂಡ್ಯದಲ್ಲಿ 32 ಪ್ರಕರಣಗಳು ದಾಖಲಾಗಿವೆ. ಬೆಂಗಳೂರು ಗ್ರಾಮಾಂತರ, ಬೆಂಗಳೂರು ದಕ್ಷಿಣ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ತಲಾ 26 ಪ್ರಕರಣಗಳು ವರದಿಯಾಗಿವೆ. ದಾವಣಗೆರೆಯಲ್ಲಿ 24, ಚಿತ್ರದುರ್ಗ ಮತ್ತು ಚಾಮರಾಜನಗರದಲ್ಲಿ ತಲಾ 20 ಪ್ರಕರಣಗಳು ದಾಖಲಾಗಿವೆ. ತುಮಕೂರಿನಲ್ಲಿ 18 ಚಿಕ್ಕಮಗಳೂರಿನಲ್ಲಿ 17 ಪ್ರಕರಣಗಳಿವೆ. ಕೋಲಾರದಲ್ಲಿ 16 ಮತ್ತು ಧಾರವಾಡದಲ್ಲಿ 14 ಪ್ರಕರಣಗಳು ವರದಿಯಾಗಿವೆ. ಬಾಗಲಕೋಟೆಯಲ್ಲಿ 12, ಕೊಪ್ಪಳದಲ್ಲಿ 11 ಹಾಗೂ ಗದಗ ಮತ್ತು ಕೊಡಗಿನಲ್ಲಿ ತಲಾ 10 ಪ್ರಕರಣಗಳು ದಾಖಲಾಗಿವೆ. ಹಾಸನ ಮತ್ತು ವಿಜಯನಗರದಲ್ಲಿ ತಲಾ 9 ಪ್ರಕರಣಗಳಿವೆ. ವಿಜಯಪುರ ಮತ್ತು ಚಿಕ್ಕಬಳ್ಳಾಪುರದಲ್ಲಿ ತಲಾ 6, ಕಲಬುರಗಿಯಲ್ಲಿ 5 ಹಾಗೂ ರಾಯಚೂರಿನಲ್ಲಿ 4 ಪ್ರಕರಣಗಳು ವರದಿಯಾಗಿವೆ. ಆಗಸ್ಟ್ 22ರವರೆಗೆ ಲಭ್ಯವಿರುವ ದತ್ತಾಂಶದ ಪ್ರಕಾರ ಬೀದರ್ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಯಾವುದೇ ಪ್ರಯೋಗಾಲಯ ದೃಢೀಕೃತ ಇನ್‌ಫ್ಲುಯೆನ್ಸಾ ಪ್ರಕರಣಗಳು ದಾಖಲಾಗಿಲ್ಲ. 2026ರಲ್ಲಿ ಇದುವರೆಗೆ ಕರ್ನಾಟಕದಲ್ಲಿ 4,212 ಪ್ರಯೋಗಾಲಯ ದೃಢೀಕೃತ H1N1 ಪ್ರಕರಣಗಳು ದಾಖಲಾಗಿವೆ.

**22ರವರೆಗೆ ಮಾತ್ರ ವರದಿಯಾದ ಪ್ರಕರಣ**

ಈ ವರ್ಷದ ಸಂಖ್ಯೆ ಈಗಾಗಲೇ ಕಳೆದ ವರ್ಷದ ಒಟ್ಟು ಪ್ರಕರಣಗಳ ಸಮೀಪ ತಲುಪಿದ್ದರೂ, ಪ್ರಸ್ತುತ ದತ್ತಾಂಶವು ಆಗಸ್ಟ್ 22ರವರೆಗೆ ಮಾತ್ರ ವರದಿಯಾದ ಪ್ರಕರಣಗಳನ್ನು ಒಳಗೊಂಡಿದೆ. 2024ರಲ್ಲಿ ರಾಜ್ಯದಲ್ಲಿ ಇದಕ್ಕಿಂತ ಕಡಿಮೆ ಪ್ರಯೋಗಾಲಯ ದೃಢೀಕೃತ ಪ್ರಕರಣಗಳು ದಾಖಲಾಗಿದ್ದವು.

**ಆರೋಗ್ಯ ಇಲಾಖೆ ಸಲಹೆ**

ರೋಗದ ಲಕ್ಷಣಗಳು ಕಂಡುಬಂದಿರುವವರು ಕೆಮ್ಮುವಾಗ ಅಥವಾ ಸೀನುವಾಗ ಮೂಗು ಮತ್ತು ಬಾಯಿಯನ್ನು ಮುಚ್ಚಿಕೊಳ್ಳಬೇಕು, ಸಾಬೂನು ಮತ್ತು ನೀರಿನಿಂದ ನಿಯಮಿತವಾಗಿ ಕೈಗಳನ್ನು ತೊಳೆದುಕೊಳ್ಳಬೇಕು, ಸಾಕಷ್ಟು ದ್ರವಾಹಾರ ಸೇವಿಸಬೇಕು ಹಾಗೂ ಅಗತ್ಯವಿದ್ದಾಗ ಪ್ರತ್ಯೇಕವಾಗಿರಬೇಕು ಎಂದು ಆರೋಗ್ಯ ಇಲಾಖೆ ಸಲಹೆ ನೀಡಿದೆ.

# ‘ಫ್ಲೋರೈಡ್’ ಕಂಟಕ: ಆರ್‌ಒ ಪ್ಲಾಂಟ್ ಸ್ಥಗಿತ, ಹಳ್ಳಿಗರ ಬದುಕಿಗೆ ನೀರೇ ‘ವಿಷ’!

## ಕೋಟ್ಯಂತರ ರೂಪಾಯಿ ವೆಚ್ಚದಲ್ಲಿ ಸ್ಥಾಪಿಸಲಾದ ಶುದ್ಧ ಕುಡಿಯುವ ನೀರಿನ ಘಟಕಗಳು

• ಇಲಿಯಾಸ್ ಪಟೇಲ್ ಬಳಗಾನೂರ ರಾಜ್ಯ ವಿಶೇಷ ವರದಿಗಾರರು

• ಉದಯವಾಹಿನಿಯಾದಗಿರಿ:

ಯಾದಗಿರಿ ಜಿಲ್ಲೆಯ ಗ್ರಾಮೀಣ ಭಾಗದಲ್ಲಿ ಶುದ್ಧ ಕುಡಿಯುವ ನೀರು ಎನ್ನುವುದು ಇಂದಿಗೂ ಗಗನಕುಸುಮವಾಗಿದೆ. ಜಿಲ್ಲೆಯ ನೂರಾರು ಗ್ರಾಮಗಳಲ್ಲಿ ಅಂತರ್ಜಲ ತೀವ್ರ ಕಲುಷಿತಗೊಂಡಿದ್ದು, ಫ್ಲೋರೈಡ್‌ಯುಕ್ತ ನೀರು ಕುಡಿದು ಜಲಜನ್ಯ ರೋಗಗಳಿಗೆ ತುತ್ತಾಗುತ್ತಿರುವ ಹಳ್ಳಿಗರ ಗೋಳು ಕೇಳುವವರೇ ಇಲ್ಲದಂತಾಗಿದೆ.

ಕಲುಷಿತ ನೀರಿನ ಸಮಸ್ಯೆಗೆ ಮುಕ್ತಿ ನೀಡಲು ಕೋಟ್ಯಂತರ

**1 : ಚಿಕ್ಕ ವಯಸ್ಸಿನಲ್ಲೇ ವೃದ್ಧಾಪ್ಯ**
**2 : ದುರಸ್ತಿಯಾಗದ ಆರ್‌ಒ ಪ್ಲಾಂಟ್‌ಗಳು**
**3 : ಖಾಸಗಿ ಏಜೆನ್ಸಿಗಳ ಬೇಜವಾಬ್ದಾರಿ**

ರೂಪಾಯಿ ವೆಚ್ಚದಲ್ಲಿ ಸ್ಥಾಪಿಸಲಾದ ಶುದ್ಧ ಕುಡಿಯುವ ನೀರಿನ ಘಟಕಗಳು (RO Plants) ನಿರ್ವಹಣೆಯಿಲ್ಲದೆ ಹಾಳಾಗಿ ನಿಂತಿರುವುದು ಗ್ರಾಮೀಣ ಜನರ ದುಸ್ಥಿತಿಗೆ ಕೈಗನ್ನಡಿಯಾಗಿದೆ.

**ಫ್ಲೋರೈಡ್ ಭೂತ ಚಿಕ್ಕ ವಯಸ್ಸಿನಲ್ಲೇ ವೃದ್ಧಾಪ್ಯ:** ಹುಣಸಗಿ, ಶೋರಾಪುರ, ಗುರುಮಿಠಕಲ್ ಹಾಗೂ ವಡಗೇರಾ



ಉದಯವಾಹಿನಿ ಚಿತ್ರ

ತಾಲ್ಲೂಕಿನ ಹಲವು ಗ್ರಾಮಗಳಲ್ಲಿ ಅಂತರ್ಜಲದಲ್ಲಿ ಫ್ಲೋರೈಡ್ ಪ್ರಮಾಣ ಮಿತಿಮೀರಿದೆ. ಬೇರೆ ದಾರಿಯಿಲ್ಲದೆ ಇದೇ ನೀರನ್ನು ಕುಡಿಯುತ್ತಿರುವ ಗ್ರಾಮಸ್ಥರು ಕೀಲು ನೋವು, ಮೂಳೆ ಬಾಗುವಿಕೆ (Fluorosis ), ಹಲ್ಲುಗಳು ಹಳದಿಯಾಗುವುದು ಹಾಗೂ ಕಿಡ್ನಿ ಸಂಬಂಧಿತ ಕಾಯಿಲೆಗಳಿಂದ ಬಳಲುತ್ತಿದ್ದಾರೆ. ಯುವಕರು ಮತ್ತು ಶಾಲಾ ಮಕ್ಕಳು ಸಹ ಚಿಕ್ಕ ವಯಸ್ಸಿನಲ್ಲೇ ಮೂಳೆ ಸವೆತಕ್ಕೆ ಒಳಗಾಗಿ ಅಂಗವಿಕಲತೆಯತ್ತ ಸಾಗುತ್ತಿರುವುದು ಭೀಕರ ವಾಸ್ತವ.

**ದುರಸ್ತಿಯಾಗದ ಆರ್‌ಒ ಪ್ಲಾಂಟ್‌ಗಳು:** ಗ್ರಾಮಗಳಲ್ಲಿ ಜನರಿಗೆ ಶುದ್ಧ ನೀರು ಕೊಡಬೇಕಾದ ಆರ್‌ಒ ಪ್ಲಾಂಟ್‌ಗಳು ಕೇವಲ ‘ಕಾಂಕ್ರೀಟ್ ಅಸ್ಥಿಪಂಜರ’ಗಳಾಗಿ ನಿಂತಿವೆ. ಸಣ್ಣಪುಟ್ಟ ತಾಂತ್ರಿಕ ದೋಷಗಳು ಎದುರಾದರೂ ಅವುಗಳನ್ನು ಸರಿಪಡಿಸಲು ಗುತ್ತಿಗೆದಾರರಾಗಲಿ ಅಥವಾ ಪಂಚಾಯಿತಿಅಧಿಕಾರಿಗಳಾಗಲಿ ಆಸಕ್ತಿ ತೋರುತ್ತಿಲ್ಲ.ನಮ್ಮೂರಿನಲ್ಲಿ ಸ್ಥಾಪಿಸಿದ ಖಿಔ ಪ್ಲಾಂಟ್ ಕೆಟ್ಟು ನಿಂತು ವರ್ಷ ಕಳೆಯುತ್ತಾ ಬಂದಿದೆ. ವಾಟರ್ ಫಿಲ್ಟರ್ ಕೆಟ್ಟಿದೆ ಎಂದು ಪಂಚಾಯಿತಿಗೆ ನೂರಾರು ಬಾರಿ ಮನವಿ ಮಾಡಿದರೂ ಯಾರೂ ತಿರುಗಿ ನೋಡಿಲ್ಲ. ಅನಿವಾರ್ಯವಾಗಿ ಕೆರೆ, ಬಾವಿ ಫ್ಲೋರೈಡ್ ನೀರನ್ನೇ ಕುಡಿಯುತ್ತಿದ್ದೇವೆ. ಪ್ರತಿ ಮನೆಯಲ್ಲೂ ಒಬ್ಬರಲ್ಲ ಒಬ್ಬರು ಕಾಲು ನೋವು, ಮೂಳೆ ನೋವಿನಿಂದನರಳುತ್ತಿದ್ದಾರೆ ಎಂದು ಅಳಲು ತೋಡಿಕೊಳ್ಳುತ್ತಾರೆ ಗ್ರಾಮಸ್ಥರು.

**ಖಾಸಗಿ ಏಜೆನ್ಸಿಗಳ ಬೇಜವಾಬ್ದಾರಿ:** ಆರ್‌ಒ ಪ್ಲಾಂಟ್‌ಗಳ ಉಸ್ತುವಾರಿ ವಹಿಸಿಕೊಂಡ ಕಂಪನಿಗಳು ನಿಯಮಿತವಾಗಿ ಫಿಲ್ಟರ್ ಬದಲಾಯಿಸದೆ ಹಾಗೂ ದುರಸ್ತಿ ಮಾಡದೆ ನಿರ್ಲಕ್ಷ್ಯ ವಹಿಸಿರುವುದು.

> ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ತಕ್ಷಣವೇ ಜಿಲ್ಲೆಯಾದ್ಯಂತ ವಿಶೇಷ ಕಾರ್ಯಾಚರಣೆ ನಡೆಸಿ, ಕೆಟ್ಟುಬಿದ್ದಿರುವ ಎಲ್ಲ ROಪ್ಲಾಂಟ್‌ಗಳನ್ನು ತಕ್ಷಣವೇ ದುರಸ್ತಿಗೊಳಿಸಬೇಕು. ಫ್ಲೋರೈಡ್ ಪೀಡಿತ ಗ್ರಾಮಗಳಿಗೆ ನದಿ ಮೂಲದ ಶುದ್ಧ ಕುಡಿಯುವ ನೀರನ್ನು ಕಲ್ಪಿಸುವ ‘ಬಹುಗ್ರಾಮ ಕುಡಿಯುವ ನೀರಿನ ಯೋಜನೆ’ಯನ್ನು (MVS) ಕಾಲಮಿತಿಯಲ್ಲಿ ಪೂರ್ಣಗೊಳಿಸಿ ಜನರ ಜೀವ ರಕ್ಷಿಸಬೇಕು.
> –ಬಂದೇನವಾಜ್ ನಾಲತವಾಡ ಕೆಂಭಾವಿ

**ಆರೋಗ್ಯದ ಮೇಲೆ ಗಂಭೀರ ಪರಿಣಾಮ:** ಗರ್ಭಿಣಿಯರು, ಮಗು ಮತ್ತು ವೃದ್ಧರಲ್ಲಿ ಫ್ಲೋರೈಡ್‌ಯುಕ್ತ ನೀರಿನಿಂದ ಆವರಿಸುತ್ತಿರುವ ದೀರ್ಘಕಾಲದ ಕಾಯಿಲೆಗಳು.

**ಆರ್ಥಿಕ ನಷ್ಟ:** ನೀರು ಕೊಳ್ಳಲು ಹಣವಿಲ್ಲದ ಬಡ ಕುಟುಂಬಗಳು ಅಶುದ್ಧ ನೀರು ಕುಡಿದು ಆಸ್ಪತ್ರೆ ವೆಚ್ಚಕ್ಕಾಗಿ ಸಾಲಗಾರರಾಗುತ್ತಿರುವುದು.

**ಜಲಜೀವನ್ ಮಿಷನ್ ಜಾರಿ ಲೋಪ:** ಗ್ರಾಮೀಣ ಭಾಗದಲ್ಲಿ ಪ್ರತಿಯೊಂದು ಮನೆಗೆ ನಲ್ಲಿ ಸಂಪರ್ಕ ಕಲ್ಪಿಸುವ ಯೋಜನೆಗಳು ಮಂದಗತಿಯಲ್ಲಿ ಸಾಗುತ್ತಿರುವುದು.

# ಹಿರಿಯೂರು ಆರ್ಯವೈಶ್ಯ ಸಮಾಜದಿಂದ ಜಿ ಎ ವಿ ಎಸ್ ಸಂಕಲ್ಪ ಯಾತ್ರೆ

• ಉದಯವಾಹಿನಿ ಹಿರಿಯೂರು,

ಕರ್ನಾಟಕ ಆರ್ಯವೈಶ್ಯ ಮಹಾಸಭಾ ಹಾಗೂ ಹಿರಿಯೂರು ಆರ್ಯವೈಶ್ಯ ಮಂಡಳಿ ಇವರ ಸಹಯೋಗದಲ್ಲಿ ಹಿರಿಯೂರಿನಲ್ಲಿ ಜಿ.ಎ.ವಿ.ಎಸ್ ಸಂಕಲ್ಪ ಯಾತ್ರೆ ನಡೆಸಲಾಯಿತು.

ಇಲ್ಲಿನ ಶ್ರೀಕನ್ಯಕಾ ಪರಮೇಶ್ವರಿ ದೇವಾಲಯದಿಂದ ಹೊರಟ ಸಂಕಲ್ಪ ಯಾತ್ರೆಯು ನಗರದ ಪ್ರಮುಖ ರಸ್ತೆಗಳ ಮೂಲಕ ಸಂಚರಿಸಿ ವಾಗ್ದೇವಿ ಶಾಲೆಯ ವರೆಗೆ ಸಾಗಿ ಬಂತು.

ಈ ಸಂದರ್ಭದಲ್ಲಿ ಮಾತನಾಡಿದ ಆರ್ಯವೈಶ್ಯ ಮಂಡಳಿ ಮುಖಂಡರು ಹಾಗೂ ವಾಗ್ದೇವಿ ವಿದ್ಯಾ ಸಂಸ್ಥೆಗಳ ಒಕ್ಕೂಟದ ರಾಜ್ಯಾಧ್ಯಕ್ಷರಾದ ಕೆ.ವಿ ಅಮರೇಶ್ ಕರ್ನಾಟಕ ಆರ್ಯವೈಶ್ಯ ಮಹಾಸಭಾ ರಾಜ್ಯಾಧ್ಯಕ್ಷರಾದ ಆರ್.ಪಿ ರವಿಶಂಕರ್ ಇವರ ನೇತೃತ್ವದಲ್ಲಿ ಅಭಿವೃದ್ಧಿಪರ ಕಾರ್ಯಕ್ರಮಗಳನ್ನು ಮಾಡುತ್ತಾ ಬಂದಿದೆ ಕೇವಲ ಒಂದು ಸಂಘಟನೆಯಾಗಿ ಮಾತ್ರ ಉಳಿದಿಲ್ಲ ಸಂಕಷ್ಟದಲ್ಲಿರುವವರ ಕಲ್ಪವೃಕ್ಷವಾಗಿ ಕಾರ್ಯನಿರ್ವಹಿಸುತ್ತಿದೆ ಎಂದರು.ಇಡೀ ದೇಶದಲ್ಲಿಯೇ ಪ್ರಪ್ರಥಮ ಬಾರಿಗೆ ಕನಿಷ್ಠ 5000 ಉದ್ಯಮಗಳ ಸ್ಥಾಪನೆ ಆ ಮೂಲಕ 5,00,000 ಯುವಕರಿಗೆ ಉದ್ಯೋಗ ಸೃಷ್ಟಿಸುವ ಯೋಜನೆ ಹಾಕಿಕೊಳ್ಳಲಾಗಿದೆ.



ಉದಯವಾಹಿನಿ ಚಿತ್ರ

ಕಳೆದ ಎಂಟು ವರ್ಷಗಳಲ್ಲಿ ಸಮಾಜದ ಬಂಧುಗಳ ಕಲ್ಯಾಣ ಕಾರ್ಯಕ್ರಮಗಳಿಗಾಗಿ ಸುಮಾರು 40 ಕೋಟಿಗೂ ಹೆಚ್ಚು ವಿನಿಯೋಗಿಸುವ ಮೂಲಕ ಅಶಕ್ತರಿಗೆ, ಅಬಲರಿಗೆ ಹಾಗೂ ಅವಶ್ಯಕತೆ ಇರುವವರಿಗೆ ಕಾಮಧೇನುವಾಗಿ ಕೆಲಸ ನಿರ್ವಹಿಸುತ್ತಿದೆ ಎಂದರು. ಜಿ ಎ ವಿ ಎಸ್ ಈಗಾಗಲೇ ಇರುವ ತಮ್ಮ ವ್ಯಾಪಾರ ವ್ಯವಹಾರ ಉದ್ಯಮಗಳನ್ನು ಮತ್ತಷ್ಟು ಬೆಳೆಸಿಕೊಳ್ಳಲು ಮಾರ್ಗದರ್ಶನ ಸಲಹೆ ಸಹಕಾರ ನೀಡುತ್ತಿದೆ. ಬ್ಯಾಂಕಿಂಗ್ ಕ್ಷೇತ್ರದಿಂದ ದೊರೆಯುವ ಸೌಲಭ್ಯಗಳಿಗೆ ಉತ್ತೇಜನ ನೀಡುತ್ತಿದೆ ಸಮಯದ ಅಭಿವೃದ್ಧಿಗಾಗಿ ಕಾರ್ಯನಿರ್ಸುತ್ತಿದೆ ಎಂದರು.

# ಅರ್ಹ ನಾಗರಿಕರು ಮತದಾರರ ಪಟ್ಟಿಯಿಂದ ಹೊರಗುಳಿಯದಿರಲಿ

• ಉದಯವಾಹಿನಿ ಔರಾದ್ :

ಎಸ್‌ಐಆರ್ ಪ್ರಕ್ರಿಯೆಯ ಮೊದಲ ಹಂತ ಪೂರ್ಣಗೊಂಡಿದ್ದು, ಕರಡು ಮತದಾರರ ಪಟ್ಟಿ ಪ್ರಕಟಗೊಳ್ಳಲಿರುವ ಹಿನ್ನೆಲೆಯಲ್ಲಿ ಅರ್ಹ ನಾಗರಿಕರು ಮತದಾರರ ಪಟ್ಟಿಯಿಂದ ಹೊರಗುಳಿಯದಂತೆ ಕಾರ್ಯಕರ್ತರು ಎಚ್ಚರಿಕೆಯಿಂದ ಕಾರ್ಯನಿರ್ವಹಿಸಬೇಕು ಎಂದು ಶಾಸಕರು ಪ್ರಭು ಬಿ.ಚವ್ಹಾಣ ಅವರು ತಿಳಿಸಿದರು.

ಭಾರತೀಯ ಜನತಾ ಪಾರ್ಟಿ ಔರಾದ(ಬಿ) ಮಂಡಲದ ವತಿಯಿಂದ ಭಾನುವಾರ ಪಟ್ಟಣದ ಸಾಯಿ ಕಲ್ಯಾಣ ಮಂಟಪದಲ್ಲಿ ಆಯೋಜಿಸಿದ್ದ ಬಿಎಲ್‌ಎ–2 ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದ ಅವರು ಎಸ್‌ಐಆರ್ ಮೊದಲನೇ ಹಂತ ಪೂರ್ಣಗೊಂಡಿದ್ದು, ಇದೀಗ ಕರಡು ಮತದಾರರ ಪಟ್ಟಿ ಪ್ರಕಟಗೊಳ್ಳಲಿದೆ. ಈ ಹಿನ್ನೆಲೆಯಲ್ಲಿ ತಮ್ಮ ವ್ಯಾಪ್ತಿಯಲ್ಲಿರುವ ಮತದಾರರ ಮಾಹಿತಿಯನ್ನು ಪರಿಶೀಲಿಸಿ, ಅರ್ಹ ಮತದಾರರ ಹೆಸರುಗಳು ಕರಡು ಪಟ್ಟಿಯಲ್ಲಿ ಇರುವುದನ್ನು ಖಚಿತಪಡಿಸಿಕೊಳ್ಳಬೇಕು ಎಂದು ಬಿಎಲ್‌ಎ–2ಗಳಿಗೆ ಸೂಚಿಸಿದರು. ಮತದಾನ ಕೇವಲ ಹಕ್ಕು ಮಾತ್ರವಲ್ಲ, ದೇಶದ ಭವಿಷ್ಯವನ್ನು ರೂಪಿಸುವ ಜವಾಬ್ದಾರಿಯೂ ಆಗಿದೆ. ಪ್ರತಿಯೊಂದು ಮತವೂ ಜನಪ್ರತಿನಿಧಿಗಳ ಆಯ್ಕೆಯಲ್ಲಿ ಮಹತ್ವದ ಪಾತ್ರ ವಹಿಸುತ್ತದೆ.


ಉದಯವಾಹಿನಿ ಚಿತ್ರ

ಮುಂದಿನ ದಿನಗಳಲ್ಲಿ ಮತದಾರರ ಗುರುತಿನ ಚೀಟಿ ಸರ್ಕಾರದ ಯೋಜನೆಗಳಿಗೆ ಜೋಡಣೆಯಾಗುವ ಸಾಧ್ಯತೆಗಳಿರುವ ಕಾರಣ ಅರ್ಹ ಪ್ರತಿಯೊಬ್ಬ ನಾಗರಿಕರು ಮತದಾರರ ಪಟ್ಟಿಯಲ್ಲಿ ಇರುವಂತೆ ಮತ್ತು ಮತದಾನದ ಹಕ್ಕನ್ನು ರಕ್ಷಿಸುವ ದಿಶೆಯಲ್ಲಿ ಜಾಗೃತಿ ಮೂಡಿಸುವುದು ಕಾರ್ಯಕರ್ತರ ಪ್ರಮುಖ ಕರ್ತವ್ಯವಾಗಿದೆ ಎಂದು ತಿಳಿಸಿದರು. ಯಾವುದೇ ಅರ್ಹ ಮತದಾರರ ಹೆಸರು ಪಟ್ಟಿಯಿಂದ ಕೈಬಿಟ್ಟಿದ್ದರೆ, ನಿಯಮಾನುಸಾರ ಆಕ್ಷೇಪಣೆ ಅಥವಾ ಅಗತ್ಯ ಅರ್ಜಿ ಸಲ್ಲಿಸುವ ಮೂಲಕ ಹೆಸರು ಸೇರ್ಪಡೆಗೆ ಕ್ರಮ ಕೈಗೊಳ್ಳಲು ಸಹಕರಿಸಬೇಕು. ಮತದಾನದ ಹಕ್ಕು ಪ್ರತಿಯೊಬ್ಬ ನಾಗರಿಕನ ಪ್ರಜಾಪ್ರಭುತ್ವದ ಹಕ್ಕಾಗಿದ್ದು, ಯಾವುದೇ ಅರ್ಹ ಮತದಾರರು ಮತದಾನದ ಹಕ್ಕಿನಿಂದ ವಂಚಿತರಾಗದಂತೆ ನೋಡಿಕೊಳ್ಳುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದು ಹೇಳಿದರು.

# ಶಿವಾನಿ ಈಗ ಸಾಂಸ್ಕೃತಿಕ ರಾಯಭಾರಿ: ಎಂಟು ಪ್ರಶಸ್ತಿಗಳ ಒಡತಿ

• ಉದಯವಾಹಿನಿ ಬೀದರ್:

ಅಖಿಲ ಭಾರತ ಗಂಧರ್ವ ಮಹಾವಿದ್ಯಾಲಯ , ಮುಂಬೈ ವತಿಯಿಂದ ನವೆಂಬರ್–ಡಿಸೆಂಬರ್ 2024ರಲ್ಲಿ ನಡೆದ ಸಂಗೀತ ವಿಶಾರದ ಪರೀಕ್ಷೆಯಲ್ಲಿ ದೇಶಕ್ಕೆ ಪ್ರಥಮ ರ್‍ಯಾಂಕ್ ಗಳಿಸುವುದರ ಜೊತೆಗೆ ಗಾಯನ ವಿಷಯದಲ್ಲಿಯೂ ಅತ್ಯುನ್ನತ ಅಂಕಗಳನ್ನು ಪಡೆದಿರುವ ಬೀದರ್‌ನ ಖ್ಯಾತ ಗಾಯಕಿ ಕು. ಶಿವಾನಿ ಶಿವದಾಸ ಸ್ವಾಮಿ ಅವರು ಒಟ್ಟು ಎಂಟು ಪ್ರತಿಷ್ಠಿತ ಪ್ರಶಸ್ತಿಗಳಿಗೆ ಭಾಜನರಾಗಿದ್ದಾರೆ. ಈ ಹಿನ್ನೆಲೆಯಲ್ಲಿ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಸ್ವತಃ ಮಾತನಾಡಿದ ಕು. ಶಿವಾನಿ ಶಿವದಾಸ ಸ್ವಾಮಿ, ಈ ಸಾಧನೆ ತನ್ನ ಜೀವನದ ಮಹತ್ವದ ಮೈಲಿಗಲ್ಲಾಗಿದ್ದು,, ದೇಶದಾದ್ಯಂತ ತನ್ನ ಪ್ರತಿಭೆಯನ್ನು ಗುರುತಿಸಿರುವುದು ಸಂತಸ ತಂದಿದೆ ಎಂದು ಹೇಳಿದರು.

ಅಖಿಲ ಭಾರತ ಗಂಧರ್ವ ಮಹಾವಿದ್ಯಾಲಯದ ದೀಕ್ಷಾಂತ ಸಮಾರಂಭವು ಆಗಸ್ಟ್ 22ರಂದು ನವಿಮುಂಬೈನ ವಾಶಿಯ ವಿಷ್ಣುದಾಸ ಭಾವೆ ನಾಟ್ಯಗೃಹದಲ್ಲಿ ನಡೆದಿದ್ದು, ಸಮಾರಂಭದಲ್ಲಿ ತನಗೆ ಪ್ರೀತಮ್ ಕೌರ್ ಸೌದಿ ಪ್ರಶಸ್ತಿ, ದಿವಂಗತ ಪಂ. ದಿ.ವಿ. ಪಾಲುಸ್ಕರ್ ಪ್ರಶಸ್ತಿ, ಸೌ. ನಳಿನಿ ಪ್ರತಾಪ್ ಕಾನವಿಂದೆ ಪ್ರಶಸ್ತಿ, ಪ್ರಾ. ವಾಸುದೇವ ಚಿಂತಾಮಣಿ ವಾಘಮಾರೆ ಪ್ರಶಸ್ತಿ,, ಹರಿಓಂ ಟ್ರಸ್ಟ್ (ಗಾಯನ) ಪ್ರಥಮ ಪ್ರಶಸ್ತಿ, ಶ್ರೀ ಹರಿಶ್ಚಂದ್ರ ಬಾಳಕೃಷ್ಣ ಪೊತದಾರ್ ಪ್ರಶಸ್ತಿ, ಪಂ. ನಾ.ಕೃ. ಕ–ಹಾಡೆ ಸ್ಮೃತಿ ಪ್ರಶಸ್ತಿ ಹಾಗೂ ದಿವಂಗತ ಸೌ. ಪ್ರಾಜಕ್ತಾ ಪುರುಷೋತ್ತಮ ಕುಲಕರ್ಣಿ ಪ್ರಶಸ್ತಿ ಸೇರಿದಂತೆ ಎಂಟು ಪ್ರಶಸ್ತಿಗಳನ್ನು ಪ್ರದಾನ ಮಾಡಲಾಗಿದೆ ಎಂದು ಸಂತಸ ವ್ಯಕ್ತಪಡಿಸಿದರು.


ಉದಯವಾಹಿನಿ ಚಿತ್ರ

> ಈ ಸಾಧನೆ ನನ್ನೊಬ್ಬಳದ್ದಲ್ಲ. ನನ್ನನ್ನು ಪ್ರೋತ್ಸಾಹಿಸಿದ ಗುರುಗಳು, ತಂದೆ–ತಾಯಿ, ಕುಟುಂಬಸ್ಥರು ಹಾಗೂ ಬೀದರ್‌ನ ಜನರ ಸಹಕಾರವೇ ಇದಕ್ಕೆ ಕಾರಣ,’’ ಎಂದು ಶಿವಾನಿ ಹೇಳಿದರು.

‘‘ಅಖಿಲ ಭಾರತ ಗಂಧರ್ವ ಮಹಾವಿದ್ಯಾಲಯ ಮುಂಬೈ ವತಿಯಿಂದ ನವೆಂಬರ್–ಡಿಸೆಂಬರ್ ಅವಧಿಯಲ್ಲಿ ನಡೆಸಿದ ಸಂಗೀತ ಪರೀಕ್ಷೆಯಲ್ಲಿ ಇಡೀ ದೇಶದಲ್ಲಿಯೇ ಪ್ರಥಮ ರ್‍ಯಾಂಕ್ ಪಡೆದಿರುವುದು ನನಗೆ ಅತ್ಯಂತ ಸಂತಸ ತಂದಿದೆ.

# ಕೂಲಿ ಕಾರ್ಮಿಕರಿಗೆ ಆರೋಗ್ಯ ತಪಾಸಣೆ

• ಉದಯವಾಹಿನಿ ಔರಾದ್

ತಾಲ್ಲೂಕಿನ ಧೂಪತಮಹಾಗಾಂವ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ವಿಬಿ–ಜಿ ರಾಮ್ ಜಿ ಯೋಜನೆಯಡಿ ಸಿಸಿಟಿ (ಕಾಂಟೂರ್ ಟ್ರೆಂಚ್) ಕೆಲಸ ನಿರ್ವಹಿಸುವ ಅಕುಶಲ ಕೂಲಿ ಕಾರ್ಮಿಕರಿಗೆ ಭಾನುವಾರ ಆರೋಗ್ಯ ತಪಾಸಣೆ ನಡೆಸಲಾಯಿತು.


ಉದಯವಾಹಿನಿ ಚಿತ್ರ

ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಕಿರಣ ಪಾಟೀಲ ಅವರು ಮಾತನಾಡಿ ಗ್ರಾಮೀಣ ಭಾಗದ ಕೂಲಿ ಕಾರ್ಮಿಕರು ವಿಬಿ–ಜಿ ರಾಮ್ ಜಿ ಯೋಜನೆಯಡಿ ಕೆಲಸ ನಿರ್ವಹಿಸುತ್ತಿದ್ದು, ಅವರ ಆರೋಗ್ಯದ ಹಿತದೃಷ್ಟಿಯಿಂದ ಆರೋಗ್ಯ ತಪಾಸಣೆ ಮಾಡಲಾಗಿದೆ ಎಂದರು. ತಾಪಂ ಸಹಾಯಕ ನಿರ್ದೇಶಕ (ಗ್ರಾ.ಉ) ಶಿವಕುಮಾರ ಘಾಟೆ ಅವರು ಮಾತನಾಡಿ, ಗ್ರಾಮೀಣ ಪ್ರದೇಶದ ಕೂಲಿ ಕಾರ್ಮಿಕರು ಕಾಮಗಾರಿ ಸ್ಥಳದಲ್ಲಿ ದೈಹಿಕ ಶ್ರಮದ ಕೆಲಸ ಮಾಡುತ್ತಿರುವುದರಿಂದ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳುವುದು ಮುಖ್ಯವಾಗಿದೆ ಎಂದರು. ತಾಲ್ಲೂಕು ಆರೋಗ್ಯಾಧಿಕಾರಿ ಅನೀಲಕುಮಾರ ಎಕಲೂರೆ, ಅವರು ಮಾತನಾಡಿ, ಕೂಲಿ ಕಾರ್ಮಿಕರು ತಮ್ಮ ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ವಹಿಸಬಾರದು. ಆರೋಗ್ಯ ತಪಾಸಣೆ ಮಾಡಿಸಿಕೊಳ್ಳುವುದರಿಂದ ರಕ್ತದೊತ್ತಡ, ಮಧುಮೇಹ ಸೇರಿದಂತೆ ಹಲವು ಆರೋಗ್ಯ ಸಮಸ್ಯೆಗಳನ್ನು ಆರಂಭಿಕ ಹಂತದಲ್ಲಿಯೇ ಪತ್ತೆಹಚ್ಚಲು ಸಾಧ್ಯವಾಗುತ್ತದೆ ಎಂದು ಸಲಹೆ ನೀಡಿದರು.

ಆರೋಗ್ಯ ಇಲಾಖೆ ಸಿಬ್ಬಂದಿ ಸಹಯೋಗದಲ್ಲಿ ಅಧಿಕ ರಕ್ತದೊತ್ತಡ, ಮಧುಮೇಹ, ರಕ್ತದಲ್ಲಿ ಹಿಮೋಗ್ಲೊಬಿನ್ ಪ್ರಮಾಣ, ತೂಕ, ಶೀತ, ಕೆಮ್ಮು, ನೆಗಡಿಯಂತಹ ಕಾಯಿಲೆಗಳ ತಪಾಸಣೆ ಮಾಡಲಾಯಿತು. ಪುರುಷರು, ಮಹಿಳೆಯರು ಸೇರಿದಂತೆ ಒಟ್ಟು 330 ಕೂಲಿಕಾರರ ಆರೋಗ್ಯ ತಪಾಸಣೆ ನಡೆಸಲಾಗಿದೆ.

# ಪುತ್ತೂರಿನಲ್ಲಿ ತಾಲಿಬಾನ್ ಸಂಸ್ಕೃತಿ ಮಾಜಿ ಸಂಸದ ನಳಿನ್ ಕುಮಾರ್ ಕಟೀಲ್ ವಾಗ್ದಾಳಿ

• ಉದಯವಾಹಿನಿ ಪುತ್ತೂರು;

ಸಣ್ಣ ವಿಚಾರವೊಂದನ್ನು ಮುಂದಿಟ್ಟುಕೊಂಡು ಪುತ್ತೂರಿನ ದರ್ಬೆಯಲ್ಲಿ ಮಹಿಳೆ ಮೇಲೆ ಹಲ್ಲೆ ಮಾಡಿರುವ ಘಟನೆ ಖಂಡನೀಯವಾಗಿದೆ. ರಾಜ್ಯದಲ್ಲಿ ಕಾಂಗ್ರೆಸ್ ಆಡಳಿತ ಬಂದ ಬಳಿಕ ಈ ರೀತಿಯ ಘಟನೆಗಳು ನಡೆಯುತ್ತಿವೆ. ಗೃಹಸಚಿವ ಪ್ರಿಯಾಂಕ ಖರ್ಗೆ ಇಂತಹ ಘಟನೆಗಳಿಗೆ ಬೆಂಗಾವಲಾಗಿ ನಿಂತಿದ್ದಾರೆ. ಪುತ್ತೂರಿನಲ್ಲಿ ಕೆಲ ತಿಂಗಳಿನಿಂದ ತಾಲಿಬಾನ್ ಸಂಸ್ಕೃತಿ ಜಾರಿಯಲ್ಲಿದೆ ಎಂದು ಮಾಜಿ ಸಂಸದ ನಳಿನ್ ಕುಮಾರ್ ಕಟೀಲ್ ವಾಗ್ದಾಳಿ ನಡೆಸಿದರು. ದರ್ಬೆ ಘಟನೆಯಲ್ಲಿ ಗಾಯಾಳು ಆಗಿ ಆಸ್ಪತ್ರೆಯಲ್ಲಿರುವ ಅಂಜನಾ ಪೈ ಅವರ ಯೋಗಕ್ಷೇಮ ವಿಚಾರಿಸಿದ ಬಳಿಕ ಮಾಧ್ಯಮಗಳೊಂದಿಗೆ ಅವರು ಮಾತನಾಡಿದರು.

ಅಂಗಡಿಯಲ್ಲಿ ನಡೆದ ಘಟನೆ ಬಗ್ಗೆ ಕಾನೂನು ಅಥವಾ ಪೊಲೀಸ್ ಇಲಾಖೆ ಮೂಲಕ ಬಗೆ ಹರಿಸಬಹುದಿತ್ತು. ಅದು ಬಿಟ್ಟು ಏಕಾಏಕಿ ಮಹಿಳೆಯ ಮೇಲೆ ಹಲ್ಲೆ ನಡೆಸಲಾಗಿದೆ. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ. ಈ ಘಟನೆ ಬಗ್ಗೆ ಪುತ್ತೂರಿನ ಶಾಸಕರು ಮತ್ತು ಗೃಹಸಚಿವರು ಮೌನವಾಗಿದ್ದಾರೆ. ಈ ಘಟನೆಯ ಹಿಂದೆ ಕಾಣದ ಶಕ್ತಿಗಳ ಕೈವಾಡ ಇದೆ ಎಂಬ ಸಂಶಯ ಇದೆ.

ತಾಲ್ಲೂಕಿನ ಹೊರಭಾಗದಿಂದ ಬಂದು ಗಲಾಟೆ ಮಾಡಿದ್ದಾರೆ. ಹಲ್ಲೆಗೊಳಗಾದವರ ಮೇಲೆ 307 ಸೆಕ್ಷನ್ ಅಡಿಯಲ್ಲಿ ಪ್ರಕರಣ ದಾಖಲು ಮಾಡಲಾಗಿದೆ. ಆದರೆ ಅವರ ಮೇಲೆ ಯಾವುದೇ ಕ್ರಮ ಕೈಗೊಂಡಿಲ್ಲ. ಪೊಲೀಸ್ ಇಲಾಖೆಗೆ ಒತ್ತಡ ಇತ್ತಾ ಎಂದು ಪ್ರಶ್ನಿಸಿದ ಅವರು ಒಂದು ಮತ ಒಂದು ಧರ್ಮದ ಮೇಲೆ ಕೇಸು ಮಾಡುವಂತಹ ಪ್ರಕ್ರಿಯೆ ಇಲ್ಲಿ ನಡೆದಿದೆ ಎಂದು ಆರೋಪಿಸಿದರು.

ಗೃಹಸಚಿವರಿಗೆ ಆರ್‌ಎಸ್‌ಎಸ್ ಬಗ್ಗೆ ಮಾತನಾಡುವ ದಮ್ಮು ಇದೆ. ಆದರೆ ಮತೀಯವಾದ, ತಾಲಿಬಾನ್ ಸಂಸ್ಕೃತಿ ವಿರುದ್ಧ ಯಾಕೆ ಮಾತನಾಡುವುದಿಲ್ಲ. ಹಲ್ಲೆ ಮಾಡಿದ ವ್ಯಕ್ತಿಗಳ ವಿರುದ್ಧ 307 ಪ್ರಕರಣ ದಾಖಲಿಸಬೇಕಿತ್ತು. ಆದರೆ ಇಲ್ಲಿ ಹಲ್ಲೆಗೊಳಗಾದ ವ್ಯಕ್ತಿಗಳ ವಿರುದ್ಧ ದಾಖಲಿಸಿದ್ದಾರೆ.



ಉದಯವಾಹಿನಿ ಚಿತ್ರ

> ದೇಶದಲ್ಲಿಯೇ ಮೊದಲ ಬಾರಿಗೆ ಇಂತಹ ಕಾನೂನು ತರಲಾಗಿದೆ. ಹಲ್ಲೆ ಮಾಡಿದವರ ವಿರುದ್ಧ ಪ್ರಕರಣ ದಾಖಲಿಸದಿದ್ದರೆ ಬಿಜೆಪಿ ಹೋರಾಟ ನಡೆಸಲಿದೆ. ಮುಂದೆ ಆಗಬಹುದಾದ ಘಟನೆಗಳಿಗೆ ಸರ್ಕಾರವೇ ಜವಾಬ್ದಾರಿ ಎಂದು ಎಚ್ಚರಿಸಿದರು.
> –ನಳಿನ್ ಕುಮಾರ್ ಕಟೀಲ್

# ಜಮಖಂಡಿ ಸರ್ಕಾರಿ ಬಸ್ ನಿಲ್ದಾಣದ ಎಟಿಎಂನಲ್ಲಿ ಪವರ್ ಬ್ಯಾಂಕ್ ಬ್ಲಾಸ್ಟ್

• ಉದಯವಾಹಿನಿ ಜಮಖಂಡಿ:

ಸರ್ಕಾರಿ ಸಾರಿಗೆ ಬಸ್ ನಿಲ್ದಾಣದ ಎಟಿಎಂನಲ್ಲಿ ಯುವಕನೊಬ್ಬನ ಜೇಬಿನಲ್ಲಿದ್ದ ಪವರ್ ಬ್ಯಾಂಕ್ ಏಕಾಏಕಿ ಬ್ಲಾಸ್ಟ್ ಆಗಿರುವ ಘಟನೆ ನಡೆದಿದೆ.

ಅದೃಷ್ಟವಶಾತ್ ಘಟನೆಯಲ್ಲಿ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ. ಆದರೆ ಪವರ್ ಬ್ಯಾಂಕ್ ಸ್ಫೋಟದಿಂದ ಯುವಕನ ತೊಡೆ ಭಾಗ ಹಾಗೂ ಎದೆ ಸಮೀಪ ಸುಟ್ಟ ಗಾಯಗಳಾಗಿವೆ ಎಂದು ತಿಳಿದುಬಂದಿದೆ.ಗಾಯಗೊಂಡ ಯುವಕನನ್ನು ಕುಬೇರಸಂದ್ರಿಯ ಸಿದ್ದು ಸಾಳೂಂಕೆ ಎಂದು ಗುರುತಿಸಲಾಗಿದೆ. ಘಟನೆಯ ಬಳಿಕ ಅವರನ್ನು ಚಿಕಿತ್ಸೆಗಾಗಿ ಜಮಖಂಡಿ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಮಾಹಿತಿ ಲಭ್ಯವಾಗಿದೆ.

ಎಟಿಎಂನಲ್ಲಿ ಪವರ್ ಬ್ಯಾಂಕ್ ಸ್ಫೋಟಗೊಂಡ ಘಟನೆ ಕೆಲಕಾಲ ಆತಂಕದ ವಾತಾವರಣಕ್ಕೆ ಕಾರಣವಾಗಿದ್ದು, ಘಟನೆಯ ಕುರಿತು ಹೆಚ್ಚಿನ ಮಾಹಿತಿ ನಿರೀಕ್ಷಿಸಲಾಗಿದೆ.

# ಕರಾವಳಿಯಲ್ಲಿ ಅಡಿಕೆ ರೋಗ ತಡೆಗೆ ಕೇಂದ್ರದಿಂದ ಬೆಂಬಲ ಚೌಹಾಣ್ ಭರವಸೆ

## ಉತ್ತಮ ರೀತಿಯ ಸಸಿ ನೆಡುವ ವ್ಯವಸ್ಥೆ ಅಳವಡಿಕೆ ಸೇರಿದಂತೆ ನಾನಾ ಆಯಾಗಳಲ್ಲಿ ರೋಗ ನಿಯಂತ್ರಣಕ್ಕೆ ಸಂಶೋಧನೆ ನಡೆಯುತ್ತಿದೆ

• ಉದಯವಾಹಿನಿ ಮಂಗಳೂರು

ದಕ್ಷಿಣ ಕನ್ನಡ ಸೇರಿದಂತೆ ಕರ್ನಾಟಕದ ಕರಾವಳಿ ಹಾಗೂ ಮಲೆನಾಡು ಪ್ರದೇಶಗಳಲ್ಲಿ ಅಡಿಕೆ ಬೆಳೆಗೆ ಬಾಧಿಸಿರುವ ಎಲೆಚುಕ್ಕಿಯಂತಹ ವಿವಿಧ ರೋಗಗಳ ನಿಯಂತ್ರಣಕ್ಕೆ ವೈಜ್ಞಾನಿಕ ಸಂಶೋಧನೆ, ಕ್ಷೇತ್ರ ಸಮೀಕ್ಷೆ ಹಾಗೂ ಸಮಗ್ರ ರೋಗ ನಿರ್ವಹಣಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರು ದಕ್ಷಿಣ ಕನ್ನಡ ಸಂಸದ ಕ್ಯಾ. ಬ್ರಿಜೇಶ್ ಚೌಟ ಅವರಿಗೆ ತಿಳಿಸಿದ್ದಾರೆ.

**1 : ಅಡಿಕೆಗೆ ಬಾಧಿಸುವ ಕೊಳೆರೋಗ**
**2 : ಮುಂಗಾರು ಅವಧಿಯಲ್ಲಿ ಶಿಫಾರಸು**
**3 : ಅಡಿಕೆ ಇಳುವರಿಯಲ್ಲೂ ಸುಧಾರಣೆ**

ಲೋಕಸಭೆಯಲ್ಲಿ ನಿಯಮ 377ರ ಅಡಿಯಲ್ಲಿ ಕ್ಯಾ. ಚೌಟ ಅವರು ಪ್ರಸ್ತಾಪಿಸಿರುವ ಈ ವಿಷಯಕ್ಕೆ ಉತ್ತರಿಸಿರುವ ಸಚಿವರು, ಈ ಮಾಹಿತಿ ಹಂಚಿಕೊಂಡಿದ್ದಾರೆ. ಅಡಿಕೆ ಬೆಳೆಗೆ ಬಾಧಿಸುತ್ತಿರುವ ಪ್ರಮುಖ ರೋಗಗಳ ನಿಯಂತ್ರಣಕ್ಕೆ ಕಾಸರಗೋಡಿನ ಕೇಂದ್ರ ತೋಟಗಾರಿಕಾ ಬೆಳೆಗಳ ಸಂಶೋಧನಾ ಸಂಸ್ಥೆ ಕೈಗೊಳ್ಳುತ್ತಿರುವ ವಿವಿಧ ಕ್ರಮಗಳ ಬಗ್ಗೆ ಸಚಿವರು ವಿವರಿಸಿದ್ದಾರೆ.

ಅಡಿಕೆಗೆ ಬಾಧಿಸುವ ಹಳದಿ ಎಲೆ ರೋಗ ಹಾಗೂ ಎಲೆ ಚುಕ್ಕೆ ರೋಗ ಸೇರಿದಂತೆ ವಿವಿಧ ರೋಗಗಳ ಕುರಿತು ಸಂಶೋಧನೆ ಮತ್ತು ಕ್ಷೇತ್ರ ಮಟ್ಟದ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಬೆಳ್ತಂಗಡಿ ಹಾಗೂ ಸುಳ್ಯ ಸೇರಿದಂತೆ ಏಳು ಕ್ಲಸ್ಟರ್‌ಗಳಲ್ಲಿ ಶಿಫಾರಸು ಮಾಡಲಾದ ಸಮಗ್ರ ರೋಗ ನಿರ್ವಹಣಾ ಪದ್ಧತಿಗಳ ಕ್ಷೇತ್ರ ಪ್ರಾತ್ಯಕ್ಷಿಕೆನಡೆಸಲಾಗಿದ್ದು, ಅವುಗಳನ್ನು ಅಳವಡಿಸಿಕೊಂಡ ಬಳಿಕ ರೋಗ ಬಾಧಿತ ಅಡಿಕೆ ತೋಟಗಳಲ್ಲಿ ರೋಗದ ತೀವ್ರತೆ ಕೂಡ ಗಮನಾರ್ಹವಾಗಿ ಕಡಿಮೆಯಾಗಿರುವುದು ಕಂಡುಬಂದಿದೆ ಎಂದು ಅವರು ಸಚಿವ ಚೌಹಾಣ್ ಅವರು ಹೇಳಿದ್ದಾರೆ. ಅಡಿಕೆಗೆ ಬಾಧಿಸುವ ಕೊಳೆರೋಗ ನಿಯಂತ್ರಣಕ್ಕಾಗಿ ಮುಂಗಾರು ಆರಂಭಕ್ಕೂ ಮುನ್ನ ಹಾಗೂ ಮುಂಗಾರು ಅವಧಿಯಲ್ಲಿ ಶಿಫಾರಸು ಮಾಡಲಾದ ಶಿಲೀಂಧ್ರ ನಾಶಕಗಳನ್ನು ಸೂಕ್ತ ಸಮಯದಲ್ಲಿ ಬಳಸುವ ಮುನ್ನೆಚ್ಚರಿಕಾ ಕ್ರಮಗಳನ್ನು ಅಭಿವೃದ್ಧಿಪಡಿಸಲಾಗಿದೆ. ಈ ಕ್ರಮಗಳನ್ನು ಅನುಸರಿಸಿದ ಬಳಿಕವೂ ರೋಗದ ಪ್ರಮಾಣ ಕಡಿಮೆಯಾಗುವುದರ ಜೊತೆಗೆ ಅಡಿಕೆ ಇಳುವರಿಯಲ್ಲೂ ಸುಧಾರಣೆ ಕಂಡುಬಂದಿರುವ ಬಗ್ಗೆ ಕ್ಷೇತ್ರ ಅಧ್ಯಯನಗಳಿಂದ ಗೊತ್ತಾಗಿದೆ ಎಂದು ಸಚಿವರು ತಿಳಿಸಿದ್ದಾರೆ.


ಉದಯವಾಹಿನಿ ಚಿತ್ರ



ಹಳದಿ ಎಲೆ ರೋಗದ ನಿಯಂತ್ರಣ ಹಾಗೂ ಉತ್ತಮ ರೀತಿಯ ಸಸಿ ನೆಡುವ ವ್ಯವಸ್ಥೆ ಅಳವಡಿಕೆ ಸೇರಿದಂತೆ ನಾನಾ ಆಯಾಗಳಲ್ಲಿ ರೋಗ ನಿಯಂತ್ರಣಕ್ಕೆ ಸಂಶೋಧನೆ ನಡೆಯುತ್ತಿದೆ. ರೋಗದ ಪ್ರಮಾಣ ಕಡಿಮೆ ಇರುವ ಪ್ರದೇಶಗಳ ರೈತರ ತೋಟಗಳಲ್ಲಿ ಸಮಗ್ರ ನಿರ್ವಹಣಾ ಕ್ರಮಗಳನ್ನು ಪ್ರಾತ್ಯಕ್ಷಿಕೆಯ ಮೂಲಕ ತೋರಿಸಲಾಗುತ್ತಿದ್ದು,ಇದಕ್ಕೆ ಅಡಿಕೆ ಮತ್ತು ಸಾಂಬಾರು ಬೆಳೆಗಳ ಅಭಿವೃದ್ಧಿ ನಿರ್ದೇಶನಾಲಯದ ಸಹಕಾರವನ್ನು ಕೂಡ ಪಡೆದುಕೊಳ್ಳಲಾಗಿದೆ ಎಂದರು.ದಕ್ಷಿಣ ಕನ್ನಡ ಸೇರಿದಂತೆ ಕರಾವಳಿ ಹಾಗೂ ಮಲೆನಾಡು ಭಾಗದಲ್ಲಿ ಅಡಿಕೆ ಬೆಳೆಯುವ ರೈತರ ಹಿತ ಕಾಪಾಡುವುದರ ಜೊತೆಗೆ ಅಡಿಕೆ ಕೃಷಿಯ ಉತ್ಪಾದಕತೆ ಮತ್ತು ಸುಸ್ಥಿರತೆಯನ್ನು ಹೆಚ್ಚಿಸುವ ಉದ್ದೇಶದಿಂದ ಕಾಸರಗೋಡಿನ ಸಂಸ್ಥೆಯು ಅಡಿಕೆ ಬೆಳೆಗಳನ್ನು ಬಾಧಿಸುವ ಪ್ರಮುಖ ರೋಗಗಳ ಕುರಿತು ತನ್ನ ವೈಜ್ಞಾನಿಕ ಸಂಶೋಧನೆಯನ್ನು ಮುಂದುವರಿಸಿ ಮುಂದಿನ ದಿನಗಳಲ್ಲಿಯೂ ಅಗತ್ಯ ತಾಂತ್ರಿಕ ನೆರವು ಮತ್ತು ಸಹಕಾರವನ್ನು ಒದಗಿಸಲಿದೆ ಎಂದು ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರು ಕ್ಯಾ. ಚೌಟ ಅವರಿಗೆ ನೀಡಿದ ಸುದೀರ್ಘವಾದ ಉತ್ತರದಲ್ಲಿ ಭರವಸೆ ನೀಡಿದ್ದಾರೆ.

> 2022ರ ನವೆಂಬರ್‌ನಲ್ಲಿ ರಚಿಸಲಾಗಿದ್ದ ರಾಷ್ಟ್ರೀಯ ಅಡಿಕೆ ವೈಜ್ಞಾನಿಕ ಸಮಿತಿ ಕೂಡ ಈ ಅಡಿಕೆ ರೋಗಗಳ ಬಗ್ಗೆ ಪರಿಶೀಲಿಸಿ, ಕ್ಷೇತ್ರ ಸಮೀಕ್ಷೆಗಳು, ರೈತರು ಹಾಗೂ ಸಂಬಂಧಿತ ಪಾಲುದಾರರೊಂದಿಗೆ ಸಮಾಲೋಚನೆ ಮತ್ತು ವೈಜ್ಞಾನಿಕ ಮೌಲ್ಯಮಾಪನದ ಆಧಾರದ ಮೇಲೆ ಸಮಗ್ರ ರೋಗ ನಿರ್ವಹಣಾ ಕಾರ್ಯತಂತ್ರಗಳನ್ನು ಶಿಫಾರಸು ಮಾಡಿದೆ ಎಂದು ಮಾಹಿತಿ ನೀಡಿದ್ದಾರೆ.
> –ಕೃಷಿ ಸಚಿವ ಚೌಹಾಣ್

> ಈ ಸಂಶೋಧನಾ ಸಂಸ್ಥೆಗಳು ಶಿಫಾರಸು ಮಾಡಲಾದ ಕ್ರಮಗಳನ್ನು ಸಮಗ್ರ ತೋಟಗಾರಿಕಾ ಅಭಿವೃದ್ಧಿ ಮಿಷನ್ ನಡಿಯಲ್ಲಿ ಅಡಿಕೆ ಬೆಳೆಗೆ ರೋಗ ಬಾಧಿತ ಪ್ರದೇಶಗಳಲ್ಲಿ ಪ್ರಾತ್ಯಕ್ಷಿಕೆಯ ಮೂಲಕ ಅನುಷ್ಠಾನಗೊಳಿಸಲಾಗುತ್ತಿದೆ.

> ಸಚಿವಾಲಯ ಉಲ್ಲೇಖಿಸಿರುವ ಏಳು ಕ್ಲಸ್ಟರ್‌ಗಳಲ್ಲಿ ಶಿರಸಿ, ಸಿದ್ದಾಪುರ, ಬೆಳ್ತಂಗಡಿ ಹಾಗೂ ಸುಳ್ಯ ಸೇರಿದಂತೆ ವಿವಿಧ ಪ್ರದೇಶಗಳು ಒಳಗೊಂಡಿದ್ದು, ಶಿಫಾರಸು ಮಾಡಲಾದ ಕ್ರಮಗಳನ್ನು ಅಳವಡಿಸಿಕೊಂಡ ಬಳಿಕ ರೋಗದ ತೀವ್ರತೆ ಗಣನೀಯವಾಗಿ ಕಡಿಮೆಯಾಗಿರುವುದು ಕಂಡುಬಂದಿದೆ.

## ಮಿನಿ ನ್ಯೂಸ್

# ಗುಂಡಕನಾಳ ದಾಳಿ ಖಂಡಿಸಿ ಸಚಿವ ಸತೀಶ ಜಾರಕಿಹೊಳಿಯವರಿಗೆ ಮನವಿ

• ಉದಯವಾಹಿನಿ ವಿಜಯಪುರ, :

ತಾಲ್ಲೂಕಿನ ಗುಂಡಕನಾಳ ಗ್ರಾಮದಲ್ಲಿ ವಾಲ್ಮೀಕಿ ಸಮುದಾಯದ ಮಹಿಳೆಯರು ಹಾಗೂ ಮಕ್ಕಳ ಮೇಲೆ ಆಗಸ್ಟ್ 5ರಂದು ನಡೆದ ಭೀಕರ ದಾಳಿಯನ್ನು ತೀವ್ರವಾಗಿ ಖಂಡಿಸಿರುವ ವಿವಿಧ ಸಂಘಟನೆಗಳ ಮುಖಂಡರು, ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಅವರಿಗೆ ಮನವಿ ಸಲ್ಲಿಸಿ, ಸಂತ್ರಸ್ತರಿಗೆ ನ್ಯಾಯ ಒದಗಿಸುವಂತೆ ಆಗ್ರಹಿಸಿದ್ದಾರೆ.

ಜಮಖಂಡಿ ತಾಲ್ಲೂಕಿನ ಗೋಠೆ ಗ್ರಾಮದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದ ಬಳಿ ಸತ್ಯಶೋಧಕ ಸಂಘ, ಕರ್ನಾಟಕ ಹಾಗೂ ಜಾತ್ಯತೀತ–ಬಹುತ್ವ ಕರ್ನಾಟಕ ಸಂಕಲ್ಪದ ಸರ್ವಜಾತಿ–ಸರ್ವಧರ್ಮ ಸಹೋದರತ್ವ ಸಮಾವೇಶ ‘ಬಸವ–ಭೀಮ ಸಂಗಮ’ ಕಾರ್ಯಕ್ರಮದ ವೇದಿಕೆಯಲ್ಲಿ ಸಚಿವರಿಗೆ ಮನವಿ ಸಲ್ಲಿಸಲಾಯಿತು. ಕಳೆದ ಆಗಸ್ಟ್ 5ರಂದು ಗುಂಡಕನಾಳ ಗ್ರಾಮದಲ್ಲಿ ವಾಲ್ಮೀಕಿ ಸಮುದಾಯದ ನಿವಾಸಿಗಳ ಮೇಲೆ ಕೆಲವರು ಅಕ್ರಮವಾಗಿ ಗುಂಪು ಕಟ್ಟಿಕೊಂಡು ಅಮಾನವೀಯ ಹಾಗೂ ಮಾರಣಾಂತಿಕ ದಾಳಿ ನಡೆಸಿದ್ದಾರೆ. ಘಟನೆಯಲ್ಲಿ 10ರಿಂದ 15ಕ್ಕೂ ಹೆಚ್ಚು ಮಂದಿ ತೀವ್ರವಾಗಿ ಗಾಯಗೊಂಡು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಸಂತ್ರಸ್ತ ಕುಟುಂಬಗಳಿಗೆ ತಕ್ಷಣ ನ್ಯಾಯ ಒದಗಿಸಬೇಕು ಎಂದು ಮುಖಂಡ ಗೌಡಪ್ಪ ಬಡಿಗೇರ ನೇತೃತ್ವದ ನಿಯೋಗ ಒತ್ತಾಯಿಸಿತು. ವಾಲ್ಮೀಕಿ ಸಂಘದ ರಾಜ್ಯಾಧ್ಯಕ್ಷ ಮಲ್ಲಿಕಾರ್ಜುನ ಬಟಗಿ ಮಾತನಾಡಿ, ದಾಳಿಯಿಂದ ಬಾಧಿತರಾದ ಕುಟುಂಬಗಳ ಭವಿಷ್ಯ ಹಾಗೂ ಸಾಮಾಜಿಕ ಭದ್ರತೆಯನ್ನು ಗಮನದಲ್ಲಿಟ್ಟುಕೊಂಡು ಸರ್ಕಾರ ತುರ್ತು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ದಾಳಿಯಲ್ಲಿ ತೀವ್ರವಾಗಿ ಗಾಯಗೊಂಡಿರುವ 13 ಸಂತ್ರಸ್ತರಿಗೆ ಜೀವನಾಧಾರಕ್ಕಾಗಿ ತಲಾ 25 ಲಕ್ಷ ಪರಿಹಾರ ನೀಡಬೇಕು ಹಾಗೂ ತಲಾ 5 ಎಕರೆ ಜಮೀನು ತಕ್ಷಣ ಮಂಜೂರು ಮಾಡಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ. ಅಲ್ಲದೆ, ಗುಂಡಕನಾಳ ಗ್ರಾಮದ ವಾಲ್ಮೀಕಿ ಸಮುದಾಯದ ಸುಮಾರು 80 ಕುಟುಂಬಗಳಿಗೆ ಸುರಕ್ಷಿತ ಪುನರ್ವಸತಿ ವ್ಯವಸ್ಥೆ ಕಲ್ಪಿಸಬೇಕು ಎಂದು ಆಗ್ರಹಿಸಲಾಗಿದೆ.

# ಪುತ್ತೂರಿನಲ್ಲಿ ಶಾಂತಿಸಭೆ; ಪ್ರಕರಣಗಳಲ್ಲಿ ನಿಷ್ಪಕ್ಷಪಾತ ತನಿಖೆ–ಡಿವೈಎಸ್ಪಿ ಪ್ರಮೋದ್ ಕುಮಾರ್

• ಉದಯವಾಹಿನಿ ಪುತ್ತೂರು:

ಪ್ರತಿಯೊಂದು ಹಬ್ಬಗಳೂ ಸಮಾಜದಲ್ಲಿ ಶಾಂತಿ–ಸಾಮರಸ್ಯದ ಪಾಠ ಮಾಡಬೇಕಾಗಿದೆ. ಹಾಗಾಗಿ ಹಬ್ಬಗಳ ಸಂದರ್ಭದಲ್ಲಿ ಯಾವುದೇ ಪೂರ್ವದ್ವೇಷಗಳನ್ನು ಮನಸ್ಸಲ್ಲಿ ಇಟ್ಟುಕೊಳ್ಳದೆ ಆಚರಣೆ ಮಾಡಬೇಕು. ದರ್ಬೆಯ ಘಟನೆ ಬಗ್ಗೆ ಪೊಲೀಸ್ ಇಲಾಖೆ ಪ್ರಕರಣಗಳನ್ನು ದಾಖಲಿಸಿಕೊಂಡು ನಿಷ್ಪಕ್ಷಪಾತವಾಗಿ ತನಿಖೆ ಮಾಡುತ್ತಿದೆ ಎಂದು ಪುತ್ತೂರು ಡಿವೈಎಸ್ಪಿ ಪ್ರಮೋದ್ ಕುಮಾರ್ ಹೇಳಿದರು.

ಅವರು ಸಂಜೆ ಪುತ್ತೂರು ಕೋ–ಆಪರೇಟಿವ್ ಟೌನ್ ಬ್ಯಾಂಕ್ ಸಭಾಂಗಣದಲ್ಲಿ ಪುತ್ತೂರು ತಾಲ್ಲೂಕು ಆಡಳಿತ ಹಾಗೂ ಪೊಲೀಸ್ ಇಲಾಖೆಯ ವತಿಯಿಂದ ನಡೆದ ಶಾಂತಿಸಭೆಯಲ್ಲಿ ಮಾತನಾಡಿದರು. ಹಬ್ಬದ ವಿಚಾರಕ್ಕೆ ಸಂಬಂಧಿಸಿ ಈಗಾಗಲೇ ಪ್ರತಿ ಠಾಣಾ ಮಟ್ಟದಲ್ಲೂ ಶಾಂತಿ ಸಭೆಗಳು ನಡೆದಿದ್ದು, ಆದರೆ ಕಳೆದೆರಡು ದಿನಗಳ ಹಿಂದೆ ದರ್ಬೆಯಲ್ಲಿ ನಡೆದ ಅಹಿತಕರ ಘಟನೆಯ ಹಿನ್ನೆಲೆಯಲ್ಲಿ ಎಸ್ಪಿಯವರ ಸೂಚನೆಯಂತೆ ಈಗ ಮತ್ತೊಂದು ಸಭೆಯನ್ನು ನಡೆಸಿ ಪ್ರತಿಯೊಬ್ಬರ ಅಭಿಪ್ರಾಯಗಳನ್ನು ಪಡೆದಿದ್ದೇವೆ. ದರ್ಬೆ ಘಟನೆಯ ಪ್ರಕರಣ ತನಿಖಾ ಹಂತದಲ್ಲಿದ್ದು, ತನಿಖೆ ಬಹಳ ಪಾರದರ್ಶಕವಾಗಿ ಸಾಗುತ್ತಿದೆ. ಎಲ್ಲಾ ವಿಚಾರಗಳ ಕುರಿತು ಮಾಹಿತಿ ಪಡೆದುಕೊಂಡು ನಾವು ನ್ಯಾಯಾಲಯಕ್ಕೆ ವರದಿಯನ್ನು ಸಲ್ಲಿಕೆ ಮಾಡುತ್ತೇವೆ. ತಪ್ಪು ಮಾಡಿದವರು ಅದರ ಫಲವನ್ನು ಅನುಭವಿಸುತ್ತಾರೆ.

ಎಲ್ಲರೂ ಕೂಡ ಇತಿಮಿತಿಗಳನ್ನು ಅರಿತುಕೊಂಡು ಈ ನೆಲದ ಕಾನೂನನ್ನು ತಿಳಿದುಕೊಂಡು, ಅದರ ಮೇಲೆ ನಂಬಿಕೆ ಇಡಬೇಕಾಗುತ್ತದೆ. ಹಬ್ಬಗಳ ಆಚರಣೆಗೆ ಕಾನೂನು ಪ್ರಕಾರ ಇಲಾಖೆಗಳು ಅನುಮತಿ ನೀಡುತ್ತದೆ ಎಂದರು. ಪುತ್ತೂರು ಸಹಾಯಕ ಕಮೀಷನರ್ ಸ್ಟೆಲ್ಲಾ ವರ್ಗೀಸ್ ಮಾತನಾಡಿ, ಪ್ರತಿ ಧರ್ಮಗಳ ಹಬ್ಬದ ಸಂದೇಶ ಜಗತ್ತಿನ ಒಳಿತಾಗಿದ್ದು, ಅಂತಹ ಹಬ್ಬಗಳನ್ನು ಆಚರಣೆ ಮಾಡುವ ಸಂದರ್ಭದಲ್ಲಿ ಇನ್ನೊಬ್ಬರಿಗೆ ತೊಂದರೆ ಆಗದ ರೀತಿ ಆಚರಿಸಬೇಕು.

# ಹಂಪಿ ಪ್ರವಾಸಕ್ಕೆ ಬಂದ ಆಂಧ್ರದ ಇಬ್ಬರು ಮಹಿಳೆಯರು ನೀರುಪಾಲು:

• ಉದಯವಾಹಿನಿ ವಿಜಯನಗರ:

ಹಂಪಿಯ ವಿರೂಪಾಕ್ಷ ದೇವಸ್ಥಾನದ ಸಮೀಪದ ಸ್ನಾನ ಘಟ್ಟದಲ್ಲಿ ಬೆಳಗ್ಗೆ ಸ್ನಾನ ಮಾಡುವಾಗ ನೀರಲ್ಲಿ ಕೊಚ್ಚಿಕೊಂಡು ಹೋಗಿದ್ದ ಯಾಸ್ಮೀನ್ (17) ಅವರ ಮೃತದೇಹ ಘಟನಾ ಸ್ಥಳದಿಂದ ಸುಮಾರು ಒಂದು ಕಿಲೋಮೀಟರ್ ದೂರದ ಚಕ್ರತೀರ್ಥದಲ್ಲಿ ಭಾನುವಾರ ಸಂಜೆ ಪತ್ತೆಯಾಗಿದೆ. ದಾವಣಗೆರೆಯಿಂದ ಬಂದಿದ್ದ 11 ಮಂದಿಯ ಎಸ್‌ಡಿಆರ್‌ಎಫ್ ತಂಡ, ಹೊಸಪೇಟೆಯ ಅಗ್ನಿಶಾಮಕ ಸಿಬ್ಬಂದಿ ಹಾಗೂ ಸ್ಥಳೀಯ ಈಜುಗಾರರು ಬೆಳಗ್ಗೆಯಿಂದಲೇ ತೆಪ್ಪ, ದೋಣಿಗಳ ಸಹಾಯದಿಂದ ಹುಡುಕಾಟ ನಡೆಸಿದ್ದರು. ಸಂಜೆ ಚಕ್ರತೀರ್ಥದಲ್ಲಿ ಶವ ಪತ್ತೆಯಾಯಿತು ಎಂದು ಪೊಲೀಸರು ತಿಳಿಸಿದ್ದಾರೆ.

**ಇಬ್ಬರು ನೀರುಪಾಲು:** ಆಂಧ್ರಪ್ರದೇಶದ ಕರ್ನೂಲ್ ಜಿಲ್ಲೆಯ ಕೌತಳದ 12 ಮಂದಿಯ ಕುಟುಂಬ ಸದಸ್ಯರು ಕ್ರೂಸರ್ ವಾಹನದಲ್ಲಿ ಸಂಜೆ ಹಂಪಿಗೆ ಪ್ರವಾಸ ಬಂದಿದ್ದರು. ರಾತ್ರಿ ವಿರೂಪಾಕ್ಷ ದೇವಸ್ಥಾನದ ಸಮೀಪದಲ್ಲೇ ತಂಗಿ ಬೆಳಗ್ಗೆ ಅಡುಗೆ ಮಾಡಿಕೊಂಡಿದ್ದರು. ಸ್ನಾನ ಮಾಡಲು ಸ್ನಾನಘಟ್ಟದಲ್ಲಿ ನೀರಿಗೆ ಇಳಿದಿದ್ದಾಗ ಯಾಸ್ಮೀನ್ ಜಾರುವ ಕಲ್ಲಿಗೆ ಕಾಲಿಟ್ಟು ನೀರುಪಾಲಾಗಿದ್ದರು.

ಅವರನ್ನು ರಕ್ಷಿಸಲು ಯತ್ನಿಸಿದ್ದ ಅವರ ತಾಯಿ ಶಾಹೀನ್ ಸಹ ನೀರುಪಾಲಾಗಿದ್ದರು. ತೀವ್ರ ಹುಡುಕಾಟದ ಬಳಿಕ 200 ಮೀಟರ್ ಅಂತರದಲ್ಲಿ ಜನತಾ ಪ್ಲಾಟ್ ಬಳಿ ಶಾಹೀನ್ ಅವರ ಮೃತದೇಹ ಶನಿವಾರ ಸಂಜೆ ಪತ್ತೆಯಾಗಿತ್ತು. ಆದರೆ ಯಾಸ್ಮೀನ್ ಪತ್ತೆಯಾಗಿರಲಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ.

# ವಸತಿ ಶಾಲೆಯಲ್ಲಿ ವಿದ್ಯಾರ್ಥಿ ಅನುಮಾನಾಸ್ಪದ ಸಾವು

• ಉದಯವಾಹಿನಿ ಚಿಕ್ಕೋಡಿ:

ಬೆಳಗಾವಿ ಜಿಲ್ಲೆಯ ರಾಯಭಾಗ ತಾಲ್ಲೂಕಿನ ಸುಟ್ಟಟ್ಟಿ ಗ್ರಾಮದಲ್ಲಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ 15 ವರ್ಷದ ವಿದ್ಯಾರ್ಥಿಯೊಬ್ಬ ಅನುಮಾನಾಸ್ಪದ ರೀತಿಯಲ್ಲಿ ಮೃತಪಟ್ಟಿರುವ ಘಟನೆ ನಡೆದಿದೆ.

ಮೃತಪಟ್ಟ ಬಾಲಕನನ್ನು ಗೌತಮ್ ಭಜಂತ್ರಿ ಎಂದು ಗುರುತಿಸಲಾಗಿದೆ. ವಸತಿ ಶಾಲೆಯ ಕೊಠಡಿಯೊಂದರ ಕಿಟಕಿಗೆ ನೇಣು ಬಿಗಿದ ಸ್ಥಿತಿಯಲ್ಲಿ ಮೃತದೇಹ ಪತ್ತೆಯಾಗಿದೆ. ವಸತಿ ಶಾಲೆಯ ಸಿಬ್ಬಂದಿ ತಕ್ಷಣವೇ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ.

ಬಾಲಕನ ಸಾವಿನ ಸುದ್ದಿ ತಿಳಿಯುತ್ತಿದ್ದಂತೆ ಪೋಷಕರು ಶಾಲೆಗೆ ಧಾವಿಸಿದ್ದಾರೆ. ಘಟನೆಯ ಕುರಿತು ಬಾಲಕನ ತಾಯಿ ಲಕ್ಷ್ಮೀಬಾಯಿ ಭಜಂತ್ರಿ ಅವರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದು, ಇದು ಆತ್ಮಹತ್ಯೆಯಲ್ಲ, ಕೊಲೆ ಎಂದು ಗಂಭೀರ ಆರೋಪ ಮಾಡಿದ್ದಾರೆ. ಬೆಳಗಾವಿ ಜಿಲ್ಲೆಯ ಸಮಾಜದ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ರಾಮನಗೌಡ ಕನ್ನೊಳ್ಳಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

